


Volume : 9 | Issue : 144 | August : 21 : 2026 : Friday
ಸಂಪುಟ : 9 | ಸಂಚಿಕೆ : 144 | ಆಗಸ್ಟ್ : 21 : 2026 : ಶುಕ್ರವಾರ

www.VIKRAMAVAHINI.com

ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ


# ವಿಕ್ರಮ ವಾಹಿನಿ


ಪುಟ 4 ₹2 || ಕನ್ನಡ ದಿನಪತ್ರಿಕೆ ||

VIKRAMA VAHINI
PRGI NO: KARKAN/2018/78481




ಚಿತ್ರರಂಗಕ್ಕೆ 10 ವರ್ಷ: ಅಭಿಮಾನಿಗಳೊಂದಿಗೆ ಕೇಕ್ ಕತ್ತರಿಸಿ ಸಂಭ್ರಮಿಸಿದ ಆಶಿಕಾ ರಂಗನಾಥ್. ಅಭಿಮಾನಿಗಳ ಸನ್ಮಾನ ಹಾಗೂ ಅನ್ನದಾನದ ಮೂಲಕ ನಟಿಯ ದಶಕದ ಪಯಣಕ್ಕೆ ವಿಶೇಷ ಮೆರುಗು ತಂದರು.

‘543 ಲೋಕಸಭಾ ಸ್ಥಾನ ಉಳಿಸಿ’ | ಪುಟ 2

ರಾಜೀವ್ ಗಾಂಧಿ ದೂರದೃಷ್ಟಿಯ ಮಹಾನ್ ನಾಯಕ: ಸಿಎಂ | ಪುಟ 4

■ ಸುದ್ದಿ ಚುಟುಕು

## ನೀಟ್ ಪ್ರತಿಭಟನೆ: ಪೊಲೀಸ್ ದೌರ್ಜನ್ಯ ತನಿಖೆಗೆ ಸುಪ್ರೀಂ ಸಮಿತಿ

● ವಿಕ್ರಮ ವಾಹಿನಿ । ನವದೆಹಲಿ

ನೀಟ್ ಪ್ರತಿಭಟನೆ ವೇಳೆ ವಿದ್ಯಾರ್ಥಿಗಳು ಹಾಗೂ ಪ್ರತಿಭಟನಾಕಾರರ ಮೇಲೆ ಪೊಲೀಸರು ನಡೆಸಿದ್ದಾರೆ ಎನ್ನಲಾದ ದೌರ್ಜನ್ಯ, ಗಾಯಗಳು ಮತ್ತು ಪೊಲೀಸ್ ಸಿಬ್ಬಂದಿ ಮೇಲಿನ ಹಲ್ಲೆ ಕುರಿತು ತನಿಖೆ ನಡೆಸಲು ಸುಪ್ರೀಂ ಕೋರ್ಟ್ ಐವರು ಸದಸ್ಯರ ಉನ್ನತ ಮಟ್ಟದ ಸಮಿತಿ ರಚಿಸಿದೆ.

ನಿವೃತ್ತ ನ್ಯಾಯಮೂರ್ತಿ ಆರ್. ಸುಭಾಷ್ ರೆಡ್ಡಿ ನೇತೃತ್ವದ ಸಮಿತಿಯಲ್ಲಿ ಮಾಜಿ ನ್ಯಾಯಮೂರ್ತಿಗಳಾದ ರವಿ ಶಂಕರ್ ಝಾ, ಶಾಲಿಂದರ್ ಕೌರ್, ಸಿಬಿಐ ಮಾಜಿ ನಿರ್ದೇಶಕ ರಿಷಿ ಕುಮಾರ್ ಶುಕ್ಲಾ ಹಾಗೂ ಮೇಘಾಲಯದ ನಿವೃತ್ತ ಡಿಜಿಪಿ ಎಲ್.ಆರ್. ಬಿಷ್ಣೋಯಿ ಇದ್ದಾರೆ.

ಪೊಲೀಸ್ ಕ್ರಮದಲ್ಲಿ ಕಾನೂನು ಉಲ್ಲಂಘನೆಯಾಗಿದೆಯೇ, ಮಿತಿಮೀರಿದ ಕ್ರಮಕ್ಕೆ ಆದೇಶ ನೀಡಿದವರು ಯಾರು ಎಂಬುದನ್ನು ಪರಿಶೀಲಿಸುವಂತೆ ಕೋರ್ಟ್ ಸೂಚಿಸಿದೆ. ಸಮಿತಿಯು ನಿರಂತರ ತನಿಖೆ ನಡೆಸಿ ಕಾಲಕಾಲಕ್ಕೆ ಮಧ್ಯಂತರ ವರದಿ ಸಲ್ಲಿಸಬೇಕು ಎಂದು ನ್ಯಾಯಾಲಯ ನಿರ್ದೇಶಿಸಿದೆ.


ಜುಲೈ 20ರಂದು ದೆಹಲಿಯಲ್ಲಿ ನಡೆದ ‘ಸಂಸತ್ ಚಲೋ’ ವೇಳೆ ಪ್ರತಿಭಟನಾಕಾರರು ಹಾಗೂ ಭದ್ರತಾ ಸಿಬ್ಬಂದಿ ನಡುವೆ ಘರ್ಷಣೆ ನಡೆದಿತ್ತು. ಪ್ರತಿಭಟನಾಕಾರರನ್ನು ಚದುರಿಸಲು ಪೊಲೀಸರು ಲಾಠಿ ಹಾಗೂ ಅಶ್ರುವಾಯು ಬಳಸಿದ್ದ ಹಿನ್ನೆಲೆಯಲ್ಲಿ ಪೊಲೀಸ್ ಕ್ರಮದ ಕುರಿತು ಹಲವು ಆರೋಪಗಳು ಕೇಳಿಬಂದಿದ್ದವು.

ಪ್ರತಿಭಟನಾಕಾರರಿಗೆ ಉಂಟಾದ ಗಾಯಗಳು ಹಾಗೂ ಹಾನಿಯ ಪ್ರಮಾಣವನ್ನು ಸಮಿತಿ ಪರಿಶೀಲಿಸಲಿದೆ. ಅಲ್ಲದೆ, ಪೊಲೀಸ್ ಅಥವಾ ಭದ್ರತಾ ಸಿಬ್ಬಂದಿಯಿಂದ ನಿಯಮ ಮೀರಿದ ಕ್ರಮ ನಡೆದಿದೆಯೇ ಎಂಬುದನ್ನು ಪರಿಶೀಲಿಸಿ, ಅಗತ್ಯ ಶಿಫಾರಸುಗಳನ್ನು ನ್ಯಾಯಾಲಯಕ್ಕೆ ಸಲ್ಲಿಸಲಿದೆ.

## 6ನೇ ತರಗತಿಗೆ ವಿನಾಯಿತಿ ಪರಿಶೀಲನೆಗೆ ಸೂಚನೆ

● ವಿಕ್ರಮ ವಾಹಿನಿ । ನವದೆಹಲಿ

ಸಿಬಿಎಸ್‌ಇಯ ತ್ರಿಭಾಷಾ ನೀತಿಯನ್ನು ಮರುಪರಿಶೀಲಿಸುವಂತೆ ಕೇಂದ್ರ ಸರ್ಕಾರ, ಎನ್‌ಸಿಇಆರ್‌ಟಿ ಹಾಗೂ ಸಿಬಿಎಸ್‌ಇಗೆ ಸುಪ್ರೀಂ ಕೋರ್ಟ್ ಸೂಚಿಸಿದೆ. ಪ್ರಸಕ್ತ ಶೈಕ್ಷಣಿಕ ಸಾಲಿನ 6ನೇ ತರಗತಿ ವಿದ್ಯಾರ್ಥಿಗಳಿಗೆ ಹೊಸ ನಿಯಮದಿಂದ ವಿನಾಯಿತಿ ನೀಡುವ ಸಾಧ್ಯತೆಯನ್ನು ಪರಿಶೀಲಿಸುವಂತೆಯೂ ನ್ಯಾಯಾಲಯ ಸಲಹೆ ನೀಡಿದೆ.



ಶಿಕ್ಷಣ, ಆಡಳಿತ ಹಾಗೂ ಸಾರ್ವಜನಿಕ ಜೀವನದಲ್ಲಿ ಪ್ರಮುಖ ಪಾತ್ರ ಹೊಂದಿರುವ ಇಂಗ್ಲಿಷ್‌ನ್ನು ‘ಅನ್ಯ ಭಾಷೆ’ ಎಂದು ಪರಿಗಣಿಸಿರುವ ಸಿಬಿಎಸ್‌ಇ ನೀತಿಗೆ ನ್ಯಾಯಾಲಯ ಅಸಮಾಧಾನ ವ್ಯಕ್ತಪಡಿಸಿತು. ಇಂತಹ ವರ್ಗೀಕರಣದ ಪ್ರಾಯೋಗಿಕತೆಯನ್ನು ಪ್ರಶ್ನಿಸಿದ ನ್ಯಾಯಪೀಠ, ಭಾಷಾ ನೀತಿ ರೂಪಿಸುವಾಗ ದೇಶದ ಪ್ರಸ್ತುತ ಶೈಕ್ಷಣಿಕ ಹಾಗೂ ಸಾಮಾಜಿಕ ವಾಸ್ತವಾಂಶಗಳನ್ನು ಪರಿಗಣಿಸುವಂತೆ ಸೂಚಿಸಿತು.

ಮೂರನೇ ಭಾಷೆಯನ್ನು ಕಡ್ಡಾಯಗೊಳಿಸುವ ಮೊದಲು ಅರ್ಹ ಶಿಕ್ಷಕರು ಮತ್ತು ಗುಣಮಟ್ಟದ ಪಠ್ಯಪುಸ್ತಕಗಳು ಲಭ್ಯವಿದೆಯೇ ಎಂಬುದನ್ನು ಖಚಿತಪಡಿಸಿಕೊಳ್ಳಬೇಕು ಎಂದು ಕೋರ್ಟ್ ತಿಳಿಸಿತು.

ಏಕಾಏಕಿ ನಿಯಮ ಜಾರಿಗೊಳಿಸುವುದರಿಂದ ವಿದ್ಯಾರ್ಥಿಗಳ ಮೇಲೆ ಶೈಕ್ಷಣಿಕ ಒತ್ತಡ ಉಂಟಾಗದಂತೆ ಎಚ್ಚರಿಕೆ ವಹಿಸಬೇಕು ಎಂದು ಸೂಚಿಸಿದೆ.

ವಿದ್ಯಾರ್ಥಿಗಳ ವಯಸ್ಸು, ಶೈಕ್ಷಣಿಕ ಹೊರೆ ಹಾಗೂ ಭಾಷಾ ಆಯ್ಕೆಗಳನ್ನು ಪರಿಗಣಿಸಿ ತ್ರಿಭಾಷಾ ನೀತಿಯನ್ನು ಪ್ರಾಯೋಗಿಕವಾಗಿ ಜಾರಿಗೊಳಿಸುವ ಅಗತ್ಯವಿದೆ ಎಂದು ನ್ಯಾಯಾಲಯ ಅಭಿಪ್ರಾಯಪಟ್ಟಿದೆ.

# ಅಧಿಕಾರಿ ಮನೆಯಲ್ಲಿ ಕೋಟಿ ಕೋಟಿ ಆಸ್ತಿ!

**ಬೆಂಗಳೂರಿನ ವಿಶೇಷ ಭೂಸ್ವಾಧೀನಾಧಿಕಾರಿ ಮಲ್ಲಿಕಾರ್ಜುನ ಬಿ. ಅವರ 11 ಸ್ಥಳಗಳ ಮೇಲೆ ನಡೆದ ದಾಳಿಯಲ್ಲಿ ರೂ 18.33 ಕೋಟಿ ಮೌಲ್ಯದ ಆಸ್ತಿ, ರೂ 2.53 ಕೋಟಿ ನಗದು ಹಾಗೂ 100 ಎಕರೆಗೂ ಅಧಿಕ ಕೃಷಿ ಜಮೀನು ಪತ್ತೆಯಾಗಿದೆ. ಆದಾಯಕ್ಕಿಂತ ಹೆಚ್ಚು ಆಸ್ತಿ ಗಳಿಕೆ ಆರೋಪದಡಿ ತನಿಖೆ ಮುಂದುವರಿದಿದೆ.**

ಅಕ್ರಮ ಆಸ್ತಿ ಬಯಲು

**ಆದಾಯಕ್ಕಿಂತ ಹೆಚ್ಚು ಆಸ್ತಿ ಗಳಿಕೆ ಆರೋಪದ ಹಿನ್ನೆಲೆಯಲ್ಲಿ ಬೆಂಗಳೂರಿನ ವಿಶೇಷ ಭೂಸ್ವಾಧೀನಾಧಿಕಾರಿ ಮಲ್ಲಿಕಾರ್ಜುನ ಬಿ. ಅವರಿಗೆ ಸೇರಿದ 11 ಸ್ಥಳಗಳ ಮೇಲೆ ಲೋಕಾಯುಕ್ತ ಅಧಿಕಾರಿಗಳು ಏಕಕಾಲದಲ್ಲಿ ದಾಳಿ ನಡೆಸಿದ್ದಾರೆ. ದಾಳಿ ವೇಳೆ ರೂ 18.33 ಕೋಟಿ ಮೌಲ್ಯದ ಸ್ಥಿರ ಮತ್ತು ಚರಾಸ್ತಿ ಪತ್ತೆಯಾಗಿದ್ದು, ರೂ 2.53 ಕೋಟಿ ನಗದು, ರೂ 3.10 ಲಕ್ಷ ಮೌಲ್ಯದ ಚಿನ್ನಾಭರಣ, ರೂ 1 ಕೋಟಿ ಬ್ಯಾಂಕ್ ಠೇವಣಿ ಹಾಗೂ ರೂ 15 ಲಕ್ಷ ಮೌಲ್ಯದ ವಾಹನಗಳು ಪತ್ತೆಯಾಗಿವೆ. ಜತೆಗೆ 100 ಎಕರೆ 5 ಗುಂಟೆ ಕೃಷಿ ಜಮೀನು ಹಾಗೂ ಎರಡು ಐಷಾರಾಮಿ ಮನೆಗಳಿರುವುದು ಬೆಳಕಿಗೆ ಬಂದಿದೆ.**

● ವಿಕ್ರಮ ವಾಹಿನಿ । ಬೆಂಗಳೂರು

ಆದಾಯಕ್ಕಿಂತ ಹೆಚ್ಚು ಆಸ್ತಿ ಗಳಿಸಿದ ಆರೋಪದ ಹಿನ್ನೆಲೆಯಲ್ಲಿ ಬೆಂಗಳೂರಿನ ವಿಶೇಷ ಭೂಸ್ವಾಧೀನಾಧಿಕಾರಿ ಮಲ್ಲಿಕಾರ್ಜುನ ಬಿ. ಅವರಿಗೆ ಸೇರಿದ 11 ಸ್ಥಳಗಳ ಮೇಲೆ ಲೋಕಾಯುಕ್ತ ಪೊಲೀಸರು ಗುರುವಾರ ಏಕಕಾಲದಲ್ಲಿ ದಾಳಿ ನಡೆಸಿದ್ದಾರೆ. ದಾಳಿಯ ವೇಳೆ ಒಟ್ಟು ರೂ 18.33 ಕೋಟಿ ಮೌಲ್ಯದ ಸ್ಥಿರ ಮತ್ತು ಚರಾಸ್ತಿ ಪತ್ತೆಯಾಗಿದ್ದು, ಇದರಲ್ಲಿ ಸುಮಾರು ರೂ 12.95 ಕೋಟಿ ಅಕ್ರಮ ಆಸ್ತಿ ಎಂದು ಅಂದಾಜಿಸಲಾಗಿದೆ.

ಬೆಂಗಳೂರು ನಗರದ ಸುಬ್ರಹ್ಮಣ್ಯನಗರ, ಗುಡ್ಡದಹಳ್ಳಿ, ಹೆಬ್ಬಾಳ ಸೇರಿದಂತೆ ವಿವಿಧೆಡೆ ಅಧಿಕಾರಿಗೆ ಸೇರಿದ ನಿವಾಸ, ಕಚೇರಿ ಹಾಗೂ ಇತರ ಸ್ಥಳಗಳಲ್ಲಿ ಲೋಕಾಯುಕ್ತ ಅಧಿಕಾರಿಗಳು ಶೋಧ ನಡೆಸಿದರು. ಬೆಳಗ್ಗೆಯಿಂದಲೇ ನಡೆದ ಕಾರ್ಯಾಚರಣೆಯಲ್ಲಿ ಆಸ್ತಿ, ಬ್ಯಾಂಕ್ ಖಾತೆಗಳು, ದಾಖಲೆಗಳು ಹಾಗೂ ಹಣಕಾಸು ವ್ಯವಹಾರಗಳಿಗೆ ಸಂಬಂಧಿಸಿದ ದಾಖಲೆಗಳನ್ನು ಪರಿಶೀಲಿಸಲಾಯಿತು.

**ರೂ 2.53 ಕೋಟಿ ನಗದು ಪತ್ತೆ**

ದಾಳಿ ವೇಳೆ ಬರೋಬ್ಬರಿ ರೂ 2.53 ಕೋಟಿ ನಗದು ಪತ್ತೆಯಾಗಿದೆ. ಇದರ ಜೊತೆಗೆ ಸುಮಾರು ರೂ 3.10 ಲಕ್ಷ ಮೌಲ್ಯದ ಚಿನ್ನಾಭರಣ, ರೂ 15 ಲಕ್ಷ ಮೌಲ್ಯದ ಐಷಾರಾಮಿ ವಾಹನಗಳು ಹಾಗೂ ಬ್ಯಾಂಕ್ ಖಾತೆಗಳಲ್ಲಿ ಸುಮಾರು ರೂ 1 ಕೋಟಿ ಹಣ ಇರುವುದು ಪತ್ತೆಯಾಗಿದೆ. ಮನೆಯ ಗೃಹೋಪಯೋಗಿ ವಸ್ತುಗಳ ಮೌಲ್ಯ ಸುಮಾರು ರೂ 33.40 ಲಕ್ಷ ಎಂದು ಲೋಕಾಯುಕ್ತ ಅಧಿಕಾರಿಗಳು ತಿಳಿಸಿದ್ದಾರೆ.

**100 ಎಕರೆಗೂ ಹೆಚ್ಚು ಕೃಷಿ ಜಮೀನು**

ಮಲ್ಲಿಕಾರ್ಜುನ ಅವರಿಗೆ ಸೇರಿದ ಸ್ಥಿರಾಸ್ತಿಗಳ ಪರಿಶೀಲನೆ ವೇಳೆ 100 ಎಕರೆ 5 ಗುಂಟೆ ಕೃಷಿ ಜಮೀನು ಪತ್ತೆಯಾಗಿದೆ. ಈ ಕೃಷಿ ಭೂಮಿಯ ಅಂದಾಜು ಮೌಲ್ಯವೇ ಸುಮಾರು ರೂ 14.28 ಕೋಟಿ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಇದರೊಂದಿಗೆ ಎರಡು ಐಷಾರಾಮಿ ಮನೆಗಳಿರುವುದೂ ಪತ್ತೆಯಾಗಿದೆ.

ಸ್ಥಿರಾಸ್ತಿ ಮತ್ತು ಚರಾಸ್ತಿಗಳನ್ನು ಸೇರಿಸಿದಾಗ ಒಟ್ಟು ಆಸ್ತಿ ಮೌಲ್ಯ ರೂ 18.33 ಕೋಟಿಯಷ್ಟಿದೆ. ಕಾನೂನುಬದ್ಧ ಆದಾಯಕ್ಕೆ ಹೋಲಿಸಿದರೆ ಈ ಆಸ್ತಿ ಪ್ರಮಾಣದಲ್ಲಿ ಭಾರಿ ವ್ಯತ್ಯಾಸ ಕಂಡುಬಂದಿರುವ ಹಿನ್ನೆಲೆಯಲ್ಲಿ ಲೋಕಾಯುಕ್ತ ಅಧಿಕಾರಿಗಳು ಅಕ್ರಮ ಆಸ್ತಿ ಗಳಿಕೆ ಕುರಿತು ತನಿಖೆ ಮುಂದುವರಿಸಿದ್ದಾರೆ.

**ಭ್ರಷ್ಟಾಚಾರ ನಿಗ್ರಹ ಕಾಯ್ದೆಯಡಿ ಪ್ರಕರಣ**

ಆದಾಯದ ಮೂಲ, ಆಸ್ತಿ ಖರೀದಿಗೆ ಬಳಸಿದ ಹಣ ಹಾಗೂ ಬ್ಯಾಂಕ್ ವ್ಯವಹಾರಗಳ ಕುರಿತು ದಾಖಲೆಗಳನ್ನು ಪರಿಶೀಲಿಸಲಾಗುತ್ತಿದೆ. ಸರ್ಕಾರಿ ಸೇವೆಯಲ್ಲಿರುವ ಅವಧಿಯಲ್ಲಿ ಇಷ್ಟೊಂದು ಪ್ರಮಾಣದ ಆಸ್ತಿ ಹೇಗೆ ಸಂಗ್ರಹವಾಗಿದೆ ಎಂಬುದರ ಬಗ್ಗೆಯೂ ತನಿಖೆ ನಡೆಯುತ್ತಿದೆ.

ಈ ಸಂಬಂಧ ಭ್ರಷ್ಟಾಚಾರ ನಿಗ್ರಹ ಕಾಯ್ದೆಯಡಿ ಬೆಂಗಳೂರು ನಗರ ಲೋಕಾಯುಕ್ತ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ದಾಳಿಯ ವೇಳೆ ವಶಪಡಿಸಿಕೊಂಡ ದಾಖಲೆಗಳು ಮತ್ತು ಇತರ ಮಾಹಿತಿಯನ್ನು ಪರಿಶೀಲಿಸಿದ ಬಳಿಕ ಅಕ್ರಮ ಆಸ್ತಿಯ ನಿಖರ ಪ್ರಮಾಣವನ್ನು ಅಂತಿಮಗೊಳಿಸಲಾಗುವುದು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಈ ದಾಳಿಯ ವೇಳೆ ಪತ್ತೆಯಾದ ಆಸ್ತಿ, ನಗದು ಹಾಗೂ ಇತರೆ ವಸ್ತುಗಳ ದಾಖಲೆಗಳನ್ನು ಲೋಕಾಯುಕ್ತ ಅಧಿಕಾರಿಗಳು ಪರಿಶೀಲಿಸುತ್ತಿದ್ದು, ಆಸ್ತಿಗಳ ಖರೀದಿ ಮತ್ತು ಹಣದ ಮೂಲದ ಕುರಿತು ಮಾಹಿತಿ ಕಲೆಹಾಕುತ್ತಿದ್ದಾರೆ. ಅಧಿಕಾರಿಯ ಕಾನೂನುಬದ್ಧ ಆದಾಯ, ಸೇವಾವಧಿ ಹಾಗೂ ಘೋಷಿತ ಆಸ್ತಿಗಳೊಂದಿಗೆ ಪತ್ತೆಯಾದ ಸಂಪತ್ತನ್ನು ಹೋಲಿಕೆ ಮಾಡಿ ಮುಂದಿನ ತನಿಖೆ ನಡೆಸಲಾಗುತ್ತಿದೆ.

ಲೋಕಾಯುಕ್ತ ಅಧಿಕಾರಿಗಳ ಪ್ರಕಾರ, ಪತ್ತೆಯಾಗಿರುವ ಆಸ್ತಿಗಳ ನೈಜ ಮೌಲ್ಯ ಹಾಗೂ ಅಕ್ರಮ ಆಸ್ತಿಯ ಪ್ರಮಾಣದ ಕುರಿತು ಹೆಚ್ಚಿನ ಪರಿಶೀಲನೆಯ ಬಳಿಕ ಸ್ಪಷ್ಟ ಚಿತ್ರಣ ಸಿಗಲಿದೆ. ದಾಳಿಯಲ್ಲಿ ದೊರೆತ ದಾಖಲೆಗಳು ಹಾಗೂ ಇತರೆ ಸಾಕ್ಷ್ಯಗಳ ಆಧಾರದ ಮೇಲೆ ಪ್ರಕರಣದ ತನಿಖೆ ಮುಂದುವರಿದಿದೆ.

## ರೂ 500 ಕೋಟಿ ಭೂ ಹಗರಣ: ಲೋಕಾಯುಕ್ತ ದಾಳಿಯಲ್ಲಿ ಬಯಲಾಯ್ತು

● ವಿಕ್ರಮ ವಾಹಿನಿ । ಬೆಂಗಳೂರು

ಸರ್ಕಾರಿ ಸಾಫ್ಟ್‌ವೇರ್ ಹಾಗೂ ಡಿಜಿಟಲ್ ಸಹಿ ದುರ್ಬಳಕೆ ಮಾಡಿಕೊಂಡು ಬರೋಬ್ಬರಿ 500 ಕೋಟಿ ರೂಪಾಯಿ ಮೌಲ್ಯದ 62.20 ಎಕರೆ ಖಾಸಗಿ ಜಮೀನನ್ನು ಅಕ್ರಮವಾಗಿ ಖಾತೆ ವರ್ಗಾವಣೆ ಮಾಡಿರುವ ಬೃಹತ್ ಹಗರಣವನ್ನು ಕರ್ನಾಟಕ ಲೋಕಾಯುಕ್ತ ಸಂಸ್ಥೆ ಭೇದಿಸಿದೆ.

ಗೌರವಾನ್ವಿತ ಉಪಲೋಕಾಯುಕ್ತರಾದ ನ್ಯಾಯಮೂರ್ತಿ ಬಿ. ವೀರಪ್ಪ ರವರು ಈ ಗಂಭೀರ ಪ್ರಕರಣವನ್ನು ಸ್ವಯಂಪ್ರೇರಿತವಾಗಿ (COMPT/UPLOK/BD/2430/2026) ದಾಖಲಿಸಿಕೊಂಡು ಶೋಧನಾ ವಾರಂಟ್ (Search Warrant) ಹೊರಡಿಸಿದ್ದರು. ಲೋಕಾಯುಕ್ತ ಪೊಲೀಸ್ ಇನ್‌ಸ್ಪೆಕ್ಟರ್‌ಗಳಾದ ಶ್ರೀ ಉಮಾಮಹೇಶ್ ಮತ್ತು ಶ್ರೀ ಹಾಲಪ್ಪ ವೈ. ಬಾಲದಂಡಿ ಅವರ ತಂಡವು ದಿನಾಂಕ 07/05/2026 ರಂದು ದೊಡ್ಡಬಳ್ಳಾಪುರ ಉಪವಿಭಾಗಾಧಿಕಾರಿಗಳ ಕಚೇರಿ ಹಾಗೂ ದೇವನಹಳ್ಳಿ ತಹಶೀಲ್ದಾರ್ ಕಚೇರಿಗಳ ಮೇಲೆ ದಿಢೀರ್ ದಾಳಿ ನಡೆಸಿ ದಾಖಲೆ ಪರಿಶೀಲಿಸಿದಾಗ ಈ ಆಘಾತಕಾರಿ ಸತ್ಯಾಂಶಗಳು ಹೊರಬಂದಿವೆ.

**ಪ್ರಕರಣದ ಪ್ರಮುಖ ಮುಖ್ಯಾಂಶಗಳು:**

ದೇವನಹಳ್ಳಿ ತಾಲೂಕಿನ ಸಣ್ಣ ಅಮಾನಿಕೆರೆ, ಬೈಚಾಪುರ ಮತ್ತು ಪ್ರಸನ್ನಹಳ್ಳಿ ಗ್ರಾಮಗಳು (ಒಟ್ಟು 84 ಸರ್ವೇ ನಂಬರ್‌ಗಳು).

**ಜಮೀನಿನ ಮೌಲ್ಯ:** ಉಪ-ನೋಂದಣಾಧಿಕಾರಿ ಸಕಾರಿ ಮೌಲ್ಯ ರೂ. 103.68 ಕೋಟಿ ಹಾಗೂ ಪ್ರಸ್ತುತ ಮಾರುಕಟ್ಟೆ ಮೌಲ್ಯ (ಎಕರೆಗೆ ರೂ. 8 ಕೋಟಿಯಂತೆ) ರೂ. 500 ಕೋಟಿ.

**ಪ್ರಮುಖ ಆರೋಪಿಗಳು:** ದೊಡ್ಡಬಳ್ಳಾಪುರ ಉಪವಿಭಾಗದ ಮಾಜಿ ಉಪವಿಭಾಗಾಧಿಕಾರಿ ಶ್ರೀಮತಿ ದುರ್ಗಾಶ್ರೀ ಹಾಗೂ ಪ್ರಥಮ ದರ್ಜೆ ಸಹಾಯಕ ಶ್ರೀ ಮನೋಜ್ ಎಸ್.




**ಲೋಕಾಯುಕ್ತ ತನಿಖೆಯಲ್ಲಿ ಬಯಲಾದ ಅಕ್ರಮಗಳು:** ನಕಲಿ ಆದೇಶಗಳ ಸೃಷ್ಟಿ: ಇ-ಆಫೀಸ್‌ನಲ್ಲಿ ಜನರೇಟ್ ಆಗದ ನಕಲಿ ಆದೇಶಗಳನ್ನು ಬೇರೆಡೆ ಸೃಷ್ಟಿಸಿ, ದೇವನಹಳ್ಳಿ ತಹಶೀಲ್ದಾರ್ ಅವರಿಗೆ ‘ಭೂಮಿ’ ತಂತ್ರಾಂಶದಲ್ಲಿ ಸೇರ್ಪಡಿಸಲು ಕಳುಹಿಸಲಾಗಿತ್ತು.

ಹೈಕೋರ್ಟ್/KAT ಆದೇಶ ದುರ್ಬಳಕೆ: ನಕಲಿ ಆದೇಶಗಳಲ್ಲಿ ಉಲ್ಲೇಖಿಸಲಾಗಿದ್ದ ಕರ್ನಾಟಕ ಉಚ್ಚ ನ್ಯಾಯಾಲಯದ ರಿಟ್ ಅರ್ಜಿ (Writ Petitions) ಹಾಗೂ ಕೆಎಟಿ ಪ್ರಕರಣ ಸಂಖ್ಯೆಗಳು ಆನ್‌ಲೈನ್‌ನಲ್ಲಿ ಪರಿಶೀಲಿಸಿದಾಗ, ಅವು ಈ ಜಮೀನುಗಳಿಗೆ ಸಂಬಂಧಿಸಿಲ್ಲದಿರುವುದು ದೃಢಪಟ್ಟಿದೆ.

ಬಯೋಮೆಟ್ರಿಕ್ ಮತ್ತು ಡಿಜಿಟಲ್ ಸಹಿ ದುರ್ಬಳಕೆ: ವಿಷಯ ನಿರ್ವಾಹಕ ಮನೋಜ್ ಎಸ್. ಅವರ ಲಾಗಿನ್ ಮೂಲಕ ನಕಲಿ ದಾಖಲೆಗಳನ್ನು RTC Management Tool ನಲ್ಲಿ ಅಪ್‌ಲೋಡ್ ಮಾಡಲಾಗಿತ್ತು. ನಂತರ ಎಸಿ ದುರ್ಗಾಶ್ರೀ ಅವರು ತಮ್ಮ ಬಯೋಮೆಟ್ರಿಕ್ ಥಂಬ್ ಹಾಗೂ ಡಿಜಿಟಲ್ ಸಿಗ್ನೇಚರ್ ಬಳಸಿ ಅಕ್ರಮವಾಗಿ ಅನುಮೋದನೆ ನೀಡಿದ್ದಾರೆ.

**ಅರ್ಜಿಯೇ ಇಲ್ಲದೆ ಅನುಮೋದನೆ:** ಉಪವಿಭಾಗಾಧಿಕಾರಿ ಕಚೇರಿಯಲ್ಲಿ ಯಾವುದೇ ಅಧಿಕೃತ ಅರ್ಜಿ ಸ್ವೀಕೃತವಾಗದಿದ್ದರೂ ನೇರವಾಗಿ ಖಾತೆ ಬದಲಾವಣೆಗೆ ಕ್ರಮ ವಹಿಸಲಾಗಿದೆ.

**ಖಾಸಗಿ ಲ್ಯಾಪ್‌ಟಾಪ್ ಬಳಕೆ:** ಉಪವಿಭಾಗಾಧಿಕಾರಿ ದುರ್ಗಾಶ್ರೀ ಅವರು ಕಚೇರಿ ಕೆಲಸಗಳಿಗೆ ಅಧಿಕೃತ ಕಂಪ್ಯೂಟರ್ ಬದಲಿಗೆ ಖಾಸಗಿ ಲ್ಯಾಪ್‌ಟಾಪ್ ಬಳಸಿರುವುದು ಕಂಡುಬಂದಿದೆ.

**ಭೂ ಅಕ್ರಮದ ವಿಸ್ತೀರ್ಣ ವಿವರ:** ಒಟ್ಟು ಅಕ್ರಮ ಯತ್ನ: 84 ಸರ್ವೇ ನಂಬರ್‌ಗಳ 62 ಎಕರೆ 22 ಗುಂಟೆ ಜಮೀನು.

ಈಗಾಗಲೇ ಅಕ್ರಮವಾಗಿ ಖಾತೆಯಾದದ್ದು: 72 ಸರ್ವೇ ನಂಬರ್‌ಗಳ 57 ಎಕರೆ 04.08 ಗುಂಟೆ ಜಮೀನು.

ತಕರಾರಿನಿಂದ ತಡೆಯಲ್ಪಟ್ಟದ್ದು: 06 ಸರ್ವೇ ನಂಬರ್‌ಗಳ 03 ಎಕರೆ 01.08 ಗುಂಟೆ.

ಆದೇಶವಿಲ್ಲದೆ ನೇರ ಖಾತೆಯಾದದ್ದು: 06 ಸರ್ವೇ ನಂಬರ್‌ಗಳ 02 ಎಕರೆ 16 ಗುಂಟೆ.

**ಆರೋಪಿಗಳಿಗೆ ಸೆಪ್ಟೆಂಬರ್ 22ಕ್ಕೆ ಖುದ್ದು ಹಾಜರಾತಿಗೆ ಆದೇಶ:**

ಸಾರ್ವಜನಿಕ ದಾಖಲೆಗಳನ್ನು ತಿರುಚಿ, ಸರ್ಕಾರಿ ವ್ಯವಸ್ಥೆಗೆ ಧಕ್ಕೆ ತಂದು ನೂರಾರು ಕೋಟಿ ಮೌಲ್ಯದ ಆಸ್ತಿ ಅಕ್ರಮ ವರ್ಗಾವಣೆ ಎಸಗಿರುವ ಹಿನ್ನೆಲೆಯಲ್ಲಿ, ಆರೋಪಿಗಳಾದ ಶ್ರೀಮತಿ ದುರ್ಗಾಶ್ರೀ (ಮಾಜಿ ಎಸಿ) ಹಾಗೂ ಶ್ರೀ ಮನೋಜ್ ಎಸ್. (ಎಫ್‌ಡಿಎ) ರವರು ದಿನಾಂಕ: 22/09/2026 ರಂದು ಲೋಕಾಯುಕ್ತ ಪೀಠದ ಮುಂದೆ ಖುದ್ದಾಗಿ ಹಾಜರಾಗಿ ತಮ್ಮ ಆಕ್ಷೇಪಣೆ ಸಲ್ಲಿಸುವಂತೆ ಮಾನ್ಯ ಉಪಲೋಕಾಯುಕ್ತರು ಆದೇಶಿಸಿದ್ದಾರೆ. ಈ ಪ್ರಕರಣದಲ್ಲಿ ಇನ್ನಷ್ಟು ಅಧಿಕಾರಿಗಳ ಪಾತ್ರದ ಬಗ್ಗೆಯೂ ಲೋಕಾಯುಕ್ತ ತನಿಖೆ ಮುಂದುವರಿದಿದೆ.

## ವಿಪಕ್ಷ ಧರಣಿ ನಡುವೆಯೇ 3 ಮಸೂದೆ ಪಾಸ್

● ವಿಕ್ರಮ ವಾಹಿನಿ । ಬೆಂಗಳೂರು

ಬಿಜೆಪಿ-ಜೆಡಿಎಸ್ ಸದಸ್ಯರ ಪ್ರತಿಭಟನೆ ನಡುವೆಯೇ ವಿಧಾನಸಭೆಯಲ್ಲಿ ಬಿಡಿಎ ತಿದ್ದುಪಡಿ ಸೇರಿದಂತೆ ಮೂರು ಮಸೂದೆಗಳು ಅಂಗೀಕಾರಗೊಂಡವು.

ಬಿಡಿಎ ಸ್ವಾಧೀನಪಡಿಸಿಕೊಂಡ ಭೂಮಿಯಲ್ಲಿ ನಿರ್ಮಾಣವಾಗಿರುವ ಸುಮಾರು 1.11 ಲಕ್ಷ ಅನಧಿಕೃತ ಮನೆಗಳ ಅರ್ಹ ಮಾಲೀಕರಿಗೆ ದಾಖಲೆ ಒದಗಿಸಲು ಅವಕಾಶ ಕಲ್ಪಿಸಲಾಗಿದೆ. ನಿವೇಶನದ ಗಾತ್ರಕ್ಕೆ ಅನುಗುಣವಾಗಿ ಮಾರ್ಗಸೂಚಿ ಮೌಲ್ಯದ ಶೇ.5ರಿಂದ 25ರವರೆಗೆ ಶುಲ್ಕ ನಿಗದಿಪಡಿಸಲಾಗಿದೆ.

ಬಿಡಿಎ ಆಯುಕ್ತರ ಕಾಮಗಾರಿ ಮಂಜೂರಾತಿ ಮಿತಿಯನ್ನು ರೂ 50 ಲಕ್ಷದಿಂದ ರೂ 5 ಕೋಟಿಗೆ ಹೆಚ್ಚಿಸಲಾಗಿದೆ. ಬಡಾವಣೆ ಅಭಿವೃದ್ಧಿ ಕಾಮಗಾರಿ ವಿಳಂಬಕ್ಕೆ ವಿಧಿಸಲಾಗಿದ್ದ ಶೇ.3ರ ದಂಡಕ್ಕೆ ಕಾನೂನು ಮಾನ್ಯತೆ ನೀಡುವ ಮಸೂದೆಯೂ ಪಾಸ್ ಆಗಿದೆ. ಕೆಂಪೇಗೌಡ ಪಾರಂಪರಿಕ ತಾಣದ ಅಭಿವೃದ್ಧಿ ಪ್ರಾಧಿಕಾರದ ಸದಸ್ಯರ ನಿಯಮಗಳ ಪರಿಷ್ಕರಣೆಗೂ ಅನುಮೋದನೆ ದೊರೆತಿದೆ.

ಪ್ರತಿಭಟನೆ ಮತ್ತು ಗದ್ದಲದ ನಡುವೆಯೇ ಸರ್ಕಾರ ಮಸೂದೆಗಳನ್ನು ಅಂಗೀಕರಿಸಿತು. ತಿದ್ದುಪಡಿಗಳಿಂದ ಅನಧಿಕೃತ ಮನೆಗಳ ಮಾಲೀಕರಿಗೆ ದಾಖಲೆ ಪಡೆಯಲು ಅವಕಾಶ ಸಿಗಲಿದ್ದು, ಬಡಾವಣೆಗಳ ಮೂಲಸೌಕರ್ಯ ಅಭಿವೃದ್ಧಿ ಹಾಗೂ ನಿರ್ವಹಣಾ ಕಾಮಗಾರಿಗಳು ವೇಗ ಪಡೆಯುವ ನಿರೀಕ್ಷೆಯಿದೆ.



# ‘ಟಾಕ್ಸಿಕ್’ಗೆ ಅಮೆರಿಕದಲ್ಲಿ ಭರ್ಜರಿ ಅಡ್ವಾನ್ಸ್ ಬುಕ್ಕಿಂಗ್

**ರೂ 1 ಕೋಟಿಗೂ ಅಧಿಕ ಮುಂಗಡ ಕಲೆಕ್ಷನ್; ಭಾರತದಲ್ಲಿ 21ರಿಂದ ಟಿಕೆಟ್ ಬುಕಿಂಗ್ ಆರಂಭ**

● ವಿಕ್ರಮ ವಾಹಿನಿ । ಬೆಂಗಳೂರು

ರಾಕಿಂಗ್ ಸ್ಟಾರ್ ಯಶ್ ಅಭಿನಯದ ಬಹುನಿರೀಕ್ಷಿತ ‘ಟಾಕ್ಸಿಕ್: ಎ ಫೇರಿ ಟೇಲ್ ಫಾರ್ ಗ್ರೋನ್-ಅಪ್ಸ್’ ಸಿನಿಮಾ ಬಿಡುಗಡೆಗೂ ಮುನ್ನವೇ ಭಾರಿ ನಿರೀಕ್ಷೆ ಮೂಡಿಸಿದೆ. ಅಮೆರಿಕದಲ್ಲಿ ಚಿತ್ರದ ಮುಂಗಡ ಟಿಕೆಟ್ ಮಾರಾಟ ಉತ್ತಮ ಪ್ರತಿಕ್ರಿಯೆ ಪಡೆದುಕೊಂಡಿದ್ದು, ಇದುವರೆಗೆ $1.21 ಲಕ್ಷ (ಸುಮಾರು ರೂ 1 ಕೋಟಿ) ಮೊತ್ತದ ಟಿಕೆಟ್‌ಗಳು ಮಾರಾಟವಾಗಿವೆ ಎಂದು ವರದಿಯಾಗಿದೆ. 204 ಸ್ಥಳಗಳಲ್ಲಿ 589 ಪ್ರದರ್ಶನಗಳಿಗೆ 5,550ಕ್ಕೂ ಹೆಚ್ಚು ಟಿಕೆಟ್‌ಗಳು ಮಾರಾಟವಾಗಿವೆ.

**ಬಿಡುಗಡೆಗೂ ಮುನ್ನವೇ ಹೆಚ್ಚಿದ ಕ್ರೇಜ್**

‘ಕೆಜಿಎಫ್-2’ ಬಳಿಕ ಸುಮಾರು ನಾಲ್ಕು ವರ್ಷಗಳ ನಂತರ ಯಶ್ ಬೆಳ್ಳಿತೆರೆಗೆ ಮರಳುತ್ತಿರುವುದು ಚಿತ್ರದ ಮೇಲಿನ ಕುತೂಹಲ ಹೆಚ್ಚಿಸಿದೆ. ಬುಕ್‌ಮೈಶೋನಲ್ಲಿ ಚಿತ್ರಕ್ಕೆ ಭಾರಿ ಸಂಖ್ಯೆಯಲ್ಲಿ ಆಸಕ್ತಿ ದಾಖಲಾಗಿದ್ದು, ಬಿಡುಗಡೆಗೂ ಮುನ್ನವೇ ಅಭಿಮಾನಿಗಳ ನಿರೀಕ್ಷೆ ಮತ್ತಷ್ಟು ಹೆಚ್ಚಿದೆ.

**ಆ.21ರಿಂದ ಭಾರತದಲ್ಲಿ ಅಡ್ವಾನ್ಸ್ ಬುಕ್ಕಿಂಗ್**

ಚಿತ್ರದ ಭಾರತದಲ್ಲಿನ ಮುಂಗಡ ಟಿಕೆಟ್ ಬುಕಿಂಗ್ ಆಗಸ್ಟ್ 21ರಿಂದ ಆರಂಭವಾಗಲಿದೆ. ಆಗಸ್ಟ್ 26ರಂದು ಚಿತ್ರ ವಿಶ್ವದಾದ್ಯಂತ ತೆರೆಕಾಣಲಿದೆ. ದೊಡ್ಡ ಪ್ರಮಾಣದ ಜಾಗತಿಕ ಬಿಡುಗಡೆಗೆ ಚಿತ್ರತಂಡ ಸಿದ್ಧತೆ ನಡೆಸಿದ್ದು, ಸುಮಾರು 12 ಸಾವಿರ ಪರದೆಗಳಲ್ಲಿ ಚಿತ್ರ ಪ್ರದರ್ಶನಗೊಳ್ಳುವ ನಿರೀಕ್ಷೆಯಿದೆ.



**ಟಿಕೆಟ್ ದರ ಎಷ್ಟಿರಲಿದೆ?**

ಭಾರತದಲ್ಲಿ ಅಧಿಕೃತ ಟಿಕೆಟ್ ದರಗಳು ರಾಜ್ಯ ಹಾಗೂ ಚಿತ್ರಮಂದಿರವಾರು ಬದಲಾಗಲಿದ್ದು, ಬುಕಿಂಗ್ ಆರಂಭವಾದ ಬಳಿಕವೇ ನಿಖರ ದರ ಸ್ಪಷ್ಟವಾಗಲಿದೆ. ಕೆಲವು ಪ್ರದೇಶಗಳಲ್ಲಿ ವಿಶೇಷ ಪ್ರದರ್ಶನಗಳಿಗೆ ಸಾಮಾನ್ಯ ದರಕ್ಕಿಂತ ಹೆಚ್ಚಿನ ದರ ನಿಗದಿಯಾಗುವ ಸಾಧ್ಯತೆ ಇದೆ. ಹೀಗಾಗಿ ಅಭಿಮಾನಿಗಳ ಗಮನ ಇದೀಗ ಆ.21ರಂದು ಆರಂಭವಾಗಲಿರುವ ಮುಂಗಡ ಬುಕಿಂಗ್‌ನತ್ತ ನೆಟ್ಟಿದೆ.

**ಗೀತು ಮೋಹನ್‌ದಾಸ್ ನಿರ್ದೇಶನದ ಚಿತ್ರದಲ್ಲಿ ಯಶ್**

ಜೊತೆ ಕಿಯಾರಾ ಅಡ್ವಾಣಿ, ನಯನತಾರಾ, ಹುಮಾ ಖುರೇಷಿ, ತಾರಾ ಸುತಾರಿಯಾ ಹಾಗೂ ರುಕ್ಮಿಣಿ ವಸಂತ್ ಪ್ರಮುಖ ಪಾತ್ರಗಳಲ್ಲಿ ನಟಿಸಿದ್ದಾರೆ.

ಕನ್ನಡ ಸೇರಿದಂತೆ ಹಿಂದಿ, ತಮಿಳು, ತೆಲುಗು ಮತ್ತು ಮಲಯಾಳಂ ಭಾಷೆಗಳಲ್ಲಿ ಚಿತ್ರ ಬಿಡುಗಡೆಯಾಗಲಿದೆ.ಬಿಡುಗಡೆಗೆ ಇನ್ನೇನು ಕೆಲವೇ ದಿನಗಳು ಬಾಕಿಯಿರುವಾಗಲೇ ವಿದೇಶಿ ಮಾರುಕಟ್ಟೆಯಲ್ಲಿ ಕಾಣಿಸಿಕೊಂಡಿರುವ ಈ ಮುಂಗಡ ಪ್ರತಿಕ್ರಿಯೆ, ಭಾರತದಲ್ಲಿ ‘ಟಾಕ್ಸಿಕ್’ಗೆ ಸಿಗಲಿರುವ ಓಪನಿಂಗ್ ಬಗ್ಗೆ ಕುತೂಹಲ ಮತ್ತಷ್ಟು ಹೆಚ್ಚಿಸಿದೆ.



www.VIKRAMAVAHINI.com
ಕನ್ನಡ ದಿನಪತ್ರಿಕೆ
PRGI NO: KARKAN/2018/78481
ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ
ವಿಕ್ರಮ ವಾಹಿನಿ

### ಸವಿ ವಾಹಿನಿ

ಸ್ನೇಹಕ್ಕೆ ಬಣ್ಣವಿಲ್ಲ ಆದರೂ ಅದು ವರ್ಣಮಯವಾಗಿದೆ
ಸ್ನೇಹಕ್ಕೆ ಮುಖವಿಲ್ಲ, ಆದರೂ ಅದು ಸುಂದರವಾಗಿದೆ
ಸ್ನೇಹಕ್ಕೆ ಮನೆಯಿಲ್ಲ, ಆದರೆ ಅದು ನಮ್ಮ ನಿಮ್ಮ
ಹೃದಯದಲ್ಲಿದೆ.

### ದಿನ ಪಂಚಾಂಗ

ಆಗಸ್ಟ್, 21–2026 ವರ್ಷ ಋತು, ಶ್ರಾವಣ ಮಾಸ,
ಶುದ್ಧ ಪಕ್ಷ. ನವಮಿ ತಿಥಿ ರಾ–11:33
ಅನುರಾಧ ನಕ್ಷತ್ರ ಮ–1:17
ರಾಹುಕಾಲ ಬೆ–10:48–12:22
ಕೋಲಾರ ಡಿ. ಕೈವಾರ ಸತ್ಯನಾರಾಯಣ ರಥ,
ದೇವಿ ಪವಿತ್ರಾರೋಪಣ, ಶಿರಹಟ್ಟಿ । ಹರಿಪುರ
ವೀರಭದ್ರ ಅಗ್ನಿಗೊಂಡ

### ಆರೋಗ್ಯ

## ಕ್ರಿಮಿನಾಶಕದಿಂದ ರೈತರ ಆರೋಗ್ಯಕ್ಕೆ ಕುತ್ತು



ಬೆಳೆಗಳ ಇಳುವರಿ ಹೆಚ್ಚಿಸುವ ಉದ್ದೇಶದಿಂದ ಅತಿಯಾಗಿ ಕ್ರಿಮಿನಾಶಕ ಬಳಸುತ್ತಿರುವ ರೈತರ ಆರೋಗ್ಯದ ಮೇಲೆ ಅದರ ದುಷ್ಪರಿಣಾಮ ಬೀರುವ ಸಾಧ್ಯತೆ ಇದೆ ಎಂಬ ಆತಂಕಕಾರಿ ಅಂಶ ಹುಬ್ಬಳ್ಳಿ ಕಿಮ್ಸ್‌ನ ಬಹುಶಿಸ್ತೀಯ ಅಧ್ಯಯನ ಘಟಕ ನಡೆಸಿದ ಸಂಶೋಧನೆಯಿಂದ ಬೆಳಕಿಗೆ ಬಂದಿದೆ. ಕ್ರಿಮಿನಾಶಕ ಸಿಂಪಡಣೆ ಮಾಡಿದ 15 ದಿನಗಳ ಬಳಿಕವೂ ಕೆಲವು ರೈತರ ರಕ್ತದ ಮಾದರಿಯಲ್ಲಿ ಅದರ ಅಂಶಗಳು ಪತ್ತೆಯಾಗಿರುವುದು ಅಧ್ಯಯನದಲ್ಲಿ ಕಂಡುಬಂದಿದೆ.

**13 ರೈತರ ಮೇಲೆ ಅಧ್ಯಯನ**

ಧಾರವಾಡ ಜಿಲ್ಲೆಯ ಗ್ರಾಮೀಣ ಭಾಗದ 13 ರೈತರನ್ನು ಅಧ್ಯಯನಕ್ಕೆ ಆಯ್ಕೆ ಮಾಡಲಾಗಿತ್ತು. ಕ್ರಿಮಿನಾಶಕ ಸಿಂಪಡಿಸಿದ ಬಳಿಕ 2ರಿಂದ 15 ದಿನಗಳ ಅವಧಿಯಲ್ಲಿ ಅವರ ರಕ್ತದ ಮಾದರಿಗಳನ್ನು ಸಂಗ್ರಹಿಸಿ ಪರೀಕ್ಷೆ ನಡೆಸಲಾಗಿದೆ. ಈ ವೇಳೆ ಸಿಂಪಡಣೆ ಮಾಡಿದ ಹಲವು ದಿನಗಳ ನಂತರವೂ ರಕ್ತದಲ್ಲಿ ರಾಸಾಯನಿಕ ಅಂಶಗಳು ಪತ್ತೆಯಾಗಿರುವುದು ಗಮನಕ್ಕೆ ಬಂದಿದೆ. ರೈತರ ದೇಹಕ್ಕೆ ಕ್ರಿಮಿನಾಶಕ ಯಾವ ಪ್ರಮಾಣದಲ್ಲಿ ಪ್ರವೇಶಿಸುತ್ತದೆ ಹಾಗೂ ದೀರ್ಘಾವಧಿಯಲ್ಲಿ ಆರೋಗ್ಯದ ಮೇಲೆ ಯಾವ ರೀತಿಯ ಪರಿಣಾಮ ಬೀರುತ್ತದೆ ಎಂಬುದನ್ನು ತಿಳಿಯಲು ಹೆಚ್ಚಿನ ಪ್ರಮಾಣದ ಹಾಗೂ ದೀರ್ಘಾವಧಿಯ ಅಧ್ಯಯನದ ಅಗತ್ಯವಿದೆ ಎಂದು ತಜ್ಞರು ತಿಳಿಸಿದ್ದಾರೆ.

**ಕಿಡ್ನಿ, ಹೃದಯದ ಆರೋಗ್ಯದ ಬಗ್ಗೆ ಕಳವಳ**

ಕ್ರಿಮಿನಾಶಕಗಳಿಗೆ ನಿರಂತರವಾಗಿ ಒಡ್ಡಿಕೊಳ್ಳುವುದರಿಂದ ಮೂತ್ರಪಿಂಡ, ಹೃದಯ ಹಾಗೂ ಚಯಾಪಚಯ ವ್ಯವಸ್ಥೆಗೆ ಸಂಬಂಧಿಸಿದ ಆರೋಗ್ಯ ಸಮಸ್ಯೆಗಳ ಅಪಾಯ ಹೆಚ್ಚುವ ಸಾಧ್ಯತೆಯಿದೆ ಎಂದು ವೈದ್ಯರು ಎಚ್ಚರಿಸಿದ್ದಾರೆ. ಆದರೆ ಕೇವಲ 13 ರೈತರನ್ನು ಒಳಗೊಂಡಿರುವ ಈ ಅಧ್ಯಯನದ ಆಧಾರದ ಮೇಲೆ ಯಾವುದೇ ನಿರ್ದಿಷ್ಟ ಕಾಯಿಲೆಗೆ ಕ್ರಿಮಿನಾಶಕವೇ ನೇರ ಕಾರಣ ಎಂದು ಅಂತಿಮವಾಗಿ ಹೇಳಲು ಸಾಧ್ಯವಿಲ್ಲ. ಇದಕ್ಕಾಗಿ ಹೆಚ್ಚಿನ ಸಂಖ್ಯೆಯ ರೈತರನ್ನು ಒಳಗೊಂಡ ಸಂಶೋಧನೆ ಅಗತ್ಯವಾಗಿದೆ.

**ಚರ್ಮ, ಉಸಿರಾಟದ ಮೂಲಕ ದೇಹ ಸೇರುವ ಸಾಧ್ಯತೆ**

ಕ್ರಿಮಿನಾಶಕ ಸಿಂಪಡಿಸುವ ವೇಳೆ ರಕ್ಷಣಾ ಸಾಧನಗಳನ್ನು ಬಳಸದೇ ಇದ್ದರೆ ರಾಸಾಯನಿಕಗಳು ಚರ್ಮದ ಸಂಪರ್ಕ ಅಥವಾ ಉಸಿರಾಟದ ಮೂಲಕ ದೇಹ ಪ್ರವೇಶಿಸುವ ಸಾಧ್ಯತೆಯಿದೆ. ಹೀಗಾಗಿ ಸಿಂಪಡಣೆ ವೇಳೆ ರೈತರು ಹೆಚ್ಚಿನ ಮುನ್ನೆಚ್ಚರಿಕೆ ವಹಿಸಬೇಕು ಎಂದು ಏಖಒಖ ತಜ್ಞರು ಸಲಹೆ ನೀಡಿದ್ದಾರೆ.

**ಸುರಕ್ಷತಾ ಕ್ರಮ ಕಡ್ಡಾಯ**

ಕ್ರಿಮಿನಾಶಕ ಸಿಂಪಡಿಸುವಾಗ ರೈತರು ಮಾಸ್ಕ್, ಗ್ಲೌಸ್ ಹಾಗೂ ದೇಹವನ್ನು ಸಂಪೂರ್ಣವಾಗಿ ಮುಚ್ಚುವ ಬಟ್ಟೆಗಳನ್ನು ಬಳಸಬೇಕು. ಸಿಂಪಡಣೆ ಸಂದರ್ಭದಲ್ಲಿ ಆಹಾರ ಅಥವಾ ನೀರು ಸೇವಿಸುವುದನ್ನು ತಪ್ಪಿಸಬೇಕು. ಕೆಲಸ ಮುಗಿದ ಬಳಿಕ ಕೈ, ಮುಖ ಹಾಗೂ ದೇಹವನ್ನು ಚೆನ್ನಾಗಿ ತೊಳೆಯಬೇಕು. ರಾಸಾಯನಿಕ ತಗುಲಿರುವ ಬಟ್ಟೆಗಳನ್ನು ಪ್ರತ್ಯೇಕವಾಗಿ ತೊಳೆಯುವುದು ಅಗತ್ಯ.

**ದೊಡ್ಡ ಪ್ರಮಾಣದ ಅಧ್ಯಯನಕ್ಕೆ ಸಿದ್ಧತೆ**

ಅಧ್ಯಯನದ ವರದಿಯನ್ನು ರಾಜ್ಯ ಆರೋಗ್ಯ ಸಚಿವರಿಗೆ ಸಲ್ಲಿಸಲು ಏಖಒಖ ಸಿದ್ಧತೆ ನಡೆಸಿದೆ. ಮುಂದಿನ ಹಂತದಲ್ಲಿ ಹೆಚ್ಚಿನ ಸಂಖ್ಯೆಯ ರೈತರನ್ನು ಒಳಗೊಂಡು ದೊಡ್ಡ ಪ್ರಮಾಣದ ಅಧ್ಯಯನ ನಡೆಸಲು ಉದ್ದೇಶಿಸಲಾಗಿದೆ. ಕೃಷಿಯಲ್ಲಿ ಕ್ರಿಮಿನಾಶಕ ಬಳಕೆಯನ್ನು ಸಂಪೂರ್ಣವಾಗಿ ತಪ್ಪಿಸುವುದು ಕಷ್ಟವಾದರೂ, ಅಗತ್ಯಕ್ಕಿಂತ ಹೆಚ್ಚಿನ ಪ್ರಮಾಣದಲ್ಲಿ ರಾಸಾಯನಿಕ ಬಳಕೆ ಮಾಡದಿರುವುದು ಹಾಗೂ ಸಿಂಪಡಣೆ ವೇಳೆ ಸೂಕ್ತ ಸುರಕ್ಷತಾ ಕ್ರಮಗಳನ್ನು ಪಾಲಿಸುವುದು ಅತ್ಯಂತ ಮುಖ್ಯವಾಗಿದೆ. ರೈತರ ಆರೋಗ್ಯ ರಕ್ಷಣೆಗೆ ಜಾಗೃತಿ ಮೂಡಿಸುವ ಅಗತ್ಯವೂ ಹೆಚ್ಚಾಗಿದೆ.

# ‘543 ಲೋಕಸಭಾ ಸ್ಥಾನ ಉಳಿಸಿ’

● ವಿಕ್ರಮ ವಾಹಿನಿ । ಮಹಾಬಲಿಪುರಂ

ಕ್ಷೇತ್ರ ಪುನರ್‌ವಿಂಗಡಣೆಗೆ 1971ರ ಜನಗಣತಿಯನ್ನು ಆಧಾರವಾಗಿಟ್ಟುಕೊಂಡು, ಮುಂದಿನ 25 ವರ್ಷಗಳವರೆಗೆ ಲೋಕಸಭೆಯ ಈಗಿರುವ 543 ಸ್ಥಾನಗಳ ಸಂಖ್ಯೆಯನ್ನು ಯಥಾಸ್ಥಿತಿಯಲ್ಲಿ ಮುಂದುವರಿಸುವಂತೆ ಹಾಗೂ ಇದೇ 543 ಸ್ಥಾನಗಳ ವ್ಯಾಪ್ತಿಯಲ್ಲಿ ಮಹಿಳಾ ಮೀಸಲಾತಿಯನ್ನು ಕಲ್ಪಿಸುವಂತೆ ಕೇಂದ್ರ ಸರ್ಕಾರವನ್ನು ಒತ್ತಾಯಿಸುವ ನಿರ್ಣಯವನ್ನು ದಕ್ಷಿಣ ವಲಯ ಮಂಡಳಿ ಅಂಗೀಕರಿಸಬೇಕು ಎಂದು ಕರ್ನಾಟಕ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಗುರುವಾರ ಆಗ್ರಹಿಸಿದರು.

ಇಲ್ಲಿನ ದಕ್ಷಿಣ ವಲಯ ಮಂಡಳಿಯ 31ನೇ ಸಭೆಯನ್ನುದ್ದೇಶಿಸಿ ಮಾತನಾಡಿದ ಶಿವಕುಮಾರ್, ಜನಸಂಖ್ಯೆ ನಿಯಂತ್ರಿಸುವಲ್ಲಿ ದಕ್ಷಿಣ ರಾಜ್ಯಗಳು ಸಾಧಿಸಿರುವ ಯಶಸ್ಸು ಅವುಗಳ ರಾಜಕೀಯ ಪ್ರಾತಿನಿಧ್ಯವನ್ನು ಕಡಿಮೆ ಮಾಡಲು ಕಾರಣವಾಗಬಾರದು ಎಂದು ಹೇಳಿದರು.

“ಯಾವುದೇ ದಕ್ಷಿಣ ರಾಜ್ಯ ತನ್ನ ಲೋಕಸಭಾ ಸ್ಥಾನಗಳನ್ನು ಕಳೆದುಕೊಳ್ಳುವುದಿಲ್ಲ ಎಂಬ ಭರವಸೆಯನ್ನು ನಾವು ಸ್ವಾಗತಿಸುತ್ತೇವೆ. ಆದರೆ ಪ್ರಾತಿನಿಧ್ಯ ಎಂಬುದು ಕೇವಲ ಸಂಖ್ಯೆಗಳ ವಿಚಾರವಲ್ಲ. ಅದು ಪ್ರಭಾವ ಮತ್ತು ಧ್ವನಿಯ ವಿಚಾರವೂ ಹೌದು,” ಎಂದು ಅವರು ಹೇಳಿದರು.

ಜನಸಂಖ್ಯೆ ಸ್ಥಿರೀಕರಣಕ್ಕೆ ದೇಶ ನೀಡಿದ ಕರೆಯನ್ನು ದಕ್ಷಿಣ ರಾಜ್ಯಗಳು ಶಿಸ್ತು ಮತ್ತು ಯಶಸ್ಸಿನೊಂದಿಗೆ ಅನುಸರಿಸಿವೆ. ಕ್ಷೇತ್ರ ಪುನರ್‌ವಿಂಗಡಣೆ ಸಂದರ್ಭದಲ್ಲಿ ಈ ಸಾಧನೆಗಾಗಿ ಅವುಗಳನ್ನು ಶಿಕ್ಷಿಸಬಾರದು ಎಂದು ಶಿವಕುಮಾರ್ ಹೇಳಿದರು.

“ನಮ್ಮ ಈ ಯಶಸ್ಸು ನಮ್ಮ ಧ್ವನಿಯನ್ನು ದುರ್ಬಲಗೊಳಿಸಲು ಎಂದಿಗೂ ಕಾರಣವಾಗಬಾರದು. ನಮ್ಮ ಆರ್ಥಿಕ ಪ್ರಭಾವಕ್ಕೆ ತಕ್ಕಂತೆ ರಾಜಕೀಯ ಧ್ವನಿಯೂ ಇರಬೇಕು,” ಎಂದು ಅವರು ಹೇಳಿದರು.

1971ರ ಜನಸಂಖ್ಯೆಯನ್ನು ಆಧಾರವಾಗಿ ಗೌರವಿಸಬೇಕು ಮತ್ತು ಲೋಕಸಭೆಯ ಒಟ್ಟು ಸ್ಥಾನಗಳ ಸಂಖ್ಯೆಯನ್ನು ಬದಲಾಯಿಸಬಾರದು ಎಂದು ಮುಖ್ಯಮಂತ್ರಿ ಸ್ಪಷ್ಟವಾಗಿ ಆಗ್ರಹಿಸಿದರು.

“ನಾನು ಹೇಳುತ್ತಿರುವುದನ್ನು ಇಲ್ಲಿರುವ ಎಲ್ಲ ಮುಖ್ಯಮಂತ್ರಿಗಳು ಬೆಂಬಲಿಸುತ್ತಾರೆ ಎಂಬ ವಿಶ್ವಾಸ ನನಗಿದೆ. 1971ರ ಆಧಾರವನ್ನು ಗೌರವಿಸೋಣ ಮತ್ತು ನಮ್ಮ ಧ್ವನಿಯ ಬಲವನ್ನು ರಕ್ಷಿಸೋಣ,” ಎಂದು ಅವರು ಹೇಳಿದರು.

ಕ್ಷೇತ್ರ ಪುನರ್‌ವಿಂಗಡಣೆ ವಿಚಾರವನ್ನು ಮಹಿಳಾ ಮೀಸಲಾತಿಯೊಂದಿಗೆ ಜೋಡಿಸಿದ ಶಿವಕುಮಾರ್, ಹೊಸ ಕ್ಷೇತ್ರ ಪುನರ್‌ವಿಂಗಡಣೆ ಪ್ರಕ್ರಿಯೆಯ ಕಾರಣಕ್ಕೆ ಮಹಿಳಾ ಮೀಸಲಾತಿಯ ಅನುಷ್ಠಾನವನ್ನು ವಿಳಂಬ ಮಾಡಬಾರದು ಎಂದು ಹೇಳಿದರು.

“ಮಹಿಳೆಯರು ತಮ್ಮ ನ್ಯಾಯಯುತ ಪ್ರಾತಿನಿಧ್ಯಕ್ಕಾಗಿ ಸಾಕಷ್ಟು ಕಾಲ ಕಾದಿದ್ದಾರೆ. ಜನಸಂಖ್ಯೆಯ ಲೆಕ್ಕಾಚಾರಕ್ಕಾಗಿ ಅವರ ಮೀಸಲಾತಿ ಕಾಯಬಾರದು,” ಎಂದು ಅವರು ಹೇಳಿದರು.

ಮುಂದಿನ 25 ವರ್ಷಗಳವರೆಗೆ ಲೋಕಸಭೆಯ ಸ್ಥಾನಗಳ ಸಂಖ್ಯೆಯನ್ನು ಈಗಿರುವ 543ಕ್ಕೆ ಸೀಮಿತಗೊಳಿಸುವಂತೆ ಹಾಗೂ ಇದೇ 543 ಸ್ಥಾನಗಳ ವ್ಯಾಪ್ತಿಯಲ್ಲಿ ಮಹಿಳಾ ಮೀಸಲಾತಿಯನ್ನು ಕಲ್ಪಿಸುವಂತೆ ನಿರ್ಣಯ ಅಂಗೀಕರಿಸಬೇಕೆಂದು ಅವರು ದಕ್ಷಿಣ ವಲಯ ಮಂಡಳಿಯನ್ನು ಒತ್ತಾಯಿಸಿದರು.

“ಆದ್ದರಿಂದ ಲೋಕಸಭೆಯ ಸ್ಥಾನಗಳ ಸಂಖ್ಯೆಯನ್ನು ಈಗಿರುವ ಸಂಖ್ಯೆಯಲ್ಲೇ ಸ್ಥಿರಗೊಳಿಸಿ, ಇದೇ ಸಂಖ್ಯೆಯೊಳಗೆ ಮಹಿಳಾ ಮೀಸಲಾತಿ ಒದಗಿಸುವಂತೆ ಈ ಮಂಡಳಿ ನಿರ್ಣಯ ಕೈಗೊಳ್ಳಬೇಕು ಎಂದು ನಾನು ಒತ್ತಾಯಿಸುತ್ತೇನೆ. ನಮ್ಮ ಈ ಸಾಮೂಹಿಕ ನಿಲುವಿನ ಹಿಂದೆ ಒಗ್ಗಟ್ಟಾಗಿ ನಿಲ್ಲುವಂತೆ ನನ್ನ ಸಹ ಮುಖ್ಯಮಂತ್ರಿಗಳನ್ನು ಕೋರಿಕೊಳ್ಳುತ್ತೇನೆ,” ಎಂದು ಅವರು ಹೇಳಿದರು.

ದಕ್ಷಿಣ ಭಾರತದ ರಾಜಕೀಯ ಧ್ವನಿಯನ್ನು ರಕ್ಷಿಸುವುದು ಭಾರತದ ಒಕ್ಕೂಟ ವ್ಯವಸ್ಥೆಯಲ್ಲಿ ನ್ಯಾಯಸಮ್ಮತತೆಯನ್ನು ಖಚಿತಪಡಿಸುವ ಪ್ರಮುಖ ಭಾಗವಾಗಿದೆ ಎಂದು ಅವರು ಹೇಳಿದರು.

“ನಮ್ಮ ಧ್ವನಿಯಲ್ಲಿ ನ್ಯಾಯ ಎಂಬುದು ಒಂದು ಭಾಗ. ನಮ್ಮ ಸಂಪನ್ಮೂಲಗಳಲ್ಲಿ ನ್ಯಾಯ ಎಂಬುದು ಮತ್ತೊಂದು ಭಾಗ,” ಎಂದು ಶಿವಕುಮಾರ್ ಹೇಳಿದರು.



ತಮಿಳುನಾಡಿನ ಚೆನ್ನೈ (ಮಹಾಬಲಿಪುರಂ)ನಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಷಾ ಅವರ ಅಧ್ಯಕ್ಷತೆಯಲ್ಲಿ ಗುರುವಾರ ನಡೆದ ದಕ್ಷಿಣ ವಲಯ ಮಂಡಳಿಯ 31 ನೇ ಸಭೆಯಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಭಾಗವಹಿಸಿದರು. ತಮಿಳುನಾಡು ಮುಖ್ಯಮಂತ್ರಿ ಸಿ. ಜೋಸೆಫ್ ವಿಜಯ್, ಕೇರಳಂ ಮುಖ್ಯಮಂತ್ರಿ ವಿ.ಡಿ. ಸತೀಶನ್, ಆಂಧ್ರ ಪ್ರದೇಶ ಮುಖ್ಯಮಂತ್ರಿ ಎನ್. ಚಂದ್ರಬಾಬು ನಾಯ್ಡು, ತೆಲಂಗಾಣ ಉಪ ಮುಖ್ಯಮಂತ್ರಿ ಬಟ್ಟಿ ವಿಕ್ರಮಾರ್ಕ, ಕರ್ನಾಟಕ ಐಟಿ ಬಿಟಿ ಹಾಗೂ ಗೃಹ ಸಚಿವರಾದ ಪ್ರಿಯಾಂಕ್ ಖರ್ಗೆ ಸೇರಿದಂತೆ ದಕ್ಷಿಣ ರಾಜ್ಯಗಳ ಸಚಿವರು, ಹಿರಿಯ ಅಧಿಕಾರಿಗಳು ಭಾಗವಹಿಸಿದ್ದರು.

## ‘ದಕ್ಷಿಣ ಭಾರತಕ್ಕೆ ನ್ಯಾಯಯುತ ಅನುದಾನ ನೀಡಿ’



ಕರ್ನಾಟಕ ಸೇರಿದಂತೆ ದಕ್ಷಿಣ ಭಾರತದ ರಾಜ್ಯಗಳಿಗೆ ತೆರಿಗೆ ಹಂಚಿಕೆ, ಕೇಂದ್ರ ಅನುದಾನ ಹಾಗೂ ಅಭಿವೃದ್ಧಿ ಸಂಪನ್ಮೂಲಗಳಲ್ಲಿ ನ್ಯಾಯಯುತ ಪಾಲು ನೀಡಬೇಕು ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಒತ್ತಾಯಿಸಿದರು.

ತಮಿಳುನಾಡಿನ ಮಹಾಬಲಿಪುರಂನಲ್ಲಿ ನಡೆದ 31ನೇ ದಕ್ಷಿಣ ವಲಯ ಮಂಡಳಿ ಸಭೆಯಲ್ಲಿ ಮಾತನಾಡಿದ ಅವರು, “ಕರ್ನಾಟಕ ಬಲಿಷ್ಠವಾದರೆ ದಕ್ಷಿಣ ಭಾರತ, ದಕ್ಷಿಣ ಭಾರತ ಬಲಿಷ್ಠವಾದರೆ ದೇಶ ಬಲಿಷ್ಠವಾಗುತ್ತದೆ. ನಮ್ಮ ನಿಧಿಗಳಲ್ಲಿ ಹಾಗೂ ನಮ್ಮ ಧ್ವನಿಯಲ್ಲಿ ನ್ಯಾಯ ಬೇಕು” ಎಂದರು.

ದೇಶದ ಜಿಡಿಪಿಗೆ ದಕ್ಷಿಣ ಭಾರತದ ಐದು ರಾಜ್ಯಗಳು ಸುಮಾರು ಶೇ.33ರಷ್ಟು ಕೊಡುಗೆ ನೀಡುತ್ತಿದ್ದರೂ, ತೆರಿಗೆ ಹಂಚಿಕೆಯಲ್ಲಿ ಸೂಕ್ತ ಪಾಲು ಸಿಗುತ್ತಿಲ್ಲ ಎಂದು ಅವರು ಹೇಳಿದರು. 15ನೇ ಹಣಕಾಸು ಆಯೋಗದ ಅವಧಿಯಲ್ಲಿ ಕರ್ನಾಟಕದ ತೆರಿಗೆ ಪಾಲು ಶೇ.4.7ರಿಂದ ಶೇ.3.6ಕ್ಕೆ ಇಳಿಕೆಯಾಗಿದ್ದು, ಇದರಿಂದ ರಾಜ್ಯಕ್ಕೆ ಸುಮಾರು 65 ಸಾವಿರ ಕೋಟಿ ನಷ್ಟವಾಗಿದೆ ಎಂದು ವಿವರಿಸಿದರು. ಕರ್ನಾಟಕದ ಪಾಲನ್ನು ಮತ್ತೆ ಶೇ.4.7ಕ್ಕೆ ಹೆಚ್ಚಿಸಬೇಕು ಎಂದು ಆಗ್ರಹಿಸಿದರು.

**ಲೋಕಸಭಾ ಸ್ಥಾನ ಕಡಿತ ಬೇಡ**

ಜನಸಂಖ್ಯೆ ನಿಯಂತ್ರಣದಲ್ಲಿ ಯಶಸ್ವಿಯಾಗಿರುವ ದಕ್ಷಿಣ ರಾಜ್ಯಗಳಿಗೆ ಲೋಕಸಭಾ ಕ್ಷೇತ್ರಗಳ ಪುನರ್ವಿಂಗಡಣೆಯಿಂದ ಅನ್ಯಾಯವಾಗಬಾರದು. ಪ್ರಸ್ತುತ ಇರುವ ಲೋಕಸಭಾ ಸ್ಥಾನಗಳ ಸಂಖ್ಯೆಯನ್ನು ಯಥಾಸ್ಥಿತಿಯಲ್ಲಿ ಕಾಯ್ದುಕೊಂಡೇ ಮಹಿಳಾ ಮೀಸಲಾತಿ ಜಾರಿಗೊಳಿಸಬೇಕು ಎಂದು ಶಿವಕುಮಾರ್ ಒತ್ತಾಯಿಸಿದರು.

**ನೀರಿನ ವಿಚಾರದಲ್ಲೂ ಸಹಕಾರ**

ಕಾವೇರಿ, ಕೃಷ್ಣಾ, ತುಂಗಭದ್ರಾ, ಪೆನ್ನಾರ್ ಹಾಗೂ ಪಾಲಾರ್ ನದಿಗಳ ನೀರಿನ ಹಂಚಿಕೆಯಲ್ಲಿ ಸಮಾನತೆ, ಪಾರದರ್ಶಕತೆ ಮತ್ತು ಸಹಕಾರದ ತತ್ವಗಳನ್ನು ಅನುಸರಿಸಬೇಕು ಎಂದರು. ಕರ್ನಾಟಕದ ಕಾನೂನುಬದ್ಧ ನೀರಿನ ಪಾಲು ಹಾಗೂ ನೀರಾವರಿ ಯೋಜನೆಗಳನ್ನು ಸಮಯಕ್ಕೆ ಪೂರ್ಣಗೊಳಿಸಲು ನೆರವು ನೀಡಬೇಕು ಎಂದು ಕೇಂದ್ರವನ್ನು ಒತ್ತಾಯಿಸಿದರು.

ಆರೋಗ್ಯ, ಶಿಕ್ಷಣ, ವಸತಿ, ಕರಾವಳಿ ಸವೆತ, ವಿಪತ್ತು ನಿರ್ವಹಣೆ, ಖನಿಜ ಸಂಪನ್ಮೂಲಗಳ ಮೇಲಿನ ರಾಜ್ಯಗಳ ಹಕ್ಕು ಹಾಗೂ ಮಾದಕ ವಸ್ತುಗಳ ಕಳ್ಳಸಾಗಣೆ ತಡೆ ಸೇರಿದಂತೆ ಹಲವು ವಿಷಯಗಳನ್ನೂ ಸಭೆಯಲ್ಲಿ ಪ್ರಸ್ತಾಪಿಸುವುದಾಗಿ ಮುಖ್ಯಮಂತ್ರಿ ತಿಳಿಸಿದರು.

## ಮೇಕೆದಾಟು, ಕ್ಷೇತ್ರ ಪುನರ್‌ವಿಂಗಡಣೆ: ಸಿಎಂ ಡಿ.ಕೆ.ಶಿ ಪ್ರಸ್ತಾವ

31ನೇ ದಕ್ಷಿಣ ವಲಯ ಮಂಡಳಿ ಸಭೆಯಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಮೇಕೆದಾಟು ಯೋಜನೆ, ಕ್ಷೇತ್ರ ಪುನರ್‌ವಿಂಗಡಣೆ ಹಾಗೂ ಮಹಿಳಾ ಮೀಸಲಾತಿ ಕುರಿತು ಪ್ರಮುಖ ವಿಚಾರಗಳನ್ನು ಪ್ರಸ್ತಾಪಿಸಿದರು.

ಮೇಕೆದಾಟು ಯೋಜನೆ ಕರ್ನಾಟಕದ ಜತೆಗೆ ತಮಿಳುನಾಡಿಗೂ ಮಹತ್ವದ್ದಾಗಿದೆ. ಯೋಜನೆಯಿಂದ ಹರಿಯುವ ನೀರು ತಮಿಳುನಾಡು ಹಾಗೂ ಪುದುಚೇರಿಯ ರೈತರಿಗೆ ಸಹಕಾರಿಯಾಗಲಿದೆ. ಕಾವೇರಿ ನೀರಿನ ವಿಚಾರದಲ್ಲಿ ಎರಡೂ ರಾಜ್ಯಗಳು ಪರಸ್ಪರ ಸಹಕಾರದೊಂದಿಗೆ ಪರಿಹಾರ ಕಂಡುಕೊಳ್ಳಬೇಕು ಎಂದು ಶಿವಕುಮಾರ್ ಹೇಳಿದರು.

ಜನಸಂಖ್ಯೆ ನಿಯಂತ್ರಣದಲ್ಲಿ ಯಶಸ್ವಿಯಾಗಿರುವ ರಾಜ್ಯಗಳ ರಾಜಕೀಯ ಪ್ರಾತಿನಿಧ್ಯ ಕಡಿಮೆಯಾಗಬಾರದು ಎಂದು ಅವರು ಒತ್ತಾಯಿಸಿದರು.

**ಮಹಿಳಾ ಮೀಸಲಾತಿ ಜಾರಿಗೆ ಆಗ್ರಹ:** ಪ್ರಸ್ತುತ ಇರುವ ಲೋಕಸಭಾ ಸ್ಥಾನಗಳ ಸಂಖ್ಯೆಯನ್ನು ಯಥಾಸ್ಥಿತಿಯಲ್ಲಿ ಕಾಯ್ದುಕೊಂಡೇ ಮಹಿಳಾ ಮೀಸಲಾತಿ ಜಾರಿಗೊಳಿಸಬೇಕು. ಮಹಿಳೆಯರಿಗೆ ನ್ಯಾಯಯುತ ಪ್ರಾತಿನಿಧ್ಯ ನೀಡುವಲ್ಲಿ ಮತ್ತಷ್ಟು ವಿಳಂಬ ಮಾಡಬಾರದು ಎಂದು ಶಿವಕುಮಾರ್ ಆಗ್ರಹಿಸಿದರು.

## ಸರ್ಕಾರಿ ಭೂಮಿ ಹರಾಜಿಗೆ ಸಿಎಂ ಆಕ್ಷೇಪ

ರಾಜ್ಯ ಸರ್ಕಾರಗಳು ಸಾರ್ವಜನಿಕ ವಲಯದ ಸಂಸ್ಥೆಗಳಿಗೆ (ಕಖಗ) ಮಂಜೂರು ಮಾಡಿರುವ ಭೂಮಿಯನ್ನು ಹರಾಜು ಹಾಕುತ್ತಿರುವುದಕ್ಕೆ ಕರ್ನಾಟಕ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಗುರುವಾರ ತೀವ್ರ ಆಕ್ಷೇಪ ವ್ಯಕ್ತಪಡಿಸಿದರು. ಫಲಾನುಭವಿ ಸಂಸ್ಥೆ ಕಾರ್ಯನಿರ್ವಹಿಸದೆ ಹೋದಾಗ ಅಥವಾ ತನ್ನ ಕಾರ್ಯಾಚರಣೆಯನ್ನು ಸ್ಥಗಿತಗೊಳಿಸಿದಾಗ ಅಂತಹ ಭೂಮಿಯನ್ನು ಸರ್ಕಾರಕ್ಕೆ ಹಿಂದಿರುಗಿಸಬೇಕು ಎಂದು ಅವರು ಹೇಳಿದರು.

ದಕ್ಷಿಣ ವಲಯ ಮಂಡಳಿ ಸಭೆಯಲ್ಲಿ ರಕ್ಷಣಾ ಭೂಮಿಯ ಬಳಕೆಗೆ ಸಂಬಂಧಿಸಿದ ವಿಷಯದ ಚರ್ಚೆ ವೇಳೆ ಈ ವಿಚಾರ ಪ್ರಸ್ತಾಪವಾಯಿತು. ರಾಷ್ಟ್ರ ನಿರ್ಮಾಣದ ಭಾಗವಾಗಿ ರಾಜ್ಯ ಸರ್ಕಾರಗಳು ಕಖಗಗಳು ಹಾಗೂ ಇತರ ಸಂಸ್ಥೆಗಳಿಗೆ ಉಚಿತವಾಗಿ ಮಂಜೂರು ಮಾಡಿರುವ ಭೂಮಿಯನ್ನು, ಸರ್ಕಾರದ ಅನುಮತಿ ಪಡೆಯದೆ ಬಳಿಕ ಮಾರಾಟ ಮಾಡುವುದು ಅಥವಾ ಹರಾಜು ಹಾಕುತ್ತಿರುವ ಬಗ್ಗೆ ಶಿವಕುಮಾರ್ ವ್ಯಾಪಕ ಕಳವಳ ವ್ಯಕ್ತಪಡಿಸಿದರು.

“ಇಂದು ಬೆಳಗ್ಗೆ ನನ್ನ ಅಧಿಕಾರಿಗಳಿಂದ ನನಗೆ ಕರೆ ಬಂದಿತ್ತು. ಕಾರ್ಯನಿರ್ವಹಿಸದೆ ಇರುವ ಖಖಿಖಯೊಂದು ಭೂಮಿಯನ್ನು ಹರಾಜು ಹಾಕುತ್ತಿದೆ ಎಂದು ಅವರು ತಿಳಿಸಿದರು. ನಾವು ಕಖಗಗಳಿಗೆ ಭೂಮಿಯನ್ನು ನೀಡುತ್ತೇವೆ. ಅವು ಮುಚ್ಚಿದಾಗ ಅಥವಾ ಕಾರ್ಯಾಚರಣೆಯಿಂದ ಹೊರಬಂದಾಗ ಆ ಭೂಮಿಯನ್ನು ಹರಾಜು ಹಾಕುತ್ತಾರೆ. ನಾವು ಭೂಮಿಯನ್ನು ನೀಡಿರುವುದರಿಂದ ಅಂತಹ ಭೂಮಿಯನ್ನು ಸರ್ಕಾರಕ್ಕೆ ಹಿಂದಿರುಗಿಸಬೇಕು. ರಾಜ್ಯ ಸರ್ಕಾರವಾಗಿ ನಾವು ನ್ಯಾಯಾಲಯಕ್ಕೆ ಹೋಗಿ ಇದನ್ನು ತಡೆಯುತ್ತೇವೆ ಮತ್ತು ಈ ಭೂಮಿಯನ್ನು ಅಭಿವೃದ್ಧಿಪಡಿಸಲು ಅನುಮತಿಯನ್ನೂ ನೀಡುವುದಿಲ್ಲ,” ಎಂದು ಅವರು ಹೇಳಿದರು.

ಸೂಕ್ತ ರಾಜ್ಯ ಪ್ರಾಧಿಕಾರಗಳ ಅನುಮತಿ ಅಥವಾ ಸಮ್ಮತಿ ಪಡೆಯದೆ ಫಲಾನುಭವಿಗಳು ಭೂಮಿಯನ್ನು ವಿಲೇವಾರಿ ಮಾಡಿರುವ ಹಲವು ಪ್ರಕರಣಗಳಿವೆ ಎಂದು ಮುಖ್ಯಮಂತ್ರಿ ಹೇಳಿದರು.

ರಾಷ್ಟ್ರ ನಿರ್ಮಾಣದ ದೊಡ್ಡ ಉದ್ದೇಶಕ್ಕಾಗಿ ಸಂಸ್ಥೆಗಳಿಗೆ ನೀಡಲಾದ ಸಂಪನ್ಮೂಲಗಳನ್ನು ಈ ರೀತಿಯಲ್ಲಿ ವಿಲೇವಾರಿ ಮಾಡುವುದು ದುರ್ಬಳಕೆಯಾಗಿದೆ ಎಂದು ಅವರು ಹೇಳಿದರು. ಇಂತಹ ಭೂಮಿಯ ಬಳಕೆ ಅಥವಾ ವಿಲೇವಾರಿ ಕುರಿತು ರಾಜ್ಯ ಸರ್ಕಾರಗಳಿಗೂ ನಿರ್ಧಾರ ಕೈಗೊಳ್ಳುವ ಅವಕಾಶ ಇರಬೇಕು ಎಂದು ಅವರು ಅಭಿಪ್ರಾಯಪಟ್ಟರು. ಶಿವಕುಮಾರ್ ಅವರ ಕಳವಳಕ್ಕೆ ಪ್ರತಿಕ್ರಿಯಿಸಿದ ದಕ್ಷಿಣ ವಲಯ ಮಂಡಳಿ ಸಭೆಯ ಅಧ್ಯಕ್ಷರೂ ಆಗಿರುವ ಕೇಂದ್ರ ಗೃಹ ಸಚಿವ ಅಮಿತ್ ಶಾ, ಇದು ನೀತಿಗೆ ಸಂಬಂಧಿಸಿದ ವಿಷಯವಾಗಿದ್ದು, ಕೇಂದ್ರ ಸರ್ಕಾರದ ಮುಂದೆ ಪ್ರಸ್ತಾಪಿಸಬೇಕು ಎಂದು ಹೇಳಿದರು.

## ಮೇಲ್ದಂಡೆ ಭದ್ರಾಗೆ ರೂ 5,300 ಕೋಟಿ ಬಿಡುಗಡೆಗೆ ಡಿಕೆಶಿ ಒತ್ತಾಯ

ಮೇಲ್ದಂಡೆ ಭದ್ರಾ ಯೋಜನೆಗೆ ಕೇಂದ್ರ ಬಜೆಟ್‌ನಲ್ಲಿ ಘೋಷಿಸಲಾಗಿರುವ ರೂ 5,300 ಕೋಟಿ ಅನುದಾನವನ್ನು ಶೀಘ್ರ ಬಿಡುಗಡೆ ಮಾಡುವಂತೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರನ್ನು ಒತ್ತಾಯಿಸಿದರು.

31ನೇ ದಕ್ಷಿಣ ವಲಯ ಮಂಡಳಿ ಸಭೆಯಲ್ಲಿ ವಿಷಯ ಪ್ರಸ್ತಾಪಿಸಿದ ಅವರು, ಹಿಂದಿನ ಬಿಜೆಪಿ ಸರ್ಕಾರದ ಅವಧಿಯಲ್ಲಿ ಕೇಂದ್ರ ಬಜೆಟ್‌ನಲ್ಲಿ ಅನುದಾನ ಘೋಷಣೆಯಾಗಿದ್ದರೂ ಇದುವರೆಗೆ ಹಣ ಬಿಡುಗಡೆಯಾಗಿಲ್ಲ. ಇದರಿಂದ ಯೋಜನೆ ಅನುಷ್ಠಾನಕ್ಕೆ ತೊಂದರೆಯಾಗುತ್ತಿದೆ ಎಂದು ಹೇಳಿದರು.

ಖಾಸಗಿ ಹಾಗೂ ಸರ್ಕಾರಿ ಸಂಸ್ಥೆಗಳ ಸಿಎಸ್‌ಆರ್ ನಿಧಿಯನ್ನು ರಾಜ್ಯದ ಸ್ಥಳೀಯ ಆದ್ಯತೆಗಳಿಗೆ ಅನುಗುಣವಾಗಿ ಬಳಸಲು ಅವಕಾಶ ನೀಡುವ ನೀತಿ ರೂಪಿಸಬೇಕು ಎಂದು ಶಿವಕುಮಾರ್ ಸಲಹೆ ನೀಡಿದರು. ಶಿಕ್ಷಣ ಮತ್ತು ಆರೋಗ್ಯ ಕ್ಷೇತ್ರಗಳಿಗೆ ಹೆಚ್ಚಿನ ಆದ್ಯತೆ ನೀಡಬೇಕಿದ್ದು, ನಿಧಿ ಬಳಕೆಯ ಬಗ್ಗೆ ರಾಜ್ಯ ಸರ್ಕಾರ ನಿರ್ಧರಿಸುವಂತಾಗಬೇಕು ಎಂದರು.

ಇದಕ್ಕೆ ಪ್ರತಿಕ್ರಿಯಿಸಿದ ಅಮಿತ್ ಶಾ, ಸರ್ಕಾರಿ ಸ್ವಾಮ್ಯದ ಸಂಸ್ಥೆಗಳ ಮುಖ್ಯಸ್ಥರೊಂದಿಗೆ ಈ ಕುರಿತು ಚರ್ಚಿಸುವಂತೆ ಸೂಚಿಸಿದರು. ಕ್ಷೇತ್ರ ಪುನರ್‌ವಿಂಗಡಣೆ ವಿಚಾರವನ್ನು ದಕ್ಷಿಣ ವಲಯ ಮಂಡಳಿ ಚರ್ಚೆಯೊಂದಿಗೆ ಬೆರೆಸಬಾರದು. ಅದು ರಾಜಕೀಯ ವಿಷಯ ಎಂದು ಶಾ ಸ್ಪಷ್ಟಪಡಿಸಿದರು.

## 31ನೇ ದಕ್ಷಿಣ ವಲಯ ಮಂಡಳಿ ಸಭೆ: ಸಿಎಂ ಡಿ.ಕೆ. ಶಿವಕುಮಾರ್ ಪ್ರಮುಖ ಬೇಡಿಕೆಗಳು

**ಕರ್ನಾಟಕ ಬಲಿಷ್ಠವಾದರೆ ಭಾರತವೂ ಬಲಿಷ್ಠ**

- ಕರ್ನಾಟಕ ಹಾಗೂ ದಕ್ಷಿಣ ಭಾರತ ದೇಶದ ಆರ್ಥಿಕ ಅಭಿವೃದ್ಧಿಯ ಪ್ರಮುಖ ಶಕ್ತಿಗಳಾಗಿವೆ.
- ದಕ್ಷಿಣದ ಐದು ರಾಜ್ಯಗಳು ದೇಶದ ಜನಸಂಖ್ಯೆಯ ಶೇ.20ರಷ್ಟಿದ್ದು, ಜಿಡಿಪಿಗೆ ಶೇ.33ರಷ್ಟು ಕೊಡುಗೆ ನೀಡುತ್ತಿವೆ.
- ಕರ್ನಾಟಕ ಭಾರತದ ಆರ್ಥಿಕತೆಯ ಪ್ರಮುಖ ಚಾಲಕ ಶಕ್ತಿಯಾಗಿದೆ.

**ದಕ್ಷಿಣಕ್ಕೆ ನ್ಯಾಯಯುತ ಅನುದಾನ ನೀಡಿ**

- ದಕ್ಷಿಣ ಭಾರತದ ರಾಜ್ಯಗಳಿಗೆ ತೆರಿಗೆ ಹಂಚಿಕೆ ಮತ್ತು ಕೇಂದ್ರ ಅನುದಾನದಲ್ಲಿ ನ್ಯಾಯಯುತ ಪಾಲು ನೀಡಬೇಕು.
- ಕರ್ನಾಟಕದ ತೆರಿಗೆ ಪಾಲು ಶೇ.4.7ರಿಂದ ಶೇ.3.6ಕ್ಕೆ ಇಳಿಕೆಯಾಗಿದ್ದು, ಆರು ವರ್ಷಗಳಲ್ಲಿ ಸುಮಾರು ರೂ 65 ಸಾವಿರ ಕೋಟಿ ನಷ್ಟವಾಗಿದೆ.
- 15ನೇ ಹಣಕಾಸು ಆಯೋಗ ಶಿಫಾರಸು ಮಾಡಿದ್ದ ರೂ 5,495 ಕೋಟಿ ವಿಶೇಷ ಅನುದಾನ ಹಾಗೂ ರೂ 6,000 ಕೋಟಿ ಅನುದಾನ ಬಿಡುಗಡೆ ಮಾಡಿಲ್ಲ.
- 16ನೇ ಹಣಕಾಸು ಆಯೋಗದ ಶೇ.4.131ರ ಪಾಲನ್ನು ಮತ್ತೆ ಶೇ.4.7ಕ್ಕೆ ಹೆಚ್ಚಿಸಬೇಕು.

**ಕರ್ನಾಟಕಕ್ಕೆ ವಿಶೇಷ ಯೋಜನೆಗಳ ಬೇಡಿಕೆ**

- ಬೆಂಗಳೂರು–ಮುಂಬೈ ಹೈಸ್ಪೀಡ್ ರೈಲು ಯೋಜನೆಗೆ ಆದ್ಯತೆ.
- ಎಸ್‌ಟಿಆರ್‌ಆರ್ ದಕ್ಷಿಣ ಭಾಗ ಪೂರ್ಣಗೊಳಿಸಬೇಕು.
- ರಾಯಚೂರಿಗೆ ಏಮ್ಸ್ ಮಂಜೂರು ಮಾಡಬೇಕು.
- ಕಲ್ಯಾಣ ಕರ್ನಾಟಕಕ್ಕೆ ವಿಶೇಷ ಪ್ಯಾಕೇಜ್ ನೀಡಬೇಕು.

**ಜನಸಂಖ್ಯೆ ನಿಯಂತ್ರಣಕ್ಕೆ ಶಿಕ್ಷೆ ಬೇಡ**

- ದಕ್ಷಿಣ ರಾಜ್ಯಗಳು ಜನಸಂಖ್ಯೆ ನಿಯಂತ್ರಣದಲ್ಲಿ ಯಶಸ್ವಿಯಾಗಿವೆ. ಇದರ ಪರಿಣಾಮವಾಗಿ ರಾಜಕೀಯ ಪ್ರಾತಿನಿಧ್ಯ ಕಡಿಮೆಯಾಗಬಾರದು.
- ಕ್ಷೇತ್ರ ಮರುವಿಂಗಡಣೆಯಲ್ಲಿ 1971ರ ಜನಗಣತಿ ಆಧಾರವನ್ನು ಪರಿಗಣಿಸಬೇಕು.
- ದಕ್ಷಿಣ ರಾಜ್ಯಗಳ ಆರ್ಥಿಕ ಕೊಡುಗೆಗೆ ತಕ್ಕ ರಾಜಕೀಯ ಧ್ವನಿ ಇರಬೇಕು.

**ಲೋಕಸಭಾ ಸ್ಥಾನ ಉಳಿಸಿ ಮಹಿಳಾ ಮೀಸಲಾತಿ ನೀಡಿ**

- ಪ್ರಸ್ತುತ ಲೋಕಸಭಾ ಸ್ಥಾನಗಳ ಸಂಖ್ಯೆಯನ್ನು ಯಥಾಸ್ಥಿತಿಯಲ್ಲಿ ಕಾಯ್ದುಕೊಳ್ಳಬೇಕು.
- ಇದೇ ಸ್ಥಾನಗಳೊಳಗೆ ಮಹಿಳಾ ಮೀಸಲಾತಿ ಜಾರಿಗೊಳಿಸಬೇಕು.
- ಮಹಿಳಾ ಪ್ರಾತಿನಿಧ್ಯ ಮತ್ತಷ್ಟು ವಿಳಂಬವಾಗಬಾರದು.

**ನೀರು ಹಂಚಿಕೆ ಬದಲು ನೀರಿನ ಸಹಕಾರ**

- ಕಾವೇರಿ, ಕೃಷ್ಣಾ, ತುಂಗಭದ್ರಾ, ಪೆನ್ನಾರ್ ಹಾಗೂ ಪಾಲಾರ್ ನದಿಗಳು ದಕ್ಷಿಣದ ಜೀವನಾಡಿಗಳು.
- ನದಿಗಳು ರಾಜ್ಯಗಳ ಗಡಿಗಳನ್ನು ಗುರುತಿಸುವುದಿಲ್ಲ.
- ನೀರು ರಾಜ್ಯಗಳನ್ನು ವಿಭಜಿಸುವ ಬದಲು ಒಗ್ಗೂಡಿಸಬೇಕು. ನ್ಯಾಯಯುತ ನೀರಿನ ಪಾಲು ಹಾಗೂ ಬಾಕಿ ನೀರಾವರಿ ಯೋಜನೆಗಳನ್ನು ತ್ವರಿತವಾಗಿ ಪೂರ್ಣಗೊಳಿಸಬೇಕು.

**ಖನಿಜ ಸಂಪನ್ಮೂಲಗಳ ಮೇಲಿನ ರಾಜ್ಯದ ಹಕ್ಕು**

- Mines & Minerals (Development & Regulation) Act, 2026 ಅನ್ನು ಮರುಪರಿಶೀಲಿಸಬೇಕು.
- ಖನಿಜಗಳ ಮೇಲೆ ತೆರಿಗೆ ವಿಧಿಸುವ ರಾಜ್ಯಗಳ ಹಕ್ಕನ್ನು ರಕ್ಷಿಸಬೇಕು. ಸುಪ್ರೀಂ ಕೋರ್ಟ್ ತೀರ್ಪಿನ ಹಿನ್ನೆಲೆಯಲ್ಲಿ ರಾಜ್ಯಗಳ ಹಕ್ಕುಗಳಿಗೆ ಧಕ್ಕೆ ಬರಬಾರದು.

**ಮಾದಕ ವಸ್ತುಗಳ ವಿರುದ್ಧ ಕಠಿಣ ಕ್ರಮ**

- ಮಾದಕ ವಸ್ತುಗಳ ಕಳ್ಳಸಾಗಣೆ ತಡೆಗೆ ಬಲಿಷ್ಠ ಕಾನೂನು ಅಗತ್ಯ.
- ಜಾರಿ ವ್ಯವಸ್ಥೆಯನ್ನು ಮತ್ತಷ್ಟು ಬಲಪಡಿಸಬೇಕು.
- ಕಳ್ಳಸಾಗಣೆದಾರರ ವಿರುದ್ಧ ತ್ವರಿತ ಹಾಗೂ ಕಠಿಣ ಕ್ರಮ ಕೈಗೊಳ್ಳಬೇಕು.

**ಕರ್ನಾಟಕದ ಆರ್ಥಿಕ ಶಕ್ತಿ**

- ಸಾಫ್ಟ್‌ವೇರ್ ರಫ್ತಿನಲ್ಲಿ ಕರ್ನಾಟಕ ಶೇ.42ರಷ್ಟು ಪಾಲಿನೊಂದಿಗೆ ದೇಶದಲ್ಲಿ ಮುಂಚೂಣಿಯಲ್ಲಿದೆ.
- ರಾಜ್ಯದಲ್ಲಿ ಸುಮಾರು 1,100 ಗ್ಲೋಬಲ್ ಕ್ಯಾಪಬಿಲಿಟಿ ಸೆಂಟರ್‌ಗಳಿವೆ.
- ದೇಶದ ಅಭಿವೃದ್ಧಿಯ ಪಯಣದಲ್ಲಿ ಕರ್ನಾಟಕ ಹಾಗೂ ದಕ್ಷಿಣ ಭಾರತ ಪ್ರಮುಖ ಪಾತ್ರ ವಹಿಸುತ್ತಿವೆ.


ಕರ್ನಾಟಕ ಸೇರಿದಂತೆ ದಕ್ಷಿಣ ಭಾರತದ ರಾಜ್ಯಗಳ ಆರ್ಥಿಕ ಕೊಡುಗೆ, ಅಭಿವೃದ್ಧಿ ಹಾಗೂ ಜನರ ಹಿತಾಸಕ್ತಿಗೆ ಅನುಗುಣವಾಗಿ ಕೇಂದ್ರ ಸರ್ಕಾರ ನ್ಯಾಯಯುತ ಅನುದಾನ ಮತ್ತು ಸಂಪನ್ಮೂಲ ಹಂಚಿಕೆ ಮಾಡಬೇಕು. ರಾಜ್ಯಗಳ ಹಕ್ಕು, ಪ್ರಾದೇಶಿಕ ಅಭಿವೃದ್ಧಿ ಹಾಗೂ ರಾಜಕೀಯ ಪ್ರಾತಿನಿಧ್ಯವನ್ನು ಗೌರವಿಸುವ ಮೂಲಕ ಕೇಂದ್ರ–ರಾಜ್ಯಗಳ ನಡುವಿನ ಸಹಕಾರವನ್ನು ಮತ್ತಷ್ಟು ಬಲಪಡಿಸಬೇಕು ಎಂದು ಸಿಎಂ ಡಿ.ಕೆ. ಶಿವಕುಮಾರ್ ಒತ್ತಾಯಿಸಿದರು.



31ನೇ ದಕ್ಷಿಣ ವಲಯ ಮಂಡಳಿ ಸಭೆಗೆ ಮುನ್ನ ಮಹಾಬಲಿಪುರಂನಲ್ಲಿ ಕೇರಳ ಮುಖ್ಯಮಂತ್ರಿ ವಿ.ಡಿ. ಸತೀಶನ್, ತೆಲಂಗಾಣ ಉಪ ಮುಖ್ಯಮಂತ್ರಿ ಭಟ್ಟಿ ವಿಕ್ರಮಾರ್ಕ, ತೆಲಂಗಾಣ ಕೃಷಿ ಸಚಿವ ತುಮ್ಮಲ ನಾಗೇಶ್ವರರಾವ್ ಹಾಗೂ ರಾಜ್ಯ ಗೃಹ ಸಚಿವ ಪ್ರಿಯಾಂಕ್ ಖರ್ಗೆ ಅವರೊಂದಿಗೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಚರ್ಚೆ ನಡೆಸಿದರು. ದಕ್ಷಿಣ ರಾಜ್ಯಗಳ ಅಭಿವೃದ್ಧಿ ಹಾಗೂ ಸಾಮಾನ್ಯ ಹಿತಾಸಕ್ತಿ ವಿಷಯಗಳ ಕುರಿತು ಅಭಿಪ್ರಾಯ ವಿನಿಮಯ ಮಾಡಿಕೊಳ್ಳಲಾಯಿತು.

# ನಾಟಕ ಅಕಾಡೆಮಿ ಪ್ರಶಸ್ತಿ: ಚಂದ್ರುಗೆ ಜೀವಮಾನ, ತಗಡೂರುಗೆ ವಾರ್ಷಿಕ ಪ್ರಶಸ್ತಿ

● ವಿಕ್ರಮ ವಾಹಿನಿ । ಬೆಂಗಳೂರು





ಕರ್ನಾಟಕ ನಾಟಕ ಅಕಾಡೆಮಿಯು 2026–27ನೇ ಸಾಲಿನ ಜೀವಮಾನ ಸಾಧನೆ, ವಾರ್ಷಿಕ ಹಾಗೂ ದತ್ತಿನಿಧಿ ಪ್ರಶಸ್ತಿಗಳ ಪಟ್ಟಿಯನ್ನು ಪ್ರಕಟಿಸಿದೆ. ರಂಗಭೂಮಿ, ಕಲೆ ಹಾಗೂ ಸಾಂಸ್ಕೃತಿಕ ಕ್ಷೇತ್ರಕ್ಕೆ ಗಣನೀಯ ಕೊಡುಗೆ ನೀಡಿದ ಹಲವು ಸಾಧಕರನ್ನು ಈ ಬಾರಿ ಗೌರವಿಸಲು ಆಯ್ಕೆ ಮಾಡಲಾಗಿದೆ.

ಖ್ಯಾತ ನಟ ಹಾಗೂ ರಂಗಕರ್ಮಿ ಡಾ. ಮುಖ್ಯಮಂತ್ರಿ ಚಂದ್ರು ಅವರಿಗೆ ಪ್ರತಿಷ್ಠಿತ ಜೀವಮಾನ ಸಾಧನೆ ಗೌರವ ಪ್ರಶಸ್ತಿ ಘೋಷಿಸಲಾಗಿದೆ. ದಶಕಗಳ ಕಾಲ ರಂಗಭೂಮಿ ಹಾಗೂ ಕಲಾ ಕ್ಷೇತ್ರದಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಿರುವ ಅವರ ಸಮಗ್ರ ಸಾಧನೆಯನ್ನು ಪರಿಗಣಿಸಿ ಈ ಗೌರವ ನೀಡಲಾಗಿದೆ.

ಹಿರಿಯ ಪತ್ರಕರ್ತ ಹಾಗೂ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಅವರಿಗೆ ವಾರ್ಷಿಕ ಪ್ರಶಸ್ತಿ ಘೋಷಿಸಲಾಗಿದೆ. ಹಾಸನ ಮೂಲದ ತಗಡೂರು ಅವರು ರಂಗಭೂಮಿಯ ಪ್ರಚಾರ, ಬೆಳವಣಿಗೆ ಹಾಗೂ ಸಾಂಸ್ಕೃತಿಕ ಚಟುವಟಿಕೆಗಳಿಗೆ ನೀಡಿರುವ ಕೊಡುಗೆಯನ್ನು ಪರಿಗಣಿಸಿ ಈ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ.

**ಹಲವು ಸಾಧಕರಿಗೆ ಗೌರವ**

ಜೀವಮಾನ ಸಾಧನೆ ಮತ್ತು ವಾರ್ಷಿಕ ಪ್ರಶಸ್ತಿಗಳ ಜತೆಗೆ ವಿವಿಧ ದತ್ತಿನಿಧಿ ಪ್ರಶಸ್ತಿಗಳಿಗೂ ರಾಜ್ಯದ ವಿವಿಧ ಭಾಗಗಳ ಕಲಾವಿದರು ಹಾಗೂ ರಂಗಕರ್ಮಿಗಳನ್ನು ಅಕಾಡೆಮಿ ಆಯ್ಕೆ ಮಾಡಿದೆ. ರಂಗಭೂಮಿ ಕ್ಷೇತ್ರದಲ್ಲಿ ನಿರಂತರವಾಗಿ ಸೇವೆ ಸಲ್ಲಿಸುತ್ತಿರುವ ಸಾಧಕರನ್ನು ಗುರುತಿಸಿ ಗೌರವಿಸುವ ಉದ್ದೇಶದಿಂದ ಪ್ರಶಸ್ತಿ ಆಯ್ಕೆ ಮಾಡಲಾಗಿದೆ. ಪ್ರಶಸ್ತಿ ಪುರಸ್ಕೃತರಿಗೆ ನಾಟಕ ಅಕಾಡೆಮಿ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು ಅಭಿನಂದನೆ ಸಲ್ಲಿಸಿದ್ದು, ಶೀಘ್ರದಲ್ಲೇ ಪ್ರಶಸ್ತಿ ಪ್ರದಾನ ಸಮಾರಂಭದ ದಿನಾಂಕವನ್ನು ಪ್ರಕಟಿಸುವ ಸಾಧ್ಯತೆ ಇದೆ.

ಈ ಪ್ರಶಸ್ತಿಗಳ ಮೂಲಕ ರಾಜ್ಯದ ವಿವಿಧ ಭಾಗಗಳಲ್ಲಿ ರಂಗಭೂಮಿ, ಕಲೆ ಹಾಗೂ ಸಾಂಸ್ಕೃತಿಕ ಕ್ಷೇತ್ರಕ್ಕೆ ದೀರ್ಘಕಾಲದಿಂದ ಸೇವೆ ಸಲ್ಲಿಸುತ್ತಿರುವ ಹಿರಿಯ ಹಾಗೂ ಪ್ರತಿಭಾವಂತ ಸಾಧಕರನ್ನು ಗುರುತಿಸಿ ಗೌರವಿಸಲಾಗುತ್ತಿದೆ. ಪ್ರಶಸ್ತಿ ಆಯ್ಕೆಯು ರಂಗಕಲೆಯ ಬೆಳವಣಿಗೆಗೆ ಮತ್ತಷ್ಟು ಉತ್ತೇಜನ ನೀಡಲಿದೆ ಎಂದು ಅಕಾಡೆಮಿ ತಿಳಿಸಿದೆ. ಜೀವಮಾನ ಸಾಧನೆ, ವಾರ್ಷಿಕ ಹಾಗೂ ದತ್ತಿನಿಧಿ ಪ್ರಶಸ್ತಿಗಳಿಗೆ ಆಯ್ಕೆಯಾದವರ ವಿವರಗಳನ್ನು ಅಕಾಡೆಮಿ ಶೀಘ್ರದಲ್ಲೇ ಅಧಿಕೃತವಾಗಿ ಪ್ರಕಟಿಸಲಿದೆ. ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಪುರಸ್ಕೃತರಿಗೆ ಸನ್ಮಾನ ಹಾಗೂ ಪ್ರಶಸ್ತಿ ಪ್ರದಾನ ನಡೆಯಲಿದ್ದು, ದಿನಾಂಕ ಮತ್ತು ಸ್ಥಳವನ್ನು ಬಳಿಕ ತಿಳಿಸಲಾಗುವುದು.

# ‘ಪ್ರತಿ ಹೋಬಳಿಗೆ ಒಂದು ವಸತಿ ಶಾಲೆ: ಹಂತ ಹಂತವಾಗಿ ಕ್ರಮ’

● ವಿಕ್ರಮ ವಾಹಿನಿ । ಬೆಂಗಳೂರು

ರಾಜ್ಯದ ಪ್ರತಿ ಹೋಬಳಿಗೆ ಒಂದು ವಸತಿ ಶಾಲೆ ಸ್ಥಾಪಿಸುವುದು ಸರ್ಕಾರದ ಧ್ಯೇಯವಾಗಿದ್ದು, ವಸತಿ ಶಾಲೆಗಳಿಲ್ಲದ ಹೋಬಳಿಗಳಲ್ಲಿ ಹೊಸ ವಸತಿ ಶಾಲೆಗಳನ್ನು ಹಂತ ಹಂತವಾಗಿ ಆರಂಭಿಸಲು ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಸಮಾಜ ಕಲ್ಯಾಣ ಸಚಿವ ಕೆ.ಹೆಚ್. ಮುನಿಯಪ್ಪ ತಿಳಿಸಿದ್ದಾರೆ.



ವಿಧಾನಸಭೆಯ ಪ್ರಶ್ನೋತ್ತರ ವೇಳೆಯಲ್ಲಿ ಬಾಗೇಪಲ್ಲಿ ಕ್ಷೇತ್ರದ ಶಾಸಕ ಎಸ್.ಎನ್. ಸುಬ್ಬಾರೆಡ್ಡಿ ಅವರು ಚಿಕ್ಕಬಳ್ಳಾಪುರ ಜಿಲ್ಲೆಯ ಬಾಗೇಪಲ್ಲಿ ತಾಲ್ಲೂಕಿನ ಗುಳೂರು ಹೋಬಳಿಯಲ್ಲಿ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವತಿಯಿಂದ ವಸತಿ ಶಾಲೆ ಮಂಜೂರು ಮಾಡುವಂತೆ ಮನವಿ ಮಾಡಿದರು.

ಇದಕ್ಕೆ ಉತ್ತರಿಸಿದ ಸಚಿವರು, ರಾಜ್ಯದಲ್ಲಿ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿ ಒಟ್ಟು 874 ವಸತಿ ಶಾಲೆಗಳು ಹಾಗೂ ಕಾಲೇಜುಗಳು ಮಂಜೂರಾಗಿ ಕಾರ್ಯನಿರ್ವಹಿಸುತ್ತಿವೆ ಎಂದು ತಿಳಿಸಿದರು.

ಬಾಗೇಪಲ್ಲಿ ತಾಲ್ಲೂಕಿನಲ್ಲಿ ಒಟ್ಟು ಮೂರು ವಸತಿ ಶಾಲೆಗಳಿದ್ದು, 2025–26ನೇ ಸಾಲಿನಲ್ಲಿ ಪಾತಪಾಳ್ಯ ಹೋಬಳಿಗೆ ಡಾ. ಬಿ.ಆರ್. ಅಂಬೇಡ್ಕರ್ ವಸತಿ ಶಾಲೆಯನ್ನು ಮಂಜೂರು ಮಾಡಲಾಗಿದೆ ಎಂದರು.

ರಾಜ್ಯದಲ್ಲಿ ವಸತಿ ಶಾಲೆಗಳಿಲ್ಲದ 66 ಗ್ರಾಮೀಣ ಹೋಬಳಿಗಳನ್ನು ಗುರುತಿಸಲಾಗಿದ್ದು, ಅಂತಹ ಪ್ರದೇಶಗಳಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ವಸತಿ ಶಾಲೆಗಳನ್ನು ಹಂತ ಹಂತವಾಗಿ ಮಂಜೂರು ಮಾಡಲು ಸರ್ಕಾರ ಕ್ರಮ ಕೈಗೊಳ್ಳಲಿದೆ ಎಂದು ಸಚಿವ ಕೆ.ಹೆಚ್. ಮುನಿಯಪ್ಪ ಸ್ಪಷ್ಟಪಡಿಸಿದರು.

# ‘ವಂದೇ ಮಾತರಂನ 2 ಚರಣ ಹಾಡುವ ಕಾಂಗ್ರೆಸ್ ನಿರ್ಧಾರ ಕಾನೂನುಬಾಹಿರ’

● ವಿಕ್ರಮ ವಾಹಿನಿ । ಚೆನ್ನೈ

ರಾಷ್ಟ್ರೀಯ ಗೀತೆ ವಂದೇ ಮಾತರಂನ ಎರಡು ಚರಣಗಳನ್ನು ಮಾತ್ರ ಹಾಡಲು ಕಾಂಗ್ರೆಸ್ ಪಕ್ಷ ನಿರ್ಧರಿಸಿರುವುದು ಕಾನೂನಿಗೆ ವಿರುದ್ಧವಾಗಿದ್ದು, ಮತಬ್ಯಾಂಕ್ ಓಲೈಕೆಯ ರಾಜಕೀಯದ ಭಾಗವಾಗಿದೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಆರೋಪಿಸಿದ್ದಾರೆ.

ಮಾಧ್ಯಮವೊಂದಕ್ಕೆ ನೀಡಿದ ಸಂದರ್ಶನದ ವಿಡಿಯೋವನ್ನು ಸಾಮಾಜಿಕ ಜಾಲತಾಣದಲ್ಲಿ ಹಂಚಿಕೊಂಡಿರುವ ಅಮಿತ್ ಶಾ, ಬುಧವಾರ ನಡೆದ ಕಾಂಗ್ರೆಸ್ ಕಾರ್ಯಕಾರಿ ಸಮಿತಿ ಸಭೆಯಲ್ಲಿ ವಂದೇ ಮಾತರಂ ಅನ್ನು ಪೂರ್ಣವಾಗಿ ಹಾಡುವ ಬದಲು ಎರಡು ಚರಣಗಳನ್ನು ಮಾತ್ರ ಹಾಡಲು ನಿರ್ಧರಿಸಲಾಗಿದೆ ಎಂದು ಹೇಳಿದ್ದಾರೆ. ಈ ನಿರ್ಧಾರ ಕಾಂಗ್ರೆಸ್‌ನ ವಿಭಜನಾತ್ಮಕ ಇತಿಹಾಸವನ್ನು ಮತ್ತೊಮ್ಮೆ ತೋರಿಸುತ್ತದೆ ಎಂದು ಅವರು ವಾಗ್ದಾಳಿ ನಡೆಸಿದ್ದಾರೆ.

“ಮತಬ್ಯಾಂಕ್ ಓಲೈಕೆಗಾಗಿ 1937ರಲ್ಲಿ ಕಾಂಗ್ರೆಸ್ ವಂದೇ ಮಾತರಂ ಅನ್ನು ಎರಡು ಭಾಗಗಳಾಗಿ ವಿಭಜಿಸಿತು. ಅಲ್ಲಿಂದ ಎರಡು ರಾಷ್ಟ್ರಗಳ ಬೇಡಿಕೆ ಬಲಗೊಂಡು, ಅಂತಿಮವಾಗಿ ದೇಶ ವಿಭಜನೆಗೆ ಕಾರಣವಾಯಿತು” ಎಂದು ಅಮಿತ್ ಶಾ ಆರೋಪಿಸಿದ್ದಾರೆ.

ವಂದೇ ಮಾತರಂನ 150ನೇ ವಾರ್ಷಿಕೋತ್ಸವದ ಸಂದರ್ಭದಲ್ಲಿ ಕೇಂದ್ರ ಸರ್ಕಾರ ಈ ಐತಿಹಾಸಿಕ ತಪ್ಪನ್ನು ಸರಿಪಡಿಸಿ ಪೂರ್ಣ ಗೀತೆಗೆ ಕಾನೂನು ರೂಪ ನೀಡಿದೆ. ಆದರೆ ರಾಹುಲ್ ಗಾಂಧಿ ನೇತೃತ್ವದಲ್ಲಿ ಕಾಂಗ್ರೆಸ್ ಮತ್ತೊಮ್ಮೆ ಮತಬ್ಯಾಂಕ್ ಓಲೈಕೆಯ ಹಾದಿ ಹಿಡಿದಿದೆ ಎಂದು ಅವರು ಟೀಕಿಸಿದ್ದಾರೆ.

“ವಂದೇ ಮಾತರಂ ಅನ್ನು ವಿಭಜಿಸುವ ತಪ್ಪು ಈಗಾಗಲೇ ಒಮ್ಮೆ ನಡೆದಿದೆ. ಅದರ ಪರಿಣಾಮಗಳನ್ನು ದೇಶ ಅನುಭವಿಸಿದೆ. ಕಾಂಗ್ರೆಸ್‌ನ ಓಲೈಕೆ ರಾಜಕಾರಣದ ವಿರುದ್ಧ ಜನರು ಒಗ್ಗೂಡಿ ಧ್ವನಿ ಎತ್ತಬೇಕು” ಎಂದು ಅಮಿತ್ ಶಾ ಕರೆ ನೀಡಿದ್ದಾರೆ.

ಇದೇ ವಿಚಾರವಾಗಿ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ನಿತಿನ್ ನಬಿನ್ ಕೂಡ ಕಾಂಗ್ರೆಸ್ ವಿರುದ್ಧ ವಾಗ್ದಾಳಿ ನಡೆಸಿದ್ದು, ಮತಗಳಿಗಾಗಿ ಕಾಂಗ್ರೆಸ್ ಹೊಸ ಮುಸ್ಲಿಂ ಲೀಗ್‌ನಂತೆ ವರ್ತಿಸುತ್ತಿದೆ ಎಂದು ಟೀಕಿಸಿದ್ದಾರೆ.

ಬುಧವಾರ ನಡೆದ ಕಾಂಗ್ರೆಸ್ ಕಾರ್ಯಕಾರಿ ಸಮಿತಿ ಸಭೆಯಲ್ಲಿ 1937ರ ನಿರ್ಣಯವನ್ನು ಅನುಸರಿಸಲು ತೀರ್ಮಾನಿಸಲಾಗಿದೆ. ಅದರಂತೆ ಇನ್ನು ಮುಂದೆ ಪಕ್ಷದ ಕಾರ್ಯಕ್ರಮಗಳಲ್ಲಿ ವಂದೇ ಮಾತರಂನ ಎರಡು ಚರಣಗಳನ್ನು ಮಾತ್ರ ಹಾಡಲು ನಿರ್ಧರಿಸಲಾಗಿದೆ ಎಂದು ವರದಿಯಾಗಿದೆ.

# ಕ್ಲೀನ್‌ಚಿಟ್ ಪಡೆಯಲಿ, ಬಳಿಕ ಸಚಿವ ಸ್ಥಾನ ಅಲಂಕರಿಸಲಿ: ಆರ್.ಅಶೋಕ್

● ವಿಕ್ರಮ ವಾಹಿನಿ । ಬೆಂಗಳೂರು

ವಾಲ್ಮೀಕಿ ಅಭಿವೃದ್ಧಿ ನಿಗಮದ ಹಣ ಅಕ್ರಮ ವರ್ಗಾವಣೆ ಪ್ರಕರಣದಲ್ಲಿ ಸಚಿವ ಬಿ.ನಾಗೇಂದ್ರ ಅವರು ತನಿಖಾ ಸಂಸ್ಥೆಗಳಿಂದ ಕ್ಲೀನ್‌ಚಿಟ್ ಪಡೆಯುವವರೆಗೆ ಸಚಿವ ಸ್ಥಾನದಲ್ಲಿ ಮುಂದುವರಿಯಬಾರದು ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಆಗ್ರಹಿಸಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, “ಇಡಿ ಮತ್ತು ಸಿಬಿಐ ತನಿಖೆಯಲ್ಲಿ ನಾಗೇಂದ್ರ ಅವರಿಗೆ ಇನ್ನೂ ಕ್ಲೀನ್‌ಚಿಟ್ ಸಿಕ್ಕಿಲ್ಲ. ಕನಿಷ್ಠ ಜನಪ್ರತಿನಿಧಿಗಳ ನ್ಯಾಯಾಲಯದಲ್ಲಾದರೂ ಆರೋಪಮುಕ್ತರಾಗಲಿ. ಬಳಿಕ ಅವರನ್ನು ಸಚಿವರನ್ನಾಗಿ ಮಾಡಿದರೆ ನಮ್ಮ ಅಭ್ಯಂತರವಿಲ್ಲ” ಎಂದರು.

ವಾಲ್ಮೀಕಿ ಅಭಿವೃದ್ಧಿ ನಿಗಮದ ರೂ 187 ಕೋಟಿ ಅಕ್ರಮ ವರ್ಗಾವಣೆ ಪ್ರಕರಣದಲ್ಲಿ ನಾಗೇಂದ್ರ ಅವರ ಖಾತೆಗೆ ರೂ 1.20 ಕೋಟಿ ಹಾಗೂ ಅವರ ಸಂಬಂಧಿಕರ ಖಾತೆಗಳಿಗೆ ಹಣ ವರ್ಗಾವಣೆಯಾಗಿದೆ ಎಂಬ ಆರೋಪಗಳಿವೆ. ನಿಗಮದ ಹಣ ಸುಮಾರು 600 ಖಾತೆಗಳಿಗೆ ವರ್ಗಾವಣೆಯಾಗಿದ್ದು, ಈ ಪ್ರಕರಣದ ಕುರಿತು ಸಿಬಿಐ ಮೂರು ಆರೋಪಪಟ್ಟಿ ಸಲ್ಲಿಸಿದೆ ಎಂದು ಅಶೋಕ ಹೇಳಿದರು.

**“ಇದು ಖಜಾನೆಗೆ ನೇರವಾಗಿ ಕೈ ಹಾಕಿದ ಪ್ರಕರಣ”:** “ಇದು ಕೇವಲ ಒಬ್ಬ ಸಚಿವರ ವಿಚಾರವಲ್ಲ. ಪರಿಶಿಷ್ಟ ಸಮುದಾಯದ ಅಭಿವೃದ್ಧಿಗೆ ಮೀಸಲಿದ್ದ ಹಣ ಅಕ್ರಮವಾಗಿ ವರ್ಗಾವಣೆಯಾಗಿದೆ. ಇದು ಖಜಾನೆಗೆ ನೇರವಾಗಿ ಕೈ ಹಾಕಿ ಕದ್ದ ಪ್ರಕರಣ. ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು,” ಎಂದು ಒತ್ತಾಯಿಸಿದರು.

ಬಿಜೆಪಿ ಸರ್ಕಾರದ ಅವಧಿಯಲ್ಲಿ ಆರೋಪ ಎದುರಿಸಿದ ಕೆ.ಎಸ್.ಈಶ್ವರಪ್ಪ ಅವರ ರಾಜೀನಾಮೆ ಪಡೆದಿದ್ದನ್ನು ಉಲ್ಲೇಖಿಸಿದ ಅಶೋಕ, “ಅಂದು ತನಿಖೆ ಪೂರ್ಣಗೊಳ್ಳುವ ಮುನ್ನವೇ ರಾಜೀನಾಮೆ ಪಡೆಯಲಾಗಿತ್ತು. ಈಗ ನಾಗೇಂದ್ರ ಅವರ ವಿಚಾರದಲ್ಲಿ ಬೇರೆ ಮಾನದಂಡ ಏಕೆ?” ಎಂದು ಪ್ರಶ್ನಿಸಿದರು. ನಾಗೇಂದ್ರ ಬದಲು ಕಾಂಗ್ರೆಸ್‌ನ ಇತರ ಪರಿಶಿಷ್ಟ ವರ್ಗದ ಶಾಸಕರಿಗೆ ಸಚಿವ ಸ್ಥಾನ ನೀಡಬಹುದು. ಆದರೆ ಆರೋಪ ಎದುರಿಸುತ್ತಿರುವ ವ್ಯಕ್ತಿಯನ್ನು ಸಂಪುಟದಲ್ಲಿ ಮುಂದುವರಿಸುವುದು ಸರಿಯಲ್ಲ ಎಂದು ಹೇಳಿದರು.

**“ರಾಜಕೀಯ ಪ್ರೇರಿತ ದಾಳಿ ಎನ್ನುವುದು ಸರಿಯಲ್ಲ”:** ಇಡಿ ಮತ್ತು ಸಿಬಿಐ ದಾಳಿಗಳು ರಾಜಕೀಯ ಪ್ರೇರಿತ ಎಂಬ ಆರೋಪವನ್ನು ತಳ್ಳಿಹಾಕಿದ ಅಶೋಕ, ಈ ಸಂಸ್ಥೆಗಳು ಹಲವು ವರ್ಷಗಳಿಂದ ಕಾರ್ಯನಿರ್ವಹಿಸುತ್ತಿವೆ. ತನಿಖೆ ನಡೆದ ಬಳಿಕವೇ ಆರೋಪಪಟ್ಟಿ ಸಲ್ಲಿಕೆಯಾಗಿದ್ದು, ಪ್ರಕರಣದ ಸತ್ಯಾಸತ್ಯತೆ ನ್ಯಾಯಾಲಯದಲ್ಲಿ ನಿರ್ಧಾರವಾಗಬೇಕು ಎಂದರು.

ನಾಗೇಂದ್ರ ಶೀಘ್ರ ರಾಜೀನಾಮೆ ನೀಡಿದರೆ ಬರ, ಬಿಡದಿ ಟೌನ್‌ಶಿಪ್, ನೈಸ್ ಟೋಲ್ ಹಾಗೂ ಕಾವೇರಿ ಸೇರಿದಂತೆ ರಾಜ್ಯದ ಪ್ರಮುಖ ಸಮಸ್ಯೆಗಳ ಕುರಿತು ವಿಧಾನಸಭೆಯಲ್ಲಿ ಚರ್ಚಿಸಲು ಅವಕಾಶ ಸಿಗಲಿದೆ ಎಂದು ಹೇಳಿದರು.

ಚಾಮರಾಜನಗರದಲ್ಲಿ ಸ್ಥಳೀಯ ಮೂವರು ಮೃತಪಟ್ಟ ಎನ್‌ಕೌಂಟರ್ ಪ್ರಕರಣದ ಕುರಿತು ತಮಿಳುನಾಡು ಸರ್ಕಾರ ನಿರ್ಣಯ ಕೈಗೊಂಡಿರುವುದು ರಾಜ್ಯಕ್ಕೆ ಅಪಮಾನಕರ ಬೆಳವಣಿಗೆ ಎಂದು ಅಶೋಕ ಹೇಳಿದರು. ಪ್ರಕರಣದಲ್ಲಿ ಅರಣ್ಯ ಇಲಾಖೆ ತಪ್ಪು ಮಾಡಿರುವುದು ಸ್ಪಷ್ಟವಾಗಿದ್ದು, ರಾಜ್ಯ ಸರ್ಕಾರವೇ ಸೂಕ್ತ ತನಿಖೆ ನಡೆಸಿ ಸಮಸ್ಯೆ ಬಗೆಹರಿಸಬೇಕಿತ್ತು ಎಂದು ಆಗ್ರಹಿಸಿದರು.




# ‘ನಾಗೇಂದ್ರ ರಾಜೀನಾಮೆವರೆಗೆ ಹೋರಾಟ’

● ವಿಕ್ರಮ ವಾಹಿನಿ । ಬೆಂಗಳೂರು

ವಾಲ್ಮೀಕಿ ಅಭಿವೃದ್ಧಿ ನಿಗಮದ ಹಣ ಅಕ್ರಮ ವರ್ಗಾವಣೆ ಪ್ರಕರಣದಲ್ಲಿ ಸಚಿವ ಬಿ.ನಾಗೇಂದ್ರ ರಾಜೀನಾಮೆ ನೀಡುವವರೆಗೆ ಬಿಜೆಪಿ ಹೋರಾಟ ಮುಂದುವರಿಸಲಿದೆ ಎಂದು ವಿಧಾನಸಭೆ ಪ್ರತಿಪಕ್ಷ ನಾಯಕ ಆರ್.ಅಶೋಕ ಹೇಳಿದರು.

ಸದನದಲ್ಲಿ ನಾಲ್ಕನೇ ದಿನವೂ ಬಿಜೆಪಿ ಸದಸ್ಯರು ಧರಣಿ ಮುಂದುವರಿಸಿದ ಹಿನ್ನೆಲೆಯಲ್ಲಿ ಮಾತನಾಡಿದ ಅವರು, “ಒಬ್ಬ ಸಚಿವರಿಗಾಗಿ 224 ಶಾಸಕರ ಹಕ್ಕುಚ್ಯುತಿ ಆಗುತ್ತಿದೆ. ನಾಗೇಂದ್ರ ರಾಜೀನಾಮೆ ನೀಡಿದ ಬಳಿಕ ಬರ, ಕೆಪಿಎಸ್‌ಸಿ ಹಗರಣ, ಪಿಂಚಣಿ ಬಾಕಿ ಸೇರಿದಂತೆ ಹಲವು ಜ್ವಲಂತ ಸಮಸ್ಯೆಗಳ ಕುರಿತು ಚರ್ಚಿಸಲು ಅವಕಾಶ ನೀಡಬೇಕು” ಎಂದು ಆಗ್ರಹಿಸಿದರು.

ಸಚಿವ ಡಾ.ಜಿ.ಪರಮೇಶ್ವರ್ ಅವರು ನಾಗೇಂದ್ರ ವಿರುದ್ಧ ಯಾವುದೇ ಪ್ರಕರಣವಿಲ್ಲ ಎಂದು ಸದನದಲ್ಲಿ ತಪ್ಪು ಮಾಹಿತಿ ನೀಡಿದ್ದಾರೆ ಎಂದು ಆರೋಪಿಸಿದ ಅಶೋಕ, ಸಚಿವರ ವಿರುದ್ಧದ ಪ್ರಕರಣಗಳ ದಾಖಲೆಗಳು ತಮ್ಮ ಬಳಿ ಇವೆ. ಸಿಬಿಐ ಆರೋಪಪಟ್ಟಿಯಲ್ಲಿ ನಾಗೇಂದ್ರ ಅವರ ಹೆಸರು ಇಲ್ಲ ಎನ್ನುವುದು ಸರಿಯಲ್ಲ ಎಂದರು.

**“ದಲಿತರ ಹೆಸರಿನಲ್ಲಿ ರಕ್ಷಣೆ ಪಡೆಯುತ್ತಿದ್ದಾರೆ”**

ವಾಲ್ಮೀಕಿ ಅಭಿವೃದ್ಧಿ ನಿಗಮದ ರೂ 187 ಕೋಟಿ ಹಣ ಪರಿಶಿಷ್ಟ ಪಂಗಡದ ಸಮುದಾಯಕ್ಕೆ ಸೇರಿದ್ದು, ಅದರಲ್ಲಿ ಅಕ್ರಮ ನಡೆದಿದೆ ಎಂದು ಅಶೋಕ ಆರೋಪಿಸಿದರು. “ಕೋಟ್ಯಂತರ ಬಡ ದಲಿತರ ಹಿತ ಮುಖ್ಯವೋ, ಒಬ್ಬ ನಾಗೇಂದ್ರ ಮುಖ್ಯವೋ ಎಂಬುದನ್ನು ಕಾಂಗ್ರೆಸ್ ಸರ್ಕಾರ ತೀರ್ಮಾನಿಸಬೇಕು” ಎಂದು ಹೇಳಿದರು.

ಹಗರಣದ ಬಳಿಕ ಆತ್ಮಹತ್ಯೆ ಮಾಡಿಕೊಂಡ ಅಧಿಕಾರಿ ಪಿ.ಚಂದ್ರಶೇಖರನ್ ಅವರ ಕುಟುಂಬಕ್ಕೆ ಸೂಕ್ತ ನೆರವು ನೀಡಿಲ್ಲ. ಆದರೆ ಆರೋಪ ಎದುರಿಸುತ್ತಿರುವ ನಾಗೇಂದ್ರ ಅವರನ್ನು ಮತ್ತೆ ಸಚಿವರನ್ನಾಗಿ ಮಾಡಲಾಗಿದೆ ಎಂದು ಟೀಕಿಸಿದರು.

**ಬರಗಾಲದ ಬಗ್ಗೆಯೂ ಚರ್ಚೆಗೆ ಆಗ್ರಹ**

ರಾಜ್ಯದಲ್ಲಿ ಬರ ಪರಿಸ್ಥಿತಿ ಇದ್ದರೂ ಸರ್ಕಾರ ಬರಗಾಲ ಘೋಷಿಸಿಲ್ಲ. ಕುಡಿಯುವ ನೀರು ಹಾಗೂ ಬರ ಪರಿಹಾರಕ್ಕೆ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ ಎಂಬುದನ್ನು ಸರ್ಕಾರ ಸ್ಪಷ್ಟಪಡಿಸಬೇಕು. ಪರಿಹಾರ ನೀಡದೆ ಬರಗಾಲದ ಕುರಿತು ಚರ್ಚೆ ನಡೆಸುವುದರಲ್ಲಿ ಅರ್ಥವಿಲ್ಲ ಎಂದು ಅಶೋಕ ಹೇಳಿದರು.

**ವಂದೇಮಾತರಂ ವಿಚಾರದಲ್ಲೂ ಕಾಂಗ್ರೆಸ್‌ಗೆ ತಿರುಗೇಟು**

ವಂದೇಮಾತರಂ ಗೀತೆಗೆ ಕಾಂಗ್ರೆಸ್ ನಾಯಕರು ಗೌರವ ನೀಡಿಲ್ಲ ಎಂದು ಆರೋಪಿಸಿದ ಅಶೋಕ, ಸ್ವಾತಂತ್ರ್ಯ ಹೋರಾಟದಲ್ಲಿ ಈ ಗೀತೆ ಯುವಜನರಿಗೆ ಪ್ರೇರಣೆಯಾಗಿತ್ತು ಎಂದರು. “ಮಲ್ಲಿಕಾರ್ಜುನ ಖರ್ಗೆ, ಸೋನಿಯಾ ಗಾಂಧಿ ಹಾಗೂ ರಾಹುಲ್ ಗಾಂಧಿ ವಂದೇಮಾತರಂಗೆ ಗೌರವ ನೀಡಲಿಲ್ಲ. ಅವರು ಭಾರತದವರೇ ಅಥವಾ ಇಟಲಿಯವರೇ ಎಂಬುದನ್ನು ತೀರ್ಮಾನಿಸಿಕೊಳ್ಳಲಿ” ಎಂದು ಟೀಕಿಸಿದರು.




ಪ್ರದೇಶ್ ಕಾಂಗ್ರೆಸ್ ಸಮಿತಿ ವತಿಯಿಂದ ಆಯೋಜಿಸಿದ್ದ ಮಾಜಿ ಪ್ರಧಾನಿ, ದಿವಂಗತ ರಾಜೀವ್ ಗಾಂಧಿ ಹಾಗೂ ಮಾಜಿ ಮುಖ್ಯಮಂತ್ರಿ, ದಿವಂಗತ ದೇವರಾಜ ಅರಸು ಅವರ ಜನ್ಮದಿನಾಚರಣೆ ಕಾರ್ಯಕ್ರಮದಲ್ಲಿ ಸಿದ್ದರಾಮಯ್ಯ ಅವರು ಭಾಗವಹಿಸಿದ್ದರು. ಇದೇ ವೇಳೆ ಕೆಪಿಸಿಸಿ ಹಿಂದುಳಿದ ವರ್ಗಗಳ ಅಧ್ಯಕ್ಷರಾಗಿ ಅಧಿಕಾರ ಸ್ವೀಕರಿಸಿದ ಡಿ.ಟಿ. ಶ್ರೀನಿವಾಸ್ ಅವರನ್ನು ಅಭಿನಂದಿಸಿ ಶುಭ ಹಾರೈಸಿದರು. ಎಐಸಿಸಿ ಹಿಂದುಳಿದ ವರ್ಗಗಳ ವಿಭಾಗದ ಅಧ್ಯಕ್ಷರಾದ ಅನಿಲ್ ಜೈಹಿಂದ್, ಕೆಪಿಸಿಸಿ ಅಧ್ಯಕ್ಷರಾದ ಬಿ.ಕೆ. ಹರಿಪ್ರಸಾದ್, ಉಪ ಮುಖ್ಯಮಂತ್ರಿ ಡಾ.ಜಿ. ಪರಮೇಶ್ವರ್, ಹಾಲಿ ಮತ್ತು ಮಾಜಿ ಸಚಿವರು, ಶಾಸಕರು, ಸಂಸದರು ಸೇರಿದಂತೆ ಅನೇಕ ಗಣ್ಯರು ಸಮಾರಂಭದಲ್ಲಿ ಉಪಸ್ಥಿತರಿದ್ದರು.

# ವಂದೇ ಮಾತರಂಗೆ ಅವಮಾನ: ಕಾಂಗ್ರೆಸ್ ತುಷ್ಟೀಕರಣದ ವಿರುದ್ಧ ರವಿಕುಮಾರ್ ಕಿಡಿ

● ವಿಕ್ರಮ ವಾಹಿನಿ । ಬೆಂಗಳೂರು

ರಾಷ್ಟ್ರೀಯ ಭಾವನೆಗಳನ್ನು ಪ್ರತಿನಿಧಿಸುವ ‘ವಂದೇ ಮಾತರಂ’ ಗೀತೆಯ ಪೂರ್ಣ ಆವೃತ್ತಿಯನ್ನು ಹಾಡಲು ಕಾಂಗ್ರೆಸ್ ನಿರಾಕರಿಸಿರುವುದು ಖಂಡನೀಯ. ಇದು ಆ ಪಕ್ಷದ ವಿಭಜನೆ ಹಾಗೂ ತುಷ್ಟೀಕರಣದ ರಾಜಕಾರಣವನ್ನು ಮತ್ತೊಮ್ಮೆ ಬಹಿರಂಗಪಡಿಸಿದೆ ಎಂದು ವಿಧಾನ ಪರಿಷತ್ ವಿರೋಧ ಪಕ್ಷದ ಮುಖ್ಯ ಸಚೇತಕ ಎನ್. ರವಿಕುಮಾರ್ ಆರೋಪಿಸಿದರು.



ಸ್ವಾತಂತ್ರ್ಯ ಹೋರಾಟದ ಸಂದರ್ಭದಲ್ಲಿ ಜಾತಿ, ಮತ, ಪಂಥಗಳ ಭೇದ ಮರೆತು ಕೋಟ್ಯಂತರ ಭಾರತೀಯರನ್ನು ಒಗ್ಗೂಡಿಸಿದ ‘ವಂದೇ ಮಾತರಂ’ಗೆ ಗೌರವ ನೀಡುವುದು ಪ್ರತಿಯೊಬ್ಬ ಭಾರತೀಯನ ಕರ್ತವ್ಯ. ಆದರೆ, ಸರ್ಕಾರಿ ಆದೇಶ ಹಾಗೂ ರಾಷ್ಟ್ರೀಯ ಶಿಷ್ಟಾಚಾರವನ್ನು ಕಡೆಗಣಿಸಿ ಗೀತೆಯ ಪೂರ್ಣ ಆವೃತ್ತಿಯನ್ನು ನಿರಾಕರಿಸಿರುವುದು ರಾಷ್ಟ್ರೀಯ ಭಾವನೆಗಳಿಗೆ ಮಾಡಿದ ಅಪಮಾನ ಎಂದು ಅವರು ಹೇಳಿದರು.

“ಮತಬ್ಯಾಂಕ್‌ಗಾಗಿ ರಾಷ್ಟ್ರೀಯ ಸಂಕೇತಕ್ಕೆ ಅಪಮಾನ”: 1937ರಲ್ಲಿ ‘ವಂದೇ ಮಾತರಂ’ನ ಮೊದಲ ಎರಡು ಚರಣಗಳನ್ನು ಮಾತ್ರ ಸ್ವೀಕರಿಸುವ ನಿರ್ಧಾರ ಕೈಗೊಂಡಿದ್ದ ಕಾಂಗ್ರೆಸ್, ಇದೀಗ ಅದೇ ರೀತಿಯ ರಾಜಕೀಯವನ್ನು ಮುಂದುವರಿಸುತ್ತಿದೆ ಎಂದು ರವಿಕುಮಾರ್ ಟೀಕಿಸಿದರು. ರಾಷ್ಟ್ರೀಯ ಹಿತಾಸಕ್ತಿಗಿಂತ ರಾಜಕೀಯ ಓಲೈಕೆಗೆ ಆದ್ಯತೆ ನೀಡಿದ ಕಾಂಗ್ರೆಸ್‌ನ ಹಿಂದಿನ ನೀತಿಗಳು ದೇಶದ ಮೇಲೆ ಪರಿಣಾಮ ಬೀರಿವೆ ಎಂದು ಆರೋಪಿಸಿದರು. ನೆಹರೂ ಅವಧಿಯ ಕಾಶ್ಮೀರ ನೀತಿ ಹಾಗೂ ಅಕ್ಸಾಯ್ ಚಿನ್ ವಿಚಾರಗಳನ್ನು ಉಲ್ಲೇಖಿಸಿದ ಅವರು, ರಾಷ್ಟ್ರೀಯ ಹಿತಾಸಕ್ತಿಯ ವಿಚಾರದಲ್ಲಿ ಕಾಂಗ್ರೆಸ್‌ನ ನಿಲುವುಗಳನ್ನು ಪ್ರಶ್ನಿಸಿದರು.

“ಬಂಕಿಮಚಂದ್ರ ಚಟ್ಟೋಪಾಧ್ಯಾಯರು ರಚಿಸಿದ ‘ವಂದೇ ಮಾತರಂ’ ಗೀತೆಗೆ ಕಾಂಗ್ರೆಸ್ ಏಕೆ ಹೆದರುತ್ತಿದೆ? ಕೇವಲ ಮತಬ್ಯಾಂಕ್ ಓಲೈಕೆಗಾಗಿ ರಾಷ್ಟ್ರೀಯ ಸಂಕೇತದ ಗೌರವವನ್ನು ಕಡೆಗಣಿಸುವುದು ಸರಿಯೇ?” ಎಂದು ಪ್ರಶ್ನಿಸಿದರು. ಕಾಂಗ್ರೆಸ್ ವಿಭಜನೆ ಹಾಗೂ ತುಷ್ಟೀಕರಣದ ರಾಜಕಾರಣ ಕೈಬಿಟ್ಟು, ರಾಷ್ಟ್ರೀಯ ಸಂಕೇತಗಳು ಮತ್ತು ಸರ್ಕಾರಿ ಆದೇಶಗಳಿಗೆ ಗೌರವ ನೀಡಬೇಕು. ‘ವಂದೇ ಮಾತರಂ’ ವಿಚಾರದಲ್ಲಿ ದೇಶದ ಜನರ ಭಾವನೆಗಳಿಗೆ ಧಕ್ಕೆ ತಂದಿದ್ದರೆ ಕಾಂಗ್ರೆಸ್ ನಾಯಕರು ಬಹಿರಂಗ ಕ್ಷಮೆಯಾಚಿಸಬೇಕು ಎಂದು ರವಿಕುಮಾರ್ ಆಗ್ರಹಿಸಿದರು.

ರಾಷ್ಟ್ರೀಯ ಏಕತೆ ಹಾಗೂ ದೇಶದ ಸಾರ್ವಭೌಮತ್ವಕ್ಕೆ ಸಂಬಂಧಿಸಿದ ವಿಚಾರಗಳಲ್ಲಿ ರಾಜಕೀಯ ಲಾಭಕ್ಕಿಂತ ರಾಷ್ಟ್ರಹಿತಕ್ಕೆ ಆದ್ಯತೆ ನೀಡಬೇಕು. ರಾಷ್ಟ್ರೀಯ ಸಂಕೇತಗಳ ಗೌರವದ ವಿಚಾರದಲ್ಲಿ ಯಾವುದೇ ರೀತಿಯ ರಾಜಕೀಯ ರಾಜಿ ಸಲ್ಲದು ಎಂದು ರವಿಕುಮಾರ್ ಹೇಳಿದರು.

# ರಾಜ್ಯಾದ್ಯಂತ ಮಳೆ ಮುಂದುವರಿಕೆ: ಕರ್ನಾಟಕದಲ್ಲಿ ಗುಡುಗು–ಮಿಂಚು, ಬಿರುಗಾಳಿ ಎಚ್ಚರಿಕೆ

● ವಿಕ್ರಮ ವಾಹಿನಿ । ನವದೆಹಲಿ

ದೇಶಾದ್ಯಂತ ಮುಂಗಾರು ಚುರುಕುಗೊಂಡಿದ್ದು, ಮಧ್ಯಪ್ರದೇಶ ಮತ್ತು ಆಗ್ನೇಯ ಉತ್ತರಪ್ರದೇಶದ ಮೇಲಿನ ಕಡಿಮೆ ಒತ್ತಡದ ಪ್ರದೇಶ ಹಾಗೂ ಸಕ್ರಿಯ ಮಾನ್ಸೂನ್ ಟ್ರಫ್‌ನ ಪ್ರಭಾವದಿಂದ ಮುಂದಿನ ಹಲವು ದಿನಗಳ ಕಾಲ ವಿವಿಧ ರಾಜ್ಯಗಳಲ್ಲಿ ವ್ಯಾಪಕ ಮಳೆಯಾಗುವ ಸಾಧ್ಯತೆ ಇದೆ ಎಂದು ಭಾರತೀಯ ಹವಾಮಾನ ಇಲಾಖೆ ತಿಳಿಸಿದೆ.

ಉತ್ತರ ಜಾರ್ಖಂಡ್‌ನಲ್ಲಿ ಉಂಟಾಗಿದ್ದ ವಾಯುಭಾರ ಕುಸಿತ ದುರ್ಬಲಗೊಂಡು ಇದೀಗ ಮಧ್ಯಪ್ರದೇಶ ಮತ್ತು ಆಗ್ನೇಯ ಉತ್ತರಪ್ರದೇಶದ ಮೇಲೆ ಕಡಿಮೆ ಒತ್ತಡದ ಪ್ರದೇಶವಾಗಿ ಮುಂದುವರಿದಿದೆ. ಇದರ ಪರಿಣಾಮವಾಗಿ ಮಧ್ಯ, ಉತ್ತರ ಹಾಗೂ ದೇಶದ ಹಲವು ಭಾಗಗಳಲ್ಲಿ ಮಳೆ ಚುರುಕುಗೊಂಡಿದೆ. ಪಶ್ಚಿಮ ಮಧ್ಯಪ್ರದೇಶದಲ್ಲಿ ಆಗಸ್ಟ್ 20ರಿಂದ 23ರವರೆಗೆ ಹಾಗೂ ಪೂರ್ವ ಮಧ್ಯಪ್ರದೇಶದಲ್ಲಿ ಆಗಸ್ಟ್ 20ರಿಂದ 25ರವರೆಗೆ ವ್ಯಾಪಕ ಮಳೆಯಾಗುವ ಮುನ್ಸೂಚನೆ ನೀಡಲಾಗಿದೆ.

**ಕರ್ನಾಟಕದಲ್ಲಿ ಬಿರುಗಾಳಿ ಸಾಧ್ಯತೆ**

ಕರ್ನಾಟಕದಲ್ಲಿ ವಾರದುದ್ದಕ್ಕೂ ಗುಡುಗು, ಮಿಂಚು ಸಹಿತ ಮಳೆಯಾಗುವ ಸಾಧ್ಯತೆಯಿದ್ದು, ಗಂಟೆಗೆ 40ರಿಂದ 50 ಕಿ.ಮೀ. ವೇಗದಲ್ಲಿ ಗಾಳಿ ಬೀಸುವ ಸಾಧ್ಯತೆಯಿದೆ. ಕೆಲವೆಡೆ ಗಾಳಿಯ ವೇಗ ಗಂಟೆಗೆ 60 ಕಿ.ಮೀ. ತಲುಪುವ ಸಾಧ್ಯತೆಯೂ ಇದೆ. ತಗ್ಗು ಪ್ರದೇಶಗಳು, ನೀರು ನಿಲ್ಲುವ ಪ್ರದೇಶಗಳು ಹಾಗೂ ಭೂಕುಸಿತದ ಸಾಧ್ಯತೆ ಇರುವ ಪ್ರದೇಶಗಳಲ್ಲಿ ಜನರು ಹೆಚ್ಚಿನ ಮುನ್ನೆಚ್ಚರಿಕೆ ವಹಿಸುವಂತೆ ಸೂಚಿಸಲಾಗಿದೆ.



ಹಿಮಾಚಲ ಪ್ರದೇಶ, ಉತ್ತರಾಖಂಡ ಹಾಗೂ ಜಮ್ಮು–ಕಾಶ್ಮೀರ ಮತ್ತು ಲಡಾಖ್‌ನಲ್ಲಿಯೂ ವ್ಯಾಪಕ ಮಳೆ ಮುಂದುವರಿಯುವ ಸಾಧ್ಯತೆಯಿದೆ. ಹಿಮಾಚಲ ಪ್ರದೇಶದಲ್ಲಿ ಮಳೆಯಿಂದ ಈಗಾಗಲೇ 166 ರಸ್ತೆಗಳು ಬಂದ್ ಆಗಿದ್ದು, 130 ವಿದ್ಯುತ್ ಪರಿವರ್ತಕಗಳು ಹಾಗೂ 222 ಕುಡಿಯುವ ನೀರಿನ ಯೋಜನೆಗಳಿಗೆ ಹಾನಿಯಾಗಿದೆ. ಮಂಡಿ ಜಿಲ್ಲೆಯಲ್ಲಿ ಮಾತ್ರ 84 ರಸ್ತೆಗಳು ಸಂಚಾರಕ್ಕೆ ನಿರ್ಬಂಧಿತವಾಗಿವೆ.

ದೆಹಲಿಯಲ್ಲಿ ಆಗಸ್ಟ್ 20ರವರೆಗೆ ಜೂನ್ 1ರಿಂದ ಒಟ್ಟು 535.1 ಮಿ.ಮೀ. ಮಳೆಯಾಗಿದ್ದು, ಇದು ವಾಡಿಕೆಗಿಂತ ಶೇ.21ರಷ್ಟು ಅಧಿಕವಾಗಿದೆ.

ಗಂಗಾ ಪಶ್ಚಿಮ ಬಂಗಾಳ, ಉಪ–ಹಿಮಾಲಯ ಪಶ್ಚಿಮ ಬಂಗಾಳ ಹಾಗೂ ಸಿಕ್ಕಿಂನಲ್ಲಿ ಆಗಸ್ಟ್ 20ರಿಂದ 25ರವರೆಗೆ ವ್ಯಾಪಕ ಮಳೆಯಾಗುವ ಸಾಧ್ಯತೆಯಿದ್ದು, ಬಿಹಾರ ಮತ್ತು ಒಡಿಶಾದಲ್ಲಿ ಕೆಲವೆಡೆ ಭಾರಿ ಮಳೆಯ ಮುನ್ಸೂಚನೆ ನೀಡಲಾಗಿದೆ.

ಕೇರಳ, ಲಕ್ಷದ್ವೀಪ, ದಕ್ಷಿಣ ತಮಿಳುನಾಡು ಹಾಗೂ ಪುದುಚೇರಿ ಕರಾವಳಿ ಭಾಗಗಳಲ್ಲಿ 1.1ರಿಂದ 2.2 ಮೀಟರ್ ಎತ್ತರದ ಅಲೆಗಳು ಏಳುವ ಸಾಧ್ಯತೆಯಿರುವುದರಿಂದ ಮೀನುಗಾರರು ಸಮುದ್ರಕ್ಕೆ ಇಳಿಯದಂತೆ ಹವಾಮಾನ ಇಲಾಖೆ ಎಚ್ಚರಿಕೆ ನೀಡಿದೆ.

ಮಾನ್ಸೂನ್ ಟ್ರಫ್ ಸಕ್ರಿಯವಾಗಿರುವುದರಿಂದ ಮುಂದಿನ ದಿನಗಳಲ್ಲಿಯೂ ದೇಶದ ಹಲವು ಭಾಗಗಳಲ್ಲಿ ಮಳೆ ಮುಂದುವರಿಯುವ ಸಾಧ್ಯತೆಯಿದೆ. ಕರ್ನಾಟಕದ ಜನರು ಸ್ಥಳೀಯ ಹವಾಮಾನ ಮುನ್ಸೂಚನೆ ಹಾಗೂ ಇಲಾಖೆಯ ಎಚ್ಚರಿಕೆಗಳನ್ನು ಗಮನಿಸಿ ಅಗತ್ಯ ಮುನ್ನೆಚ್ಚರಿಕೆ ವಹಿಸುವಂತೆ ಸೂಚಿಸಲಾಗಿದೆ.

www.VIKRAMAVAHINI.com
ಕನ್ನಡ ದಿನಪತ್ರಿಕೆ
PRGI NO: KARKAN/2018/78481
ವಿಕ್ರಮ ವಾಹಿನಿ

# ನಾಗೇಂದ್ರಗೆ ಹಣಕಾಸು ಖಾತೆ ಕೊಡಿ: ಸಿ.ಟಿ.ರವಿ ವ್ಯಂಗ್ಯ

● ವಿಕ್ರಮ ವಾಹಿನಿ | ಬೆಂಗಳೂರು



ವಾಲ್ಮೀಕಿ ಅಭಿವೃದ್ಧಿ ನಿಗಮದ ಹಣ ಅಕ್ರಮವಾಗಿ ವರ್ಗಾವಣೆಯಾದ ಪ್ರಕರಣದಲ್ಲಿ ಸಚಿವ ಬಿ.ನಾಗೇಂದ್ರ ವಿರುದ್ಧದ ಆರೋಪಗಳು ಗಂಭೀರವಾಗಿದ್ದು, ಅವರು ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಬೇಕು ಎಂದು ವಿಧಾನಪರಿಷತ್ ಸದಸ್ಯ ಸಿ.ಟಿ.ರವಿ ಆಗ್ರಹಿಸಿದರು.

ವಿಧಾನಸೌಧದ ಬಿಜೆಪಿ ಕಚೇರಿಯಲ್ಲಿ ಮಾತನಾಡಿದ ಅವರು, "ನಕಲಿ ಖಾತೆಗಳಿಗೆ ಹಣ ವರ್ಗಾವಣೆ ಮಾಡುವುದರಲ್ಲಿ ತಜ್ಞರಾಗಿರುವ ನಾಗೇಂದ್ರ ಅವರಿಗೆ ಅಂಕಿ-ಅಂಶಗಳ ಖಾತೆ ನೀಡುವ ಬದಲು ಹಣಕಾಸು ಖಾತೆಯನ್ನೇ ನೀಡಲಿ" ಎಂದು ವ್ಯಂಗ್ಯವಾಡಿದರು.

ನಾಗೇಂದ್ರ ವಿರುದ್ಧ ಲೋಕಾಯುಕ್ತ ಸೇರಿದಂತೆ 31 ಪ್ರಕರಣಗಳಿವೆ. ಸಿಬಿಐ ಮೂರು ಪ್ರಕರಣಗಳಲ್ಲಿ ಚಾರ್ಜ್‌ಶೀಟ್ ಸಲ್ಲಿಸಿದ್ದು, ಅದರಲ್ಲಿ ನಾಗೇಂದ್ರ ಅವರನ್ನು ಪ್ರಮುಖ ಆರೋಪಿ ಎಂದು ಉಲ್ಲೇಖಿಸಲಾಗಿದೆ ಎಂದು ಸಿ.ಟಿ.ರವಿ ಆರೋಪಿಸಿದರು. ವಾಲ್ಮೀಕಿ ಅಭಿವೃದ್ಧಿ ನಿಗಮದ ಬಹುಕೋಟಿ ಹಗರಣದಲ್ಲಿ ನಾಗೇಂದ್ರ ಆರೋಪಮುಕ್ತರಾಗಿಲ್ಲ. ನ್ಯಾಯಾಲಯ ಷರತ್ತುಬದ್ಧ ಜಾಮೀನು ನೀಡಿರುವುದಷ್ಟೇ ಹೊರತು ಕ್ಲೀನ್‌ಚಿಟ್ ನೀಡಿಲ್ಲ. ಹೀಗಾಗಿ ಅವರನ್ನು ಸಂಪುಟದಲ್ಲಿ ಮುಂದುವರಿಸಿರುವುದು ಸರಿಯಲ್ಲ ಎಂದು ಟೀಕಿಸಿದರು.

**"ಭ್ರಷ್ಟಾಚಾರಕ್ಕೆ ಜಾತಿಯಿಲ್ಲ":** ಪರಿಶಿಷ್ಟ ಪಂಗಡದ ಸಮುದಾಯಕ್ಕೆ ಸೇರಿದವರಾಗಿರುವ ಕಾರಣ ತಮ್ಮನ್ನು ಗುರಿಯಾಗಿಸಲಾಗುತ್ತಿದೆ ಎಂಬ ನಾಗೇಂದ್ರ ಅವರ ಆರೋಪವನ್ನು ಸಿ.ಟಿ.ರವಿ ತಳ್ಳಿಹಾಕಿದರು. "ಭ್ರಷ್ಟಾಚಾರಿಗಳಿಗೆ ಜಾತಿಯಿಲ್ಲ. ನುಂಗಿರುವುದು ಪರಿಶಿಷ್ಟ ಪಂಗಡದವರ ಕಲ್ಯಾಣಕ್ಕೆ ಮೀಸಲಿದ್ದ ಹಣ" ಎಂದು ಹೇಳಿದರು. ನಿಗಮದ ಅಧಿಕಾರಿ ಚಂದ್ರಶೇಖರ್ ಅವರ ಆತ್ಮಹತ್ಯೆ ಪ್ರಕರಣ ಹಾಗೂ ಡೆತ್‌ನೋಟ್‌ನಲ್ಲಿ ಉಲ್ಲೇಖವಾಗಿರುವ ಹೆಸರುಗಳು ಹಗರಣದ ಗಂಭೀರತೆಯನ್ನು ತೋರಿಸುತ್ತವೆ. ಸಚಿವರ ಮೌಖಿಕ ಸೂಚನೆಯ ಮೇರೆಗೆ ಹಣ ವರ್ಗಾವಣೆಯಾಗಿದೆ ಎಂಬ ಆರೋಪಗಳೂ ಕೇಳಿಬಂದಿವೆ ಎಂದು ಅವರು ಹೇಳಿದರು.

**ರಾಜೀನಾಮೆವರೆಗೆ ಬಿಜೆಪಿ ಹೋರಾಟ**

ಹಗರಣದಲ್ಲಿ ಸಚಿವರ ಆಪ್ತರು ಸೇರಿದಂತೆ ಹಲವು ಮಂದಿಯ ಪಾತ್ರದ ಕುರಿತು ತನಿಖೆ ನಡೆಯುತ್ತಿದೆ. ಜಾರಿ ನಿರ್ದೇಶನಾಲಯ ಆಸ್ತಿಗಳನ್ನು ಮುಟ್ಟುಗೋಲು ಹಾಕಿಕೊಂಡಿದ್ದು, ಇನ್ನೂ ಕೋಟ್ಯಂತರ ರೂಪಾಯಿ ಪತ್ತೆಯಾಗಬೇಕಿದೆ ಎಂದು ಸಿ.ಟಿ.ರವಿ ಹೇಳಿದರು.

"ನಾಗೇಂದ್ರ ರಾಜೀನಾಮೆ ನೀಡುವವರೆಗೆ ಬಿಜೆಪಿ ಹೋರಾಟ ಮುಂದುವರಿಯಲಿದೆ. ಜಾತಿ ಅಥವಾ ಸಂವಿಧಾನದ ಹೆಸರಿನಲ್ಲಿ ಭ್ರಷ್ಟಾಚಾರಕ್ಕೆ ಯಾರಿಗೂ ಲೈಸೆನ್ಸ್ ಇಲ್ಲ" ಎಂದು ಎಚ್ಚರಿಸಿದರು.

ನಾಗೇಂದ್ರ ಅವರನ್ನು ಸಂಪುಟದಲ್ಲಿ ಮುಂದುವರಿಸುವ ಮೂಲಕ ಸರ್ಕಾರವು ಪ್ರಾಮಾಣಿಕ ಅಧಿಕಾರಿಗಳು ಹಾಗೂ ಸಾರ್ವಜನಿಕರಿಗೆ ತಪ್ಪು ಸಂದೇಶ ನೀಡುತ್ತಿದೆ ಎಂದು ಆರೋಪಿಸಿದ ಅವರು, ಭ್ರಷ್ಟಾಚಾರದ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

## ಅತಿಥಿ ಉಪನ್ಯಾಸಕರ ಗೌರವಧನ ಪರಿಷ್ಕರಣೆಗೆ ಕ್ರಮ: ಮಧು ಬಂಗಾರಪ್ಪ

● ವಿಕ್ರಮ ವಾಹಿನಿ | ಬೆಂಗಳೂರು

ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಅತಿಥಿ ಉಪನ್ಯಾಸಕರ ಗೌರವಧನವನ್ನು ಮತ್ತಷ್ಟು ಪರಿಷ್ಕರಿಸುವ ಕುರಿತು ನಿಯಮಾನುಸಾರ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವ ಎಸ್. ಮಧು ಬಂಗಾರಪ್ಪ ತಿಳಿಸಿದ್ದಾರೆ.



ವಿಧಾನಸಭೆಯ ಪ್ರಶ್ನೋತ್ತರ ವೇಳೆಯಲ್ಲಿ ಮೂಡಿಗೆರೆ ಕ್ಷೇತ್ರದ ಶಾಸಕಿ ನಯನ ಮೋಟಮ್ಮ ಅವರು ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಅತಿಥಿ ಉಪನ್ಯಾಸಕರ ಗೌರವಧನ ಹೆಚ್ಚಿಸುವಂತೆ ಹಾಗೂ ಸೇವಾ ಪ್ರಮಾಣಪತ್ರ, ಗುರುತಿನ ಚೀಟಿ, ಪ್ರತಿ ತಿಂಗಳು ಒಂದು ದಿನ ರಜೆ, ಮಹಿಳಾ ಅತಿಥಿ ಉಪನ್ಯಾಸಕರಿಗೆ ಮಾತೃತ್ವ ರಜೆ ಮತ್ತು ಮುಟ್ಟಿನ ರಜೆ ಸೇರಿದಂತೆ ವಿವಿಧ ಸೌಲಭ್ಯಗಳನ್ನು ಒದಗಿಸುವಂತೆ ಮನವಿ ಮಾಡಿದರು. ಸಭಾಧ್ಯಕ್ಷರೂ ಈ ವಿಚಾರದ ಬಗ್ಗೆ ಗಮನಹರಿಸುವಂತೆ ಸಚಿವರಿಗೆ ಸೂಚಿಸಿದರು.

ಇದಕ್ಕೆ ಉತ್ತರಿಸಿದ ಸಚಿವರು, 2025ರ ಮೇ 15ರಂದು ಹೊರಡಿಸಿರುವ ಸರ್ಕಾರದ ಆದೇಶದಂತೆ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಅತಿಥಿ ಉಪನ್ಯಾಸಕರ ಗೌರವಧನವನ್ನು 14 ಸಾವಿರಕ್ಕೆ ಹೆಚ್ಚಿಸಲಾಗಿದ್ದು, ಅದರಂತೆ ಪ್ರಸ್ತುತ ಗೌರವಧನ ಪಾವತಿಸಲಾಗುತ್ತಿದೆ ಎಂದು ತಿಳಿಸಿದರು.

ಅತಿಥಿ ಉಪನ್ಯಾಸಕರ ಗೌರವಧನವನ್ನು ಮತ್ತಷ್ಟು ಹೆಚ್ಚಿಸುವುದು ಹಾಗೂ ಸರ್ಕಾರಿ ನೌಕರರಿಗೆ ಲಭ್ಯವಾಗುವ ಸೌಲಭ್ಯಗಳನ್ನು ಅವರಿಗೆ ಒದಗಿಸುವ ಕುರಿತು ಆರ್ಥಿಕ ಇಲಾಖೆಗೆ ನಿಯಮಾನುಸಾರ ಪ್ರಸ್ತಾವನೆ ಸಲ್ಲಿಸಿ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಸಚಿವ ಎಸ್. ಮಧು ಬಂಗಾರಪ್ಪ ಸ್ಪಷ್ಟಪಡಿಸಿದರು.

## ನಕಲಿ ಮದ್ಯ ಸೇವಿಸಿ 7 ಮಂದಿ ಸಾವು; 18 ಮಂದಿ ಆಸ್ಪತ್ರೆಗೆ ದಾಖಲು

● ವಿಕ್ರಮ ವಾಹಿನಿ | ಅಹಮದಾಬಾದ್

ಮದ್ಯ ನಿಷೇಧವಿರುವ ಗುಜರಾತ್‌ನಲ್ಲಿ ನಕಲಿ ಮದ್ಯ ಸೇವಿಸಿ ಸಾವನ್ನಪ್ಪಿದವರ ಸಂಖ್ಯೆ 7ಕ್ಕೆ ಏರಿಕೆಯಾಗಿದೆ. ವಿಷಪೂರಿತ ನಕಲಿ ಮದ್ಯ ಸೇವನೆಯಿಂದ ಅಸ್ವಸ್ಥಗೊಂಡಿರುವ 18 ಮಂದಿ ವಿವಿಧ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ ಎಂದು ಅಧಿಕಾರಿಗಳು ಗುರುವಾರ ತಿಳಿಸಿದ್ದಾರೆ.

ಭಾವನಗರ ಜಿಲ್ಲೆಯ ಘೋಗಾ ತಾಲೂಕಿನ ಖಾರ್ಖಡಿ ಗ್ರಾಮದಲ್ಲಿ ಆಗಸ್ಟ್ 18ರಂದು ಸಂಜೆ ಈ ಘಟನೆ ಬೆಳಕಿಗೆ ಬಂದಿದೆ. ಐವರು ಸ್ನೇಹಿತರು ಪಾರ್ಟಿ ನಡೆಸಿದ ಬಳಿಕ ಅವರ ಆರೋಗ್ಯದಲ್ಲಿ ಏಕಾಏಕಿ ಏರುಪೇರು ಕಾಣಿಸಿಕೊಂಡಿತ್ತು. ನಂತರ ನಕಲಿ ಮದ್ಯ ಸೇವನೆಯಿಂದಲೇ ಅವರು ಅಸ್ವಸ್ಥರಾಗಿರುವುದು ವೈದ್ಯಕೀಯ ಪರೀಕ್ಷೆಯಲ್ಲಿ ದೃಢಪಟ್ಟಿದೆ.

ಭಾವನಗರ ಜಿಲ್ಲಾಧಿಕಾರಿ ಮನೀಶ್ ಕುಮಾರ್ ಬನ್ಸಾಲ್ ಅವರ ಪ್ರಕಾರ, ಭಾವನಗರದ ವಿವಿಧ ಗ್ರಾಮಗಳು ಹಾಗೂ ನಗರದ ಭರತ್ ನಗರ, ತಲಾಜಾ ಜಕಾತ್‌ನಾಕ ಮತ್ತು ಕಾಲಿಯಬಿದ್ ಪ್ರದೇಶಗಳ ಜನರು ಸೇರಿದಂತೆ ಒಟ್ಟು 22 ಮಂದಿ ನಕಲಿ ಮದ್ಯ ಸೇವನೆಯಿಂದ ಬಾಧಿತರಾಗಿದ್ದಾರೆ. ಈ ಪೈಕಿ 18 ಮಂದಿ ಪ್ರಸ್ತುತ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.

ಘಟನೆಯಲ್ಲಿ ಮೃತಪಟ್ಟವರ ಸಂಖ್ಯೆ ಏಳಕ್ಕೆ ಏರಿಕೆಯಾಗಿದೆ. ಬಾಧಿತರನ್ನು ವೈದ್ಯಕೀಯವಾಗಿ ಪರೀಕ್ಷಿಸಿದಾಗ ಬಹುತೇಕ ಮಂದಿ ನಕಲಿ ಮದ್ಯ ಸೇವಿಸಿರುವುದು ಪತ್ತೆಯಾಗಿದೆ ಎಂದು ಜಿಲ್ಲಾಧಿಕಾರಿ ತಿಳಿಸಿದ್ದಾರೆ.

ನಕಲಿ ಮದ್ಯ ತಯಾರಿಕೆ ಮತ್ತು ಮಾರಾಟಕ್ಕೆ ಸಂಬಂಧಿಸಿದಂತೆ ಆಗಸ್ಟ್ 19ರಂದು ವಾರ್ಟೇಜ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ರಾಸಾಯನಿಕವಾಗಿ ಕಲುಷಿತಗೊಂಡ ಮದ್ಯವನ್ನು ಕಲಬೆರಕೆ ಮಾಡಿ ಮಾರಾಟ ಮಾಡುವ ಮೂಲಕ ಗ್ರಾಹಕರ ಜೀವಕ್ಕೆ ಅಪಾಯ ಉಂಟುಮಾಡಿದ ಆರೋಪದಡಿ ಪ್ರಕರಣ ದಾಖಲಿಸಿಕೊಂಡು ತನಿಖೆ ನಡೆಸಲಾಗುತ್ತಿದೆ.

## 'ಪೂರ್ವಜರ ಸಂಶೋಧನೆಗಳು ಮಂಗನ ಕೈಗೆ ಕೊಟ್ಟ ಮಾಣಿಕ್ಯದಂತಾಗಿದೆ'

● ವಿಕ್ರಮ ವಾಹಿನಿ | ಗೋಕರ್ಣ



**ನಿದ್ದೆಯನ್ನು ಯಾವ ಕಾಲದಲ್ಲಿ ಮಾಡಬೇಕು?**

**ರಾತ್ರಿಯ ನಿದ್ದೆಯು ಮಧುರವಾಗಬೇಕಾದರೆ ಊಟ ಮಾಡಿ ಸುಮಾರು ಒಂದೂವರೆ ಗಂಟೆಗೆ ನಿದ್ರೆಯನ್ನು ಮಾಡಬೇಕು. ರಾತ್ರಿಯನ್ನು ಕಫ, ಪಿತ್ತ, ವಾತ ಎಂದು ವಿಭಾಗಮಾಡಲಾಗಿದ್ದು, ಕಫ ಕಾಲದಲ್ಲಿ ನಿದ್ದೆಗೆ ಹೋದಾಗ ನಿದ್ದೆಯ ಪೂರ್ಣ ಪ್ರಯೋಜನವನ್ನು ಪಡೆಯಲು ಸಾಧ್ಯ. ತಡ ರಾತ್ರಿ ಪಿತ್ತ, ವಾತ ಸಮಯಗಳಲ್ಲಿ ಮಲಗಿದರೆ ನಿದ್ದೆಯ ನಿಜವಾದ ಪ್ರಯೋಜನ ಸಿಗದು. –ರಾಘವೇಶ್ವರ ಶ್ರೀ**

ರಸಗಳಿಗೂ ಭಾವಕ್ಕೂ ಗಾಢವಾದ ಸಂಬಂಧವಿದ್ದು, ಸೇವಿಸುವ ಆಹಾರದ ರಸಗಳ ಭಾವಕ್ಕೆ ಅನುಗುಣವಾಗಿ ಜೀವಿಯ ದೇಹಭಾವಗಳಲ್ಲಿ ಅವು ಪ್ರತಿಧ್ವನಿತವಾಗುತ್ತವೆ. ಸಿಹಿಯು ಸಂತೋಷವನ್ನು ಉಂಟುಮಾಡಿದರೆ, ಖಾರ ಕೋಪವನ್ನು, ಕಹಿ ದುಃಖವನ್ನು, ಹುಳಿಯು ಗರ್ವ ಭಾವನೆಯನ್ನು ಉಂಟುಮಾಡುತ್ತದೆ. ಜನ ಸಾಮಾನ್ಯನಿಗೆ ಎಲ್ಲಾ ಭಾವದ ಅವಶ್ಯಕತೆಯಿದ್ದು, ಷಡ್ರಸಗಳಿಂದ ಕೂಡಿದ ಆಹಾರವನ್ನು ಸೇವಿಸಬೇಕು ಎಂದು ಶ್ರೀರಾಮಚಂದ್ರಾಪುರ ಮಠದ ಜಗದ್ಗುರು ಶಂಕರಾಚಾರ್ಯ ಶ್ರೀಶ್ರೀ ರಾಘವೇಶ್ವರ ಭಾರತೀ ಮಹಾಸ್ವಾಮಿಗಳು ಹೇಳಿದರು.

ಗೋಕರ್ಣದ ಅಶೋಕೆಯ ಮೂಲಮಠದ ಪರಿಸರದಲ್ಲಿ ನಡೆಯುತ್ತಿರುವ 'ಅನ್ನಬ್ರಹ್ಮ ಚಾತುರ್ಮಾಸ್ಯ'ದ ಧರ್ಮಸಭೆಯಲ್ಲಿ 20.08.2026 ರಂದು 'ಅನ್ನಂ ಬ್ರಹ್ಮ' ಮಾಲಿಕೆಯಲ್ಲಿ ಪ್ರವಚನ ಅನುಗ್ರಹಿಸಿದ ಶ್ರೀಗಳು, ಆಯುರ್ವೇದವು ದೇಹ ವಿಜ್ಞಾನದ ವಿಷಯದಲ್ಲಿ ಅಗಾಧವಾದ ಸಂಶೋಧನೆಯನ್ನು ಮಾಡಿದ್ದು, ಆಧುನಿಕ ವಿಜ್ಞಾನವೂ ಸಂಶೋಧನೆಯಲ್ಲಿ ಹಿಂದೆ ಬಿದ್ದಿಲ್ಲ. ಆದರೆ ಯೋಗ ಶಾಸ್ತ್ರ ಹಾಗೂ ಆಯುರ್ವೇದವು ಅತ್ಯಂತ ಸಣ್ಣ ಸಣ್ಣ ವಿಚಾರಗಳನ್ನು ವಿವರಿಸುತ್ತದೆ. ಯಂತ್ರಗಳಿಲ್ಲದೇ ನಮ್ಮ ಆಚಾರ್ಯರು ಮಾಡಿದ ಸಾಧನೆ ಅನುಪಮ. ಸಾಮಾನ್ಯವಾಗಿ ಆಹಾರ ಪಚನವಾಗುವುದಕ್ಕೆ 4 ಗಂಟೆಗಳು ಬೇಕು. ಆಹಾರವು ಮೂರು ಹಂತದಲ್ಲಿ ಪಚನವಾಗುತ್ತದೆ. ವಿವಿಧ ಹಂತದಲ್ಲಿ ಯಾವ ಯಾವ ರಸ ಉತ್ಪತ್ತಿಯಾಗುತ್ತದೆ ಎಂದೂ ವಿವರಿಸಿದ್ದಾರೆ. ಆದರೆ ನಮ್ಮ ತಲೆಮಾರಿಗೆ ಇದು ಮಂಗನ ಕೈಯಿಗೆ ಕೊಟ್ಟ ಮಾಣಿಕ್ಯದಂತಾಗಿದ್ದು, ನಮಗೆ ನಮ್ಮ ಪೂರ್ವಜರ ಸಂಶೋಧನೆಗಳ ಅರಿವೇ ಇಲ್ಲದಂತಾಗಿದೆ ಎಂದು ಬೇಸರವನ್ನು ವ್ಯಕ್ತಪಡಿಸಿದರು.

ದೇಹದಲ್ಲಿ ಅಗ್ನಿ ಉತ್ತುಂಗದಲ್ಲಿದ್ದರೆ ಎಂತಹಾ ವಿಷವನ್ನೂ ಜೀರ್ಣಮಾಡಿಕೊಳ್ಳಬಹುದು. ಇದಕ್ಕೆ ನಳ ಮಹಾರಾಜ ಉದಾಹರಣೆಯಾಗಿದ್ದು, ನಳನು ಕಾರ್ಕೋಟ ಸರ್ಪದ ವಿಷವನ್ನೇ ಜೀರ್ಣಮಾಡಿಕೊಂಡ ಎಂದು ನಳನ ಅಗ್ನಿಜಯ ಸಾಮರ್ಥ್ಯವನ್ನು ವಿವರಿಸಿದರು.

ಆಹಾರವು ದೇಹದ ಧಾತುಗಳಾಗಿ ಪರಿವರ್ತನೆಯಾಗಲು ಊಷ್ಮಾ, ವಾಯು, ಕ್ಲೇದ, ಸ್ನೇಹ, ಕಾಲ ಮತ್ತು ಸಮಯೋಗ ಎಂಬ ಆರು ಅಂಶಗಳು ಕಾರ್ಯನಿರ್ವಹಿಸುತ್ತವೆ. ಇವೆಲ್ಲವೂ ಸರಿಯಾದ ಸಮಯ ಮತ್ತು ಸಮತೋಲನದೊಂದಿಗೆ ಕಾರ್ಯನಿರ್ವಹಿಸಿದಾಗ ಜೀರ್ಣಕ್ರಿಯೆ ಸಮರ್ಪಕವಾಗಿ ನಡೆಯುತ್ತದೆ.

ಆಹಾರವನ್ನು ಸಮರ್ಪಕವಾಗಿ ಅಗಿದು ರಸವಾಗುವಂತೆ ಮಾಡಿ ಸೇವಿಸಬೇಕು ಹಾಗೂ ನೀರನ್ನು ಗುಟುಕು ಗುಟುಕಾಗಿ ಸೇವಿಸಬೇಕು. ಊಟದ ಮಧ್ಯೆ ಅತಿಯಾದ ಪ್ರಮಾಣದಲ್ಲಿ ನೀರು ಕುಡಿಯುವುದರಿಂದ ಜೀರ್ಣಕ್ರಿಯೆಯ ಸಮತೋಲನಕ್ಕೆ ಧಕ್ಕೆಯಾಗಬಹುದು ಎಂಬ ಅಭಿಪ್ರಾಯವೂ ಇದೆ ಎಂದರು.



ಹೊನ್ನಾವರ ಹವ್ಯಕ ಮಂಡಲದ ಕರ್ಕಿ, ಅಪ್ಸರಕೊಂಡ, ಭಟ್ಕಳ, ಮರವಂತೆ, ಭವತಾರಿಣೀ ಹವ್ಯಕ ವಲಯಗಳ ಪರವಾಗಿ ಉದಯ ಭಟ್ ಕುಟುಂಬದವರು ಗುರುಭಿಕ್ಷಾಸೇವೆ ಸಮರ್ಪಿಸಿದರು. ನಾಗರಾಜ ಮತ್ತಿಗಾರ, ರಾಧಾಕೃಷ್ಣ ಭಟ್ ಭಟ್ಕಳ, ಹರಿಪ್ರಸಾದ ಪೆರಿಯಪ್ಪು, ಜಿ.ಎಸ್. ಹೆಗಡೆ, ಸುಧಾಕರ ಬಡಗಣಿ, ವಿಷ್ಣು ಭಟ್ ಕವಲಕ್ಕಿ, ದಿನಪ್ರಧಾನರಾಗಿ ರಾಮ ಭಟ್ ರಾಮಕುಂಜ ದಂಪತಿಗಳು ಉಪಸ್ಥಿತರಿದ್ದರು.

## ಗ್ರಾಮೀಣ ಕುಡಿಯುವ ನೀರು ಸರಬರಾಜಿಗೆ 'ಜಲ ಆಸ್ತಿ' ಡಿಜಿಟಲ್ ವ್ಯವಸ್ಥೆ

● ವಿಕ್ರಮ ವಾಹಿನಿ | ಬೆಂಗಳೂರು

*ಗ್ರಾಮೀಣ ನೀರು ಸರಬರಾಜು ಮೂಲಸೌಕರ್ಯಗಳ ಸುಸ್ಥಿರ ಹಾಗೂ ವೈಜ್ಞಾನಿಕ ನಿರ್ವಹಣೆಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಹಾಗೂ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ 'ಜಲ ಆಸ್ತಿ' ಎಂಬ ನೂತನ ಭೌಗೋಳಿಕ ಮಾಹಿತಿ ವ್ಯವಸ್ಥೆ ಆಧಾರಿತ ಮೊಬೈಲ್ ಮತ್ತು ಅಂತರ್ಜಾಲ ತಂತ್ರಾಂಶವನ್ನು ಅಭಿವೃದ್ಧಿಪಡಿಸಿದೆ.*

*2025-26ನೇ ಸಾಲಿನ ಆಯವ್ಯಯ ಘೋಷಣೆಯಂತೆ ಕರ್ನಾಟಕ ರಾಜ್ಯ ದೂರ ಸಂವೇದಿ ಅನ್ವಯಿಕ ಕೇಂದ್ರದ ಸಹಯೋಗದಲ್ಲಿ ಈ ವ್ಯವಸ್ಥೆಯನ್ನು ಜಾರಿಗೆ ತರಲಾಗುತ್ತಿದೆ. ಇದರಡಿ ರಾಜ್ಯದ ಗ್ರಾಮೀಣ ನೀರು ಸರಬರಾಜು ಮೂಲಸೌಕರ್ಯಗಳನ್ನು ಅತ್ಯಾಧುನಿಕ ತಂತ್ರಜ್ಞಾನದ ಮೂಲಕ ಗುರುತಿಸಿ, ಅವುಗಳ ಸ್ಥಿತಿ ಹಾಗೂ ಕಾರ್ಯನಿರ್ವಹಣೆಯ ಮಾಹಿತಿಯನ್ನು ನೈಜ ಸಮಯದಲ್ಲಿ ದಾಖಲಿಸಲಾಗುತ್ತಿದೆ.*

*ಇಲಾಖೆಯ ವ್ಯಾಪ್ತಿಯಲ್ಲಿರುವ ಗ್ರಾಮೀಣ ನೀರು ಸರಬರಾಜು ಆಸ್ತಿಗಳನ್ನು ಗರಿಷ್ಠ 5 ಮೀಟರ್‌ಗಳ ನಿಖರತೆಯೊಂದಿಗೆ ಸ್ಥಳ ಗುರುತಿಸಲಾಗುತ್ತಿದೆ. ಆಸ್ತಿಯ ಮೂಲ ಮಾಹಿತಿ, ಭೌತಿಕ ಸ್ಥಿತಿ ಹಾಗೂ ಕಾರ್ಯಾಚರಣೆ ಮತ್ತು ನಿರ್ವಹಣೆಯ ವಿವರಗಳನ್ನು ದಾಖಲಿಸಲಾಗುತ್ತಿದೆ. ಬೋರ್‌ವೆಲ್, ಮೇಲ್ಮೈ ನೀರಿನ ತೊಟ್ಟಿ, ನೀರು ಶುದ್ಧೀಕರಣ ಘಟಕ, ಪಂಪ್ ಹೌಸ್, ಕೈಪಂಪ್ ಸೇರಿದಂತೆ ಒಟ್ಟು 19 ವಿಧದ ಆಸ್ತಿಗಳನ್ನು ಪ್ರತಿ ಆರು ತಿಂಗಳಿಗೊಮ್ಮೆ ಮರುಪರಿಶೀಲಿಸಿ ನಿರ್ವಹಣೆ ಕೈಗೊಳ್ಳಲು ವೇಳಾಪಟ್ಟಿ ರೂಪಿಸಲಾಗಿದೆ.*

*ಆಸ್ತಿ ಪರಿಶೀಲನೆಗೆ ಮೂರು ಹಂತದ ವ್ಯವಸ್ಥೆ ಜಾರಿಯಲ್ಲಿದೆ. ಮೊದಲ ಹಂತದಲ್ಲಿ ಸಹಾಯಕ ಇಂಜಿನಿಯರ್, ಕಿರಿಯ ಇಂಜಿನಿಯರ್ ಮತ್ತು ಬೆಂಬಲ ಇಂಜಿನಿಯರ್‌ಗಳಿಂದ ಶೇಕಡ 100ರಷ್ಟು ಆಸ್ತಿಗಳ ಪರಿಶೀಲನೆ ನಡೆಯಲಿದೆ. ಎರಡನೇ ಹಂತದಲ್ಲಿ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಶೇಕಡ 5ರಷ್ಟು ಆಸ್ತಿಗಳನ್ನು ಮಾದರಿ ಆಧಾರದಲ್ಲಿ ಪರಿಶೀಲಿಸಲಿದ್ದಾರೆ. ಮೂರನೇ ಹಂತದಲ್ಲಿ ಕಾರ್ಯಪಾಲಕ ಇಂಜಿನಿಯರ್ ಶೇಕಡ 2ರಷ್ಟು ಆಸ್ತಿಗಳ ಮಾದರಿ ಪರಿಶೀಲನೆ ನಡೆಸಲಿದ್ದಾರೆ.*

*ಗೂಗಲ್ ಪ್ಲೇ ಮಳಿಗೆಯಲ್ಲಿ ಲಭ್ಯವಿರುವ ಮೊಬೈಲ್ ತಂತ್ರಾಂಶದ ಮೂಲಕ ಈಗಾಗಲೇ 847 ಇಂಜಿನಿಯರ್‌ಗಳಿಗೆ ಪ್ರವೇಶ ಗುರುತುಗಳನ್ನು ನೀಡಿ ಗ್ರಾಮ ಪಂಚಾಯಿತಿಗಳನ್ನು ನಿಯೋಜಿಸಲಾಗಿದೆ.*

*ಈ ತಂತ್ರಜ್ಞಾನ ಆಧಾರಿತ ವ್ಯವಸ್ಥೆಯು ಗ್ರಾಮೀಣ ನೀರು ಸರಬರಾಜು ಆಸ್ತಿಗಳ ನಿಖರ ಮಾಹಿತಿ ಸಂಗ್ರಹ, ವೈಜ್ಞಾನಿಕ ಯೋಜನೆ, ಸಮಯೋಚಿತ ನಿರ್ವಹಣೆ ಹಾಗೂ ಉತ್ತಮ ಸೇವಾ ವಿತರಣೆಗೆ ನೆರವಾಗಲಿದೆ. ರಾಜ್ಯದ ಗ್ರಾಮೀಣ ನೀರು ಸರಬರಾಜು ವ್ಯವಸ್ಥೆಯನ್ನು ಮತ್ತಷ್ಟು ಪರಿಣಾಮಕಾರಿಯಾಗಿ ನಿರ್ವಹಿಸುವಲ್ಲಿ 'ಜಲ ಆಸ್ತಿ' ಮಹತ್ವದ ಡಿಜಿಟಲ್ ಹೆಜ್ಜೆಯಾಗಿದೆ.*

## ಸಾಲು ಸಾಲು ರಜೆ: ಬಸ್‌ಗಳಿಗೆ ಭರ್ಜರಿ ಡಿಮ್ಯಾಂಡ್

● ವಿಕ್ರಮ ವಾಹಿನಿ | ಬೆಂಗಳೂರು

ವರಮಹಾಲಕ್ಷ್ಮಿ ಹಬ್ಬದ ಸಂಭ್ರಮದ ಬೆನ್ನಲ್ಲೇ ನಾಲ್ಕನೇ ಶನಿವಾರ ಹಾಗೂ ಭಾನುವಾರದ ರಜೆಗಳು ಬಂದಿರುವ ಹಿನ್ನೆಲೆಯಲ್ಲಿ ಬೆಂಗಳೂರಿನಿಂದ ಸ್ವಂತ ಊರುಗಳಿಗೆ ತೆರಳುವವರ ಸಂಖ್ಯೆ ಹೆಚ್ಚಾಗಿದೆ. ಪರಿಣಾಮ ಮೆಜೆಸ್ಟಿಕ್‌ನ ಕೆಎಸ್‌ಆರ್‌ಟಿಸಿ ಹಾಗೂ ಖಾಸಗಿ ಬಸ್ ನಿಲ್ದಾಣಗಳಲ್ಲಿ ಗುರುವಾರ ಪ್ರಯಾಣಿಕರ ದಟ್ಟಣೆ ಕಂಡುಬಂದಿತು.

ಕುಟುಂಬ ಸಮೇತ ಹಬ್ಬ ಆಚರಿಸಲು ಸಾವಿರಾರು ಮಂದಿ ಊರುಗಳತ್ತ ಹೊರಟಿದ್ದು, ಮೆಜೆಸ್ಟಿಕ್‌ನಲ್ಲಿ ಬಸ್‌ಗಳಿಗಾಗಿ ಪ್ರಯಾಣಿಕರು ತಂಡೋಪತಂಡವಾಗಿ ಸೇರಿದ್ದರು. ಮಂಗಳೂರು, ಉಡುಪಿ, ಕುಂದಾಪುರ, ಶಿವಮೊಗ್ಗ, ಹುಬ್ಬಳ್ಳಿ, ಧಾರವಾಡ, ಬೆಳಗಾವಿ, ಬಾಗಲಕೋಟೆ, ಕೊಪ್ಪಳ, ರಾಯಚೂರು, ದಾವಣಗೆರೆ ಹಾಗೂ ಯಾದಗಿರಿ ಸೇರಿದಂತೆ ವಿವಿಧ ಜಿಲ್ಲೆಗಳ ಮಾರ್ಗದ ಬಸ್‌ಗಳಿಗೆ ಭಾರಿ ಬೇಡಿಕೆ ಸೃಷ್ಟಿಯಾಗಿದೆ.

ಪ್ರಯಾಣಿಕರ ಹೆಚ್ಚಿದ ದಟ್ಟಣೆಯನ್ನು ನಿಭಾಯಿಸಲು ಕೆಎಸ್‌ಆರ್‌ಟಿಸಿ, ಎನ್‌ಡಬ್ಲ್ಯೂಕೆಆರ್‌ಟಿಸಿ ಹಾಗೂ ಕೆಕೆಆರ್‌ಟಿಸಿ ಹೆಚ್ಚುವರಿ ಬಸ್‌ಗಳನ್ನು ನಿಯೋಜಿಸಿವೆ. ಮೆಜೆಸ್ಟಿಕ್‌ನ ಟರ್ಮಿನಲ್-1 ಸೇರಿದಂತೆ ಪ್ರಮುಖ ಬಸ್ ನಿಲ್ದಾಣಗಳಲ್ಲಿ ಹೆಚ್ಚುವರಿ ಸೇವೆ ಕಲ್ಪಿಸಲಾಗಿದೆ.

## ರಾಜೀವ್ ಗಾಂಧಿ ದೂರದೃಷ್ಟಿಯ ಮಹಾನ್ ನಾಯಕ: ಸಿಎಂ

● ವಿಕ್ರಮ ವಾಹಿನಿ | ಶ್ರೀಪೆರಂಬದೂರು



ದೇಶದಲ್ಲಿ ಹಲವು ನಾಯಕರನ್ನು ರೂಪಿಸಿದ ದೂರದೃಷ್ಟಿಯ ನಾಯಕ ಹಾಗೂ ಯುವಜನರ ಮೇಲೆ ಅಪಾರ ನಂಬಿಕೆ ಹೊಂದಿದ್ದ ರಾಜೀವ್ ಗಾಂಧಿ ಅವರ ಸಿದ್ಧಾಂತ ಮತ್ತು ನಾಯಕತ್ವ ಇಂದಿಗೂ ಜೀವಂತವಾಗಿದೆ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದರು.

ರಾಜೀವ್ ಗಾಂಧಿ ಅವರ ಜನ್ಮದಿನದ ಹಿನ್ನೆಲೆಯಲ್ಲಿ ಶ್ರೀಪೆರಂಬದೂರಿನಲ್ಲಿರುವ ಅವರ ಸ್ಮಾರಕಕ್ಕೆ ಭೇಟಿ ನೀಡಿ ಗೌರವ ಸಲ್ಲಿಸಿದ ಬಳಿಕ ಮಾತನಾಡಿದ ಅವರು, ರಾಜೀವ್ ಗಾಂಧಿ ಅವರೊಂದಿಗೆ ತಮ್ಮ ಭಾವನಾತ್ಮಕ ನಂಟನ್ನು ಹಂಚಿಕೊಂಡರು. ಕಳೆದ 15 ವರ್ಷಗಳಿಂದ ನಿರಂತರವಾಗಿ ಸ್ಮಾರಕಕ್ಕೆ ಭೇಟಿ ನೀಡುತ್ತಿರುವುದಾಗಿ ತಿಳಿಸಿದರು.

**ಯುವಜನರ ಮೇಲಿತ್ತು ಅಪಾರ ನಂಬಿಕೆ**

ರಾಜೀವ್ ಗಾಂಧಿ ಅವರು ಯುವಜನರು ಮತ್ತು ವಿದ್ಯಾರ್ಥಿಗಳ ಮೇಲೆ ಅಪಾರ ವಿಶ್ವಾಸ ಹೊಂದಿದ್ದರು. ಅವರ ಅವಧಿಯಲ್ಲಿ ಮತದಾನದ ವಯಸ್ಸನ್ನು 21ರಿಂದ 18 ವರ್ಷಕ್ಕೆ ಇಳಿಸುವ ಮೂಲಕ ಯುವಜನರಿಗೆ ದೇಶದ ಪ್ರಜಾಪ್ರಭುತ್ವದಲ್ಲಿ ಹೆಚ್ಚಿನ ಪಾತ್ರ ನೀಡಲಾಯಿತು. ಅವರ ವಿಚಾರಗಳಿಂದಲೇ ಅನೇಕ ನಾಯಕರು ರೂಪುಗೊಂಡಿದ್ದು, ಅವರ ಪರಂಪರೆಯನ್ನು ಮುಂದುವರಿಸುವುದು ನಮ್ಮ ಕರ್ತವ್ಯ ಎಂದು ಶಿವಕುಮಾರ್ ಹೇಳಿದರು.

ಗಾಂಧಿ ಕುಟುಂಬ ಅಧಿಕಾರದಲ್ಲಿದ್ದರೂ ಇಲ್ಲದಿದ್ದರೂ ದೇಶವನ್ನು ಮುನ್ನಡೆಸಿದೆ. ಜವಾಹರಲಾಲ್ ನೆಹರೂ, ಇಂದಿರಾ ಗಾಂಧಿ ಹಾಗೂ ರಾಜೀವ್ ಗಾಂಧಿ ದೇಶಕ್ಕಾಗಿ ತ್ಯಾಗ ಮಾಡಿದ್ದಾರೆ. ಕಾಂಗ್ರೆಸ್‌ನ ಇತಿಹಾಸ ದೇಶದ ಇತಿಹಾಸದೊಂದಿಗೆ ಬೆಸೆದುಕೊಂಡಿದ್ದು, ಈ ಕುಟುಂಬದ ದೇಶಕ್ಕೆ ನೀಡಿದ ಕೊಡುಗೆಗೆ ಸರಿಸಾಟಿಯಿಲ್ಲ ಎಂದು ಅವರು ಹೇಳಿದರು.

ರಾಜೀವ್ ಗಾಂಧಿ ಅವರ ಸ್ಮಾರಕ ನಿರ್ಮಾಣದ ಸಂದರ್ಭದಲ್ಲಿ ಸೇವೆ ಸಲ್ಲಿಸುವ ಅವಕಾಶ ತಮಗೆ ದೊರೆತಿತ್ತು. ಸ್ಮಾರಕದಲ್ಲಿರುವ ಗ್ರಾನೈಟ್ ಏಕಶಿಲೆಯನ್ನು ಕನಕಪುರದ ಕ್ವಾರಿಯಿಂದ ತರಿಸಲಾಗಿತ್ತು ಎಂದು ಶಿವಕುಮಾರ್ ಸ್ಮರಿಸಿದರು.

ಕ್ಷೇತ್ರ ಮರುವಿಂಗಡಣೆ ಕುರಿತು ಮಾತನಾಡಿದ ಶಿವಕುಮಾರ್, ದಕ್ಷಿಣ ರಾಜ್ಯಗಳ ಒಗ್ಗಟ್ಟಿನ ಬೇಡಿಕೆಯಂತೆ ಮುಂದಿನ ಕ್ಷೇತ್ರ ಮರುವಿಂಗಡಣೆಯನ್ನು 1971ರ ಜನಗಣತಿ ಆಧಾರದ ಮೇಲೆ ನಡೆಸಬೇಕು. ರಾಜಕಾರಣಿಗಳು ಮುಂಚಿತವಾಗಿಯೇ ದೊಡ್ಡ ರಾಜಕೀಯ ಚರ್ಚೆಗಳಲ್ಲಿ ತೊಡಗುವುದಕ್ಕಿಂತ ರಾಷ್ಟ್ರ ನಿರ್ಮಾಣದ ಮೂಲಭೂತ ಕಾರ್ಯಗಳಿಗೆ ಆದ್ಯತೆ ನೀಡಬೇಕು ಎಂದು ಹೇಳಿದರು.

ತಮಿಳುನಾಡು ಮುಖ್ಯಮಂತ್ರಿ ವಿಜಯ್ ಅವರನ್ನು ಪ್ರಧಾನಿ ಅಭ್ಯರ್ಥಿಯಾಗಿ ಬಿಂಬಿಸಲಾಗುತ್ತಿದೆ ಎಂಬ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಇಂತಹ ಚರ್ಚೆಗಳಿಗಿಂತ ದೇಶ ಕಟ್ಟುವ ಕಾರ್ಯಕ್ಕೆ ನಾಯಕರು ಗಮನಹರಿಸಬೇಕು ಎಂದು ತಿಳಿಸಿದರು.

## ಆರೋಗ್ಯ ಇಲಾಖೆಯಿಂದ ರೇಲ್ವೆ ಘಟಕಗಳಲ್ಲಿ ಆಹಾರ ತಪಾಸಣೆ

● ವಿಕ್ರಮ ವಾಹಿನಿ | ಬೆಂಗಳೂರು




ರೈಲ್ವೆ ಆವರಣದಲ್ಲಿರುವ ಹೋಟೆಲ್‌ಗಳು ಮತ್ತು ಇತರ ಆಹಾರ ಸಂಸ್ಥೆಗಳಲ್ಲಿ ಆಹಾರದ ಗುಣಮಟ್ಟ ಮತ್ತು ಸುರಕ್ಷತೆ, ಆಹಾರ ಸಂಗ್ರಹಣೆ ಪದ್ಧತಿಗಳು, ಲೇಬಲಿಂಗ್ ಮತ್ತು ಆಹಾರ ನಿರ್ವಹಣಾ ಪದ್ಧತಿಗಳನ್ನು ಪರಿಶೀಲಿಸುವ ಉದ್ದೇಶದಿಂದ ಇಂದು ಗುರುವಾರ ವಿಶೇಷ ತಪಾಸಣೆ ಅಭಿಯಾನವನ್ನು ನಡೆಸಲಾಯಿತು.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಚಿವರಾಗಿರುವ ಯು.ಟಿ.ಖಾದರ್ ಅವರ ಸೂಚನೆಯ ಮೇರೆಗೆ ಕಳೆದ ಕೆಲ ದಿನಗಳಿಂದ ಆಹಾರ ಘಟಕಗಳ ಮೇಲೆ ದಾಳಿ ನಡೆಸಿ, ಖಾದ್ಯಗಳ ಗುಣಮಟ್ಟ ಮತ್ತು ಆಹರೋತ್ಪನ್ನಗಳನ್ನು ಶೋಧಿಸುತ್ತಿದ್ದಾರೆ. ಈಗಾಗಲೇ ಜಿರಳೆ, ಹಳಸಿದ ಪದಾರ್ಥಗಳು, ಇಲಿಗಳು ಕೂಡ ದಾಳಿಯ ವೇಳೆ ಕಂಡು ಬಂದಿವೆ. ಚಿಕನ್, ಮಟನ್, ಮೀನು ಮಾಂಸಗಳನ್ನು ತಿಂಗಳಾನುಗಟ್ಟಲೆ ಶೇಖರಣೆ ಮಾಡಿ ಹಳಸಿದ ಮತ್ತು ಫ್ರಿಜ್ ನಲ್ಲಿರಿಸಿ, ಅದನ್ನೇ ಗ್ರಾಹಕರಿಗೆ ತಿನ್ನಲು ಕೊಡುತ್ತಿದ್ದ ಹೋಟೆಲ್ ಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ. ಇಂದು ರೇಲ್ವೆ ಇಲಾಖೆಯ ಎಲ್ಲ ರೈಲುಗಳನ್ನು ಶೋಧಿಸಿದ ಅಧಿಕಾರಿಗಳು ಯಶವಂತಪುರ, ಕೆ.ಆರ್. ಪುರಂ, ಯಲಹಂಕ, ಕೋಲಾರ, ಮೈಸೂರು, ಹಾವೇರಿ, ಉಡುಪಿ, ಕೊಪ್ಪಳ, ಗದಗ, ದಾವಣಗೆರೆ, ಬಾಗಲಕೋಟೆ, ಕಾರವಾರ, ಯಾದಗಿರಿ, ಬೀರೂರು ಮತ್ತು ಕಡೂರು ಜಂಕ್ಷನ್, ಬಳ್ಳಾರಿ, ಹೊಸಪೇಟೆ, ಹುಬ್ಬಳ್ಳಿ ಮತ್ತು ಮಂಗಳೂರಿನಲ್ಲಿ ಒಟ್ಟು 36 ರೈಲು ನಿಲ್ದಾಣಗಳು ಮತ್ತು 112 ಆಹಾರ ಸಂಸ್ಥೆಗಳನ್ನು ಅಂದರೆ ರೈಲ್ವೇ ಪ್ಯಾಂಟ್ರಿ ರೈಲ್ವೆ ಕ್ಯಾಂಟೀನ್ ರೈಲ್ವೆ ನಿಲ್ದಾಣದಲ್ಲಿ ಹೋಟೆಲ್ ಪರಿಶೀಲಿಸಿದ್ದಾರೆ. 112 ಆಹಾರ ಸಂಸ್ಥೆಗಳನ್ನು ಜಾಲಾಡಿದ್ದು ಸ್ವಚ್ಛತೆ ಮತ್ತು ನೈರ್ಮಲ್ಯ ಇಲ್ಲದಿರುವುದು ಕಂಡು ಬಂದಿದೆ.

ಮಂಗಳೂರು-ಕೇರಳ ಮತ್ತು ಹುಬ್ಬಳ್ಳಿ-ಬೆಂಗಳೂರು ನಡುವಿನ ವಂದೇ ಭಾರತ್ ರೈಲಿನಲ್ಲಿ ಸ್ವಚ್ಛತೆ ಮತ್ತು ನೈರ್ಮಲ್ಯವನ್ನು ಕಾಯ್ದುಕೊಳ್ಳಲಾಗಿದೆ. ಆಹಾರ ಉತ್ಪನ್ನಗಳಲ್ಲಿ ಅನುಮತಿಯಿಲ್ಲದ ಕೃತಕ ಬಣ್ಣಗಳ ಬಳಕೆ ಕಂಡುಬಂದಿದೆ. ಜಿಲೇಬಿಯಲ್ಲಿ ಹಳದಿ ಬಣ್ಣವನ್ನು ಮತ್ತು ಖೋವಾ ಪೇಡಾದಲ್ಲಿ ಗುಲಾಬಿ ಬಣ್ಣವನ್ನು ಬಳಸಿರುವುದು ಕಂಡುಬಂದಿದೆ. ಹಾವೇರಿ ಜಿಲ್ಲೆಯ ರೈಲು ನಿಲ್ದಾಣದಲ್ಲಿ ಅವಧಿ ಮೀರಿದ ನಂದಿನಿ ಮೊಸರು ಮತ್ತು ದೋಡ್ಲಾ ಪ್ರಮಾಣೀಕೃತ ಹಾಲಿನ ಪ್ಯಾಕೆಟ್‌ಗಳು ಕಂಡುಬಂದಿವೆ. ಕೆ.ಆರ್. ಪುರಂ ರೈಲು ನಿಲ್ದಾಣದಲ್ಲಿರುವ ಹೋಟೆಲ್ ಇಲ್ಲಿ ಅನೈರ್ಮಲ್ಯತೆಯಿಂದ ಕೂಡಿದೆ. ಮೈಸೂರು ರೈಲು ನಿಲ್ದಾಣದಲ್ಲಿ, ಪ್ಲಾಸ್ಟಿಕ್ ವಸ್ತುಗಳನ್ನು ಬಳಸಿ ಇಡ್ಲಿಗಳನ್ನು ತಯಾರಿಸುತ್ತಿರುವುದು ಕಂಡುಬಂದಿದೆ. ಮೈಸೂರಿನಲ್ಲಿ ಅಡುಗೆಮನೆಯಲ್ಲಿ ಅವಧಿ ಮೀರಿದ ಆಹಾರ ಪದಾರ್ಥಗಳು ಕಂಡುಬಂದಿವೆ. ಈರುಳ್ಳಿ ಮತ್ತು ತರಕಾರಿಗಳ ಮೇಲೆ ಶಿಲೀಂಧ್ರಗಳ ಬೆಳವಣಿಗೆಯನ್ನು ಗಮನಿಸಲಾಗಿದೆ. ಆಹಾರ ಸಂಗ್ರಹಣೆಗೆ ಸೂಕ್ತವಲ್ಲದ ಪ್ಲಾಸ್ಟಿಕ್ ಬಕೆಟ್‌ಗಳಲ್ಲಿ ಚಟ್ನಿ ಸಂಗ್ರಹಿಸಿರುವುದು ಕಂಡುಬಂದಿದೆ. ಇದರಿಂದ ಪ್ರಯಾಣಿಕರ ಆರೋಗ್ಯದ ಮೇಲೆ ವ್ಯತಿರಿಕ್ತ ಪರಿಣಾಮ ಬೀರುತ್ತಿದೆ.

ಇಂತಹ ಉಪಹಾರ, ಊಟೋಪಚಾರದ ಕುರಿತು ಪ್ರಯಾಣಿಕರು ಎಚ್ಚರಿಕೆಯಿಂದ ಇರುವುದು ಒಳಿತು ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ತಿಳಿಸಿದೆ.

## ಬರಗಾಲದಲ್ಲೂ ಹೂ ಬೆಳೆಗಾರರಿಗೆ ಭಾಗ್ಯಲಕ್ಷ್ಮಿ

● ವಿಕ್ರಮ ವಾಹಿನಿ | ಕೋಲಾರ

ಬರಗಾಲದ ಸಂಕಷ್ಟದ ನಡುವೆಯೇ ಬಂದಿರುವ ವರಮಹಾಲಕ್ಷ್ಮಿ ಹಬ್ಬ ಕೋಲಾರದ ಹೂವು ಬೆಳೆಗಾರರಿಗೆ ಕೊಂಚ ನೆಮ್ಮದಿ ತಂದಿದೆ. ಹಬ್ಬದ ಹಿನ್ನೆಲೆಯಲ್ಲಿ ಹೂವಿಗೆ ಭಾರಿ ಬೇಡಿಕೆ ಸೃಷ್ಟಿಯಾಗಿದ್ದು, ಮಾರುಕಟ್ಟೆಯಲ್ಲಿ ದರ ಗಗನಕ್ಕೇರಿದೆ. ಇದರಿಂದ ಹೂವು ಬೆಳೆದ ರೈತರು ಸಂತಸಗೊಂಡಿದ್ದರೆ, ಬೆಲೆ ಏರಿಕೆಯಿಂದ ಗ್ರಾಹಕರು ಕಂಗಾಲಾಗಿದ್ದಾರೆ.

ಹಬ್ಬಕ್ಕೆ ಒಂದು ದಿನ ಬಾಕಿ ಇರುವಾಗಲೇ ಕೋಲಾರ ಮಾರುಕಟ್ಟೆಯಲ್ಲಿ ಹೂವಿನ ದರ ಭಾರಿ ಏರಿಕೆಯಾಗಿದೆ. ಕೆಲ ದಿನಗಳ ಹಿಂದೆ ಕೆ.ಜಿ.ಗೆ ರೂ 80ರಿಂದ ರೂ 100ರಷ್ಟಿದ್ದ ಹೂವಿನ ಬೆಲೆ ಇದೀಗ ಹಲವು ಪಟ್ಟು ಹೆಚ್ಚಾಗಿದೆ.

ಕನಕಾಂಬರ ಕೆ.ಜಿ.ಗೆ ಬರೋಬ್ಬರಿ ರೂ 4 ಸಾವಿರಕ್ಕೆ ಮಾರಾಟವಾಗುತ್ತಿದ್ದರೆ, ಮಲ್ಲಿಗೆ ರೂ 3 ಸಾವಿರದವರೆಗೆ ತಲುಪಿದೆ. ಸೇವಂತಿಗೆ, ಮಾರಿಗೋಲ್ಡ್, ಚೆಂಡುಹೂವು ಹಾಗೂ ಬಟನ್ಸ್ ರೋಜ್ ಸೇರಿದಂತೆ ಹಲವು ಹೂಗಳ ದರವೂ ರೂ 400ರಿಂದ ರೂ 500ರಷ್ಟಾಗಿದೆ. ಹಬ್ಬದ ಪೂಜೆ ಹಾಗೂ ಅಲಂಕಾರಕ್ಕೆ ಹೂ ಖರೀದಿಸಲು ಬಂದಿರುವ ಗ್ರಾಹಕರಿಗೆ ಈ ದರ ಏರಿಕೆ ದೊಡ್ಡ ಹೊರೆ ತಂದಿದೆ.

ಕೋಲಾರ ಜಿಲ್ಲೆಯಲ್ಲಿ ಮುಂಗಾರು ಮಳೆ ಕೈಕೊಟ್ಟಿರುವುದರಿಂದ ರೈತರು ಸಂಕಷ್ಟ ಎದುರಿಸುತ್ತಿದ್ದಾರೆ. ಮಳೆಯಾಶ್ರಿತ ರಾಗಿ, ಅವರೆ, ಅಲಸಂದೆ, ನೆಲಗಡಲೆ ಸೇರಿದಂತೆ ಹಲವು ಬೆಳೆಗಳಿಗೂ ಹೊಡೆತ ಬಿದ್ದಿದೆ. ಆದರೆ ಕೊಳವೆಬಾವಿ ಸೇರಿದಂತೆ ನೀರಾವರಿ ಸೌಲಭ್ಯ ಹೊಂದಿರುವ ಕೆಲವು ರೈತರು ಸೇವಂತಿಗೆ, ಚೆಂಡು, ಮಲ್ಲಿಗೆ ಹಾಗೂ ಸುಗಂಧರಾಜದಂತಹ ಹೂಗಳನ್ನು ಬೆಳೆದಿದ್ದಾರೆ.

ವರಮಹಾಲಕ್ಷ್ಮಿ ಹಬ್ಬದ ಹಿನ್ನೆಲೆಯಲ್ಲಿ ಹೂವಿಗೆ ಬೇಡಿಕೆ ಹೆಚ್ಚಾಗಿರುವುದರಿಂದ ಈ ಬೆಳೆಗಾರರಿಗೆ ಉತ್ತಮ ಬೆಲೆ ದೊರೆಯುತ್ತಿದೆ. ಹೀಗಾಗಿ ಬರಗಾಲದ ನಡುವೆಯೂ ಹೂ ಬೆಳೆದ ರೈತರ ಮೊಗದಲ್ಲಿ ಮಂದಹಾಸ ಮೂಡಿದೆ.

ಕನಕಾಂಬರ ಹಾಗೂ ಮಲ್ಲಿಗೆ ಹೂಗಳಿಗೆ ಕೋಲಾರ ಮಾತ್ರವಲ್ಲದೆ ತಮಿಳುನಾಡಿನ ಹಲವು ಪ್ರದೇಶಗಳಿಂದಲೂ ಪೂರೈಕೆ ಬರುತ್ತದೆ. ಆದರೆ ಈ ಬಾರಿ ಆ ಭಾಗಗಳಲ್ಲಿಯೂ ಉತ್ಪಾದನೆ ಕಡಿಮೆಯಾಗಿರುವುದು ಬೆಲೆ ಏರಿಕೆಗೆ ಪ್ರಮುಖ ಕಾರಣವಾಗಿದೆ.

Vikrama Vahini Kannada Daily, #204, Forest Layout, Jnanabharathi, Bangalore-560095
PRGI NO: KARKAN/2018/78481 vikramavahini@gmail.com
93535 91145
Printed by B.N. Murali Prasad, Published by Swarna Latha B.N., and Printed at Swarna Graphics, Forest Layout, Jnanabharathi, Bangalore -560059 and Published at Bangalore, Editor: B.N. Murali Prasad., Volume:9, Issue : 144,